ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 115
13–10–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 115

## ಸಂಪಾದಕೀಯ.....

### ಉಗ್ರ ಕೃತ್ಯಕ್ಕೆ ಮಹಿಳೆಯರನಿಳಿಸಿದ ಪಾಕ್ ಮಸೂದ್ ಅಜರ್‌ನ ಹೊಸ ಉಗ್ರ ಸಂಚು



ಭಾರತ–ಪಾಕಿಸ್ತಾನ ನಡುವಿನ ಸಂಬಂಧಗಳಲ್ಲಿ ಹೊಸ ಆತಂಕದ ಅಲೆ ಏರಿದೆ. ಪಾಕಿಸ್ತಾನ ಮೂಲದ ಉಗ್ರ ಸಂಘಟನೆ ಜೈಷ್ ಎ ಮೊಹಮ್ಮದ್ (ಜೆಇಎಂ) ಇದೀಗ ಹೊಸ ರೂಪದಲ್ಲಿ ಮತ್ತೆ ಚಟುವಟಿಕೆ ಪ್ರಾರಂಭಿಸಿದೆ. ಉಗ್ರನಾಯಕ ಮಸೂದ್ ಅಜರ್‌ನ ಸಹೋದರಿ ನಾದಿಯಾ ಅಜರ್ ನೇತೃತ್ವದಲ್ಲಿ ಮಹಿಳೆಯರನ್ನೇ ಒಳಗೊಂಡ 'ಜಮಾತ್ ಉಲ್ ಮೊಮಿನಾತ್' ಎಂಬ ಸಂಘಟನೆಯನ್ನು ರಚಿಸಿರುವುದು ಭಯೋತ್ಪಾದನೆಯ ನವತಂತ್ರದ ಮುಖವನ್ನು ತೆರೆದಿದೆ.

2001ರ ಸಂಸತ್ ದಾಳಿ, 2019ರ ಪುಲ್ವಾಮಾ ದಾಳಿ ಸೇರಿದಂತೆ ಭಾರತದಲ್ಲಿ ನಡೆದ ಅನೇಕ ಭಯೋತ್ಪಾದನಾ ಕೃತ್ಯಗಳ ಹಿಂದಿರುವ ಜೈಷ್ ಎ ಮೊಹಮ್ಮದ್, ಇತ್ತೀಚಿನ ವರ್ಷಗಳಲ್ಲಿ ನಿಶ್ಯಬ್ದವಾಗಿತ್ತು. ಆದರೆ ಭಾರತೀಯ ಸೇನೆಯ ಆಪರೇಷನ್ ಸಿಂಧೂರ ದಾಳಿಯಿಂದಾಗಿ ಪಾಕಿಸ್ತಾನದ ದಕ್ಷಿಣ ಪಂಜಾಬ್ ಪ್ರದೇಶದ ಬಹಾವಲ್ಪುರದಲ್ಲಿದ್ದ ಜೆಇಎಂ ಕಚೇರಿ ಸಂಪೂರ್ಣ ನಾಶವಾದ ಬಳಿಕ, ಸಂಘಟನೆ ತನ್ನ ಚಟುವಟಿಕೆಯನ್ನು ಪುನಃ ಚುರುಕುಗೊಳಿಸಲು ಹೊಸ ಮಾರ್ಗ ಹಿಡಿದಂತಾಗಿದೆ.

ಜೆಇಎಂ ಹಿಂದಿನಿಂದಲೂ ಪುರಾತನ ಉಗ್ರ ಸಂಘಟನೆಗಳಂತೆಯೇ ಪುರುಷ ಕಮಾಂಡೋಗಳೇ ಕಾರ್ಯನಿರ್ವಹಿಸುತ್ತಿದ್ದರು. ಆದರೆ ಈಗ ಮಹಿಳೆಯರನ್ನೇ ಬಳಸುವ ಹೊಸ ತಂತ್ರವನ್ನು ಅಳವಡಿಸಿಕೊಂಡಿದೆ. "ಜಮಾತ್ ಉಲ್ ಮೊಮಿನಾತ್" ಹೆಸರಿನ ಘಟಕವು ಮಹಿಳೆಯರನ್ನು ಧಾರ್ಮಿಕ ಕಾರ್ಯ, ಶಿಕ್ಷಣ, ಸಾಮಾಜಿಕ ಸೇವೆ ಎಂಬ ಮುಖವಾಡದಲ್ಲಿ ನೇಮಕಮಾಡುತ್ತಿದೆ. ಇವುಗಳಲ್ಲಿ ಬಹುತೇಕರು ಉಗ್ರ ಕಮಾಂಡೋಗಳ ಪತ್ನಿಯರು ಅಥವಾ ಆರ್ಥಿಕವಾಗಿ ಹಿಂದುಳಿದ ವರ್ಗದ ಮಹಿಳೆಯರು. ಅವರಿಗೆ 'ಧಾರ್ಮಿಕ ಸೇವೆ' ಹೆಸರಿನಲ್ಲಿ ತರಬೇತಿ ನೀಡಲಾಗುತ್ತಿದೆ. ಈ ತರಬೇತಿಯಲ್ಲಿ ಸೈಬರ್ ಪ್ರಚಾರ, ಹಣ ಸಂಗ್ರಹಣೆ, ಸಂವಹನ ಜಾಲ ಮತ್ತು ಕೆಲವೊಮ್ಮೆ ಶಸ್ತ್ರೋಪಯೋಗವೂ ಸೇರಿದೆ ಎನ್ನುವುದು ಮಾಹಿತಿ ಸಂಸ್ಥೆಗಳ ವರದಿ.

ಮಹಿಳೆಯರನ್ನು ಒಳಪಡಿಸುವ ತಂತ್ರವು ಉಗ್ರತೆಯ ಹೊಸ ತಿರುವು. ಸಾಮಾನ್ಯವಾಗಿ ಮಹಿಳೆಯರ ವಿರುದ್ಧ ಶಂಕೆ ಕಡಿಮೆ ಇರುವುದರಿಂದ ಗಡಿ ದಾಟುವ, ಹಣ ವರ್ಗಾವಣೆ ಅಥವಾ ಸಂದೇಶ ಸಾಗಣೆ ಕಾರ್ಯಗಳು ಸುಲಭವಾಗುತ್ತವೆ. ಇದೇ ಕಾರಣಕ್ಕೆ ಜೆಇಎಂ ಈಗ ಮಹಿಳೆಯರನ್ನೇ 'ತಂತ್ರಜ್ಞಾನ ಯುದ್ಧದ ಸೈನ್ಯ'ವಾಗಿ ರೂಪಿಸುತ್ತಿದೆ.

ಭಾರತೀಯ ಸೇನೆಯು ಪಾಕಿಸ್ತಾನದ ನೆಲದೊಳಗೆ 100 ಕಿ.ಮೀ ಒಳಗೆ ನುಗ್ಗಿ ನಡೆಸಿದ ಆಪರೇಷನ್ ಸಿಂಧೂರ ಜೆಇಎಂಗೆ ಭಾರೀ ಹೊಡೆತ ನೀಡಿತ್ತು. ಮಸೂದ್ ಅಜರ್‌ನ ಬಂಧುಗಳು ಸೇರಿದಂತೆ ಅನೇಕ ಉಗ್ರರು ಅಲ್ಲಿ ಹತ್ಯೆಯಾದರು. ಈ ಘಟನೆಯ ನಂತರ ಸಂಘಟನೆಯೊಳಗೆ ಪ್ರತೀಕಾರದ ಕಿಡಿ ಹೊತ್ತಿಕೊಂಡಿದೆ. ನಾದಿಯಾ ಅಜರ್ ಈ ಕೋಪವನ್ನು ಪ್ರಚಾರ ಶಕ್ತಿಯಾಗಿ ಬಳಸಿಕೊಳ್ಳುತ್ತಿದ್ದು, 'ಭಾರತ ವಿರೋಧಿ ಪವಿತ್ರ ಯುದ್ಧ' ಎಂಬ ಹೆಸರಿನಲ್ಲಿ ಮಹಿಳೆಯರನ್ನು ಭಾವನಾತ್ಮಕವಾಗಿ ಉಗ್ರಗೊಳಿಸುತ್ತಿದ್ದಾಳೆ.

ಭಾರತದ ಭದ್ರತಾ ಮೂಲಗಳ ಪ್ರಕಾರ, ಈ ಘಟಕವು ವಾಟ್ಸಾಪ್, ಟೆಲಿಗ್ರಾಂ, ಇನ್‌ಸ್ಟಾಗ್ರಾಮ್ ಮುಂತಾದ ಸಾಮಾಜಿಕ ಮಾಧ್ಯಮಗಳ ಮೂಲಕ ಯುವತಿಯರನ್ನು ಸಂಪರ್ಕಿಸುತ್ತಿದೆ. "ಧಾರ್ಮಿಕ ಸೇವೆ", "ಇಸ್ಲಾಮಿಕ್ ಹೆಮ್ಮೆ", "ಸಹೋದರತ್ವ" ಮುಂತಾದ ಭಾವನಾತ್ಮಕ ವಿಷಯಗಳ ಮೂಲಕ ಪ್ರೇರೇಪಣೆ ನಡೆಯುತ್ತಿದೆ. ಈ ಪ್ರಚಾರ ಕೇವಲ ಪಾಕಿಸ್ತಾನದಲ್ಲೇ ಅಲ್ಲ, ಭಾರತದಲ್ಲಿಯೂ ? ವಿಶೇಷವಾಗಿ ಜಮ್ಮು?ಕಾಶ್ಮೀರ, ಉತ್ತರಪ್ರದೇಶ ಹಾಗೂ ದಕ್ಷಿಣ ಭಾರತದ ಕೆಲವು ಭಾಗಗಳಲ್ಲಿ ಕಾಣಿಸಿಕೊಂಡಿದೆ.

ಈ ಸಮಯದಲ್ಲೇ ಸಿಯಾಲ್‌ಕೋಟ್ ಗಡಿಯ ಬಳಿಯಲ್ಲಿ ಪಾಕಿಸ್ತಾನ ಸೇನೆಯ ಚಟುವಟಿಕೆಗಳು ಹೆಚ್ಚಿರುವುದು ಗಮನಾರ್ಹ. ಹೊಸ ಟ್ಯಾಂಕ್ ಘಟಕಗಳ ನಿಯೋಜನೆ, ಶಸ್ತ್ರಸಜ್ಜಿತ ಪಡೆಗಳ ಸಂಚಲನ, ಹಾಗೂ ಕಮಾಂಡೋ ತರಬೇತಿಗಳ ಚಲನವಲನಗಳು ಉಗ್ರ ಸಂಘಟನೆಗಳಿಗೆ ಸೇನಾ ಬೆಂಬಲವಿರುವ ಸೂಚನೆ ನೀಡುತ್ತಿವೆ. ಪಾಕಿಸ್ತಾನ ಸರ್ಕಾರವು ಉಗ್ರ ಸಂಘಟನೆಗಳನ್ನು ತನ್ನ ರಾಜಕೀಯ ಹಿತಾಸಕ್ತಿಯ ಉಪಕರಣವಾಗಿ ಬಳಸುತ್ತಿರುವುದು ರಹಸ್ಯವಲ್ಲ.

ಭಾರತವು 1971ರ ಯುದ್ಧದಿಂದ ಹಿಡಿದು ಕಾರ್ಗಿಲ್‌ವರೆಗೂ ಪಾಕಿಸ್ತಾನದ ಈ ನಾಟಕವನ್ನು ನೋಡಿದೆ. ಆದರೆ ಈಗ ಮಹಿಳಾ ಘಟಕ ಎಂಬ ಹೊಸ ಮಾದರಿ ರಾಷ್ಟ್ರ ಭದ್ರತೆಗೆ ಹೊಸ ರೀತಿಯ ಸವಾಲು ತಂದಿದೆ.

ಉಗ್ರ ಸಂಘಟನೆಗಳಲ್ಲಿ ಮಹಿಳೆಯರ ಪಾತ್ರ ಹೊಸದೇನಲ್ಲ. ಎಲ್‌ಟಿಟಿಇ, ಬೊಕೊ ಹರಾಮ್, ಹಮಾಸ್ ಮುಂತಾದ ಸಂಘಟನೆಗಳು ಮಹಿಳೆಯರನ್ನು ಆತ್ಮಹತ್ಯಾ ದಾಳಿಕೋರರಾಗಿ ಬಳಸಿಕೊಂಡಿದ್ದವು. ಆದರೆ ಜೆಇಎಂ ಅಥವಾ ಲಷ್ಕರ್ ಇ ತೊಯ್ಬಾ (ಎಲ್‌ಇಟಿ) ಎಂದಿಗೂ ಈ ಮಾರ್ಗವನ್ನು ಹಿಡಿದಿರಲಿಲ್ಲ. ಇಂದಿನ ಬದಲಾವಣೆ ಉಗ್ರತೆಯ ತಂತ್ರಜ್ಞಾನ ಮತ್ತು ಮಾನವ ಸಂಪನ್ಮೂಲ ಎರಡರಲ್ಲಿಯೂ ಹೊಸ ತಿರುವು. ಸಾಮಾಜಿಕ ಮಾಧ್ಯಮಗಳ ಯುಗದಲ್ಲಿ ಮಹಿಳೆಯರ ಮುಖವಾಡ ಉಗ್ರತೆಯ ಪ್ರಚಾರದ ಅತ್ಯಂತ ಪರಿಣಾಮಕಾರಿ ರೂಪವಾಗಿ ಪರಿಣಮಿಸಿದೆ.

ಈ ಬೆಳವಣಿಗೆ ಭಾರತಕ್ಕೆ ಹೊಸ ರೀತಿಯ ಭದ್ರತಾ ಸವಾಲು ತಂದಿದೆ. ಮಹಿಳೆಯರನ್ನು ಒಳಗೊಂಡ ಉಗ್ರ ಚಟುವಟಿಕೆಗಳು ತನಿಖೆಯಲ್ಲಿ ನೈತಿಕ ಮತ್ತು ಕಾನೂನುಬದ್ಧ ಅಡ್ಡಿಗಳನ್ನು ಉಂಟುಮಾಡುತ್ತವೆ. ಮಹಿಳೆಯರ ಹಕ್ಕು, ಧಾರ್ಮಿಕ ಸ್ವಾತಂತ್ರ್ಯ, ಸಾಮಾಜಿಕ ಭಾವನೆ ? ಈ ಅಂಶಗಳ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳುವುದು ಕಷ್ಟಕರ. ಅದಕ್ಕಾಗಿಯೇ ತಂತ್ರಜ್ಞಾನಾಧಾರಿತ ನಿಗಾವ್ಯವಸ್ಥೆ ಬಲಪಡಿಸುವುದು, ಸಾಮಾಜಿಕ ಮಾಧ್ಯಮಗಳ ಮೇಲೆ ನಿಗಾವಹಿಸುವುದು ಹಾಗೂ ಅತಿರೇಕ ವಿರೋಧಿ ಶಿಕ್ಷಣ ಕಾರ್ಯಕ್ರಮಗಳನ್ನು ಗ್ರಾಮ, ಶಾಲೆ, ಕಾಲೇಜು ಮಟ್ಟದಲ್ಲಿ ಆರಂಭಿಸುವುದು ಅಗತ್ಯವಾಗಿದೆ.

ಭದ್ರತಾ ಸಂಸ್ಥೆಗಳು ಸೈಬರ್ ಕ್ರೈಮ್ ಘಟಕಗಳ ಸಹಾಯದಿಂದ ಈ ಘಟಕದ ಆನ್‌ಲೈನ್ ಹಣಕಾಸು ಮಾರ್ಗಗಳನ್ನು ಪತ್ತೆಹಚ್ಚಬೇಕು. ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಉಗ್ರ ಪ್ರಚಾರಕ್ಕೆ ತಕ್ಷಣ ತಡೆಗಟ್ಟುವ ಕ್ರಮ ಕೈಗೊಳ್ಳಬೇಕು.

ಉಗ್ರಸಂಘಟನೆಗಳು ಮಹಿಳೆಯರ ಭಾವನೆಯನ್ನು ದುರುಪಯೋಗಪಡಿಸಿಕೊಳ್ಳುತ್ತಿವೆ. ಧರ್ಮದ ಹೆಸರಿನಲ್ಲಿ ನಡೆಯುತ್ತಿರುವ ಅತಿರೇಕವನ್ನು ನಿಲ್ಲಿಸಲು ಸಮಾಜದ ಎಲ್ಲ ವರ್ಗಗಳು ಮುಂದೆ ಬರಬೇಕು. ಧಾರ್ಮಿಕ ನಾಯಕರಿಂದ ಹಿಡಿದು ಶಿಕ್ಷಣ ಸಂಸ್ಥೆಗಳವರೆಗೂ ? "ಶಾಂತಿ ಮತ್ತು ಸಹಜೀವನ" ಎಂಬ ಸಂದೇಶವನ್ನು ಬಲಪಡಿಸುವ ಕೆಲಸ ನಡೆಯಬೇಕು.

ಮಹಿಳೆಯರನ್ನು ಉಗ್ರತೆಯ ಬಲಿಯಾಗಿ ಮಾಡುವ ಬದಲು ರಾಷ್ಟ್ರ ನಿರ್ಮಾಣದ ಸಹಯೋಗಿಯಾಗಿ ರೂಪಿಸುವುದು ಸಮಾಜದ ಜವಾಬ್ದಾರಿ.

ಮಸೂದ್ ಅಜರ್‌ನ ಸಹೋದರಿ ನಾದಿಯಾ ಅಜರ್ ನೇತೃತ್ವದ ಮಹಿಳಾ ಘಟಕ 'ಜಮಾತ್ ಉಲ್ ಮೊಮಿನಾತ್' ಪಾಕಿಸ್ತಾನ ಪ್ರೇರಿತ ಉಗ್ರತೆಯ ಹೊಸ ಅಧ್ಯಾಯ. ಈ ಘಟಕದ ಉದ್ದೇಶ ಸ್ಪಷ್ಟ ? ಭಾರತದೊಳಗೆ ಅಶಾಂತಿ ಸೃಷ್ಟಿಸುವುದು, ಸಾಮಾಜಿಕ ವಿಭಜನೆ ಉಂಟುಮಾಡುವುದು, ಮತ್ತು ಮನೋಯುದ್ಧದ ಮೂಲಕ ಭಯದ ವಾತಾವರಣ ನಿರ್ಮಾಣ ಮಾಡುವುದು.

ಭಾರತವು ಈಗ ಎಚ್ಚರವಾಗಿರಬೇಕು. ಸೈನಿಕ ಶಕ್ತಿ ಮಾತ್ರವಲ್ಲ, ಸೈಬರ್ ಬಲ, ಸಾಮಾಜಿಕ ಜಾಗೃತಿ ಮತ್ತು ಮಹಿಳಾ ಶಿಕ್ಷಣವೂ ಉಗ್ರತೆಯ ವಿರುದ್ಧದ ಅತ್ಯಂತ ಪರಿಣಾಮಕಾರಿ ಶಸ್ತ್ರ.

–ಮಲ್ಲಿಕಾರ್ಜುನ್ ಕಬ್ಬೂರು
ಸಂಪಾದಕರು

# ಶಾಸಕ ಮುನಿರತ್ನ ಧರಿಸಿದ್ದ ಆರ್‌ಎಸ್‌ಎಸ್ ಟೋಪಿ ಕಿತ್ತೆಸೆದ ಕಾಂಗ್ರೆಸ್ ಮುಖಂಡ

**ಬೆಂಗಳೂರು:** ಬೆಂಗಳೂರಿನ ಮತ್ತೀಕೆರೆಯ ಜೆಪಿ ಪಾರ್ಕ್ ನಲ್ಲಿ ನಡೆದ ಬೆಂಗಳೂರು ನಡಿಗೆ ಕಾರ್ಯಕ್ರಮದ ವೇಳೆ ದೊಡ್ಡ ಹೈಡ್ರಾಮಾ ನಡೆಯಿತು.

ನಿನ್ನೆ ಲಾಲ್ ಬಾಗ್ ನಲ್ಲಿ ಬೆಂಗಳೂರು ನಡಿಗೆ ಕಾರ್ಯಕ್ರಮ ಆರಂಭಿಸಿದ್ದ ಡಿಸಿಎಂ ಡಿಕೆ ಶಿವಕುಮಾರ್ ಇಂದು ಜೆಪಿ ಪಾರ್ಕ್ ನಲ್ಲಿ ಅಹವಾಲನ್ನು ಸ್ವೀಕರಿಸಿದರು. ಈ ವೇಳೆ ಅಲ್ಲಿಗೆ ಬಂದ ಬಿಜೆಪಿ ಶಾಸಕ ಮುನಿರತ್ನ ಸ್ಥಳೀಯ ಶಾಸಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿಲ್ಲ. ಕಾರ್ಯಕ್ರಮದ ಬ್ಯಾನರ್ ನಲ್ಲಿ ಶಾಸಕ ಹಾಗೂ ಸಂಸದರ ಫೋಟೋ ಹಾಕಿಲ್ಲ. ಇದು ಸರ್ಕಾರಿ ಕಾರ್ಯಕ್ರಮವೋ ಅಥವಾ



ಕಾಂಗ್ರೆಸ್ ಕಾರ್ಯಕ್ರಮವೋ ಎಂದು ಗ್ರೇಟರ್ ಬೆಂಗಳೂರು ಮುಖ್ಯ ಆಯುಕ್ತರನ್ನು ಮುನಿರತ್ನ ಪ್ರಶ್ನಿಸಿದರು. ಈ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಮುನಿರತ್ನ ವಿರುದ್ಧ ಘೋಷಣೆ ಕೂಗಿದರು. ಪರಿಸ್ಥಿತಿ ವಿಕೋಪಕ್ಕೆ ತಿರುಗಿ ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಕೈ ಕೈ ಮಿಲಾಯಿಸುವ ಹಂತಕ್ಕೆ ಹೋದರು. ಈ ವೇಳೆ ಮಧ್ಯ ಪ್ರವೇಶಿಸಿದ ಪೊಲೀಸರು ಮುನಿರತ್ನರನ್ನು ವೇದಿಕೆಯಿಂದ ಕರೆದುಕೊಂಡು ಹೋದರು. ಆ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ HMT ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಮಣ್ಣ ಎಂಬಾತ ಮುನಿರತ್ನ ಧರಿಸಿದ್ದ ಖಖಖ ಟೋಪಿಯನ್ನು ಕಿತ್ತೆಸೆದಿರುವ ಘಟನೆ ನಡೆದಿದ್ದು ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

# ಶರಣರ ವೃತ್ತಿಗಳು ಇಂದು ಜಾತಿಗಳಾಗಿರುವುದು ವಿಪರ್ಯಾಸ: ಎಂ.ಕೆ. ಲೋಕೇಶ್ವರಯ್ಯ ಅಭಿಮತ

**ದಾವಣಗೆರೆ:** ಮೋಳಿಗೆ ಮಾರಯ್ಯ, ಡೋಹಾರ ಕಕ್ಕಯ್ಯ, ಆಯ್ದಕ್ಕಿ ಮಾರಯ್ಯ, ಅಂಬಿಗರ ಚೌಡಯ್ಯನವರು ಕಾಯಕದಲ್ಲಿ ದೈವತ್ವವನ್ನು ಕಂಡವರು. ಆದರೆ ಪ್ರಸ್ತುತ ದಿನಮಾನಗಳಲ್ಲಿ ಅವು ವೃತ್ತಿ ಆಗಿರದೆ ಜಾತಿಯಾಗಿ ಬೆಳೆದಿರುವುದು ವಿಪರ್ಯಾಸವೆಂದು ನುಡಿದರು.

ಇಲ್ಲಿನ ತರಳಬಾಳು ಸೇವಾ ಟ್ರಸ್ಟ್ ಮತ್ತು ಶಿವಕುಮಾರ ಸ್ವಾಮಿ ಮಹಾಮಂಟಪ ಆಯೋಜಿಸಿದ್ದ ಶಿವ ಗೋಷ್ಠಿ ಯಲ್ಲಿ "ವಚನ ಸಾಹಿತ್ಯದಲ್ಲಿ ವೈಚಾರಿಕತೆ" ಕುರಿತುಚೆನ್ನಗಿರಿ ತಾಲೂಕು ಜಿ ಜೆ ಹಳ್ಳಿಮುಖ್ಯ ಶಿಕ್ಷಕ ಎಂ.ಕೆ. ಲೋಕೇಶ್ವರಯ್ಯ ಮಾತನಾಡಿದರು

ವಚನಕಾರರು ತಮ್ಮ ಕಾಯಕವನ್ನು ಗುರುತಿಸಲು ತಮ್ಮ ಹೆಸರಿನ ಆರಂಭದಲ್ಲಿ ವೃತ್ತಿ ಹೆಸರನ್ನು ಹೆಸರಿಸಿಕೊಂಡರು. ಆ ಮೂಲಕ ಶರಣರು ಸಮಾಜದಲ್ಲಿ ತಮ್ಮನ್ನು ಪರಿಚಯಿಸಿಕೊಂಡರು. ಸಮಾಜದಲ್ಲಿದ್ದ ಮೌಢ್ಯಆಚರಣೆಗಳನ್ನು ಖಂಡಿಸಿ ಸ್ವಸ್ಥ ಸಮಾಜದ ನಿರ್ಮಾಣಕ್ಕೆ ಮುಂದಾದರು ಇದನ್ನೇ ಲಿಂಗೈಕ್ಯ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರು ಬಸವ ತತ್ವದಲ್ಲಿ ಅಪಾರ ವಿಶ್ವಾಸ ಹೊಂದಿ ಸಮ ಸಮಾಜ ನಿರ್ಮಾಣ ಮಾಡಲು ದಿಟ್ಟ ಹೆಜ್ಜೆ ಇರಿಸಿದರು ಅವರು ಹೊಟ್ಟೆಯಿದ್ದವನು ಉಣ್ಣಬೇಕು, ರಟ್ಟೆ ಇದ್ದವನು ದುಡಿಯಬೇಕು, ನೆತ್ತಿದ್ದವನು ಓದಬೇಕು. ಆಗ ಲೋಕಕಲ್ಯಾಣಸಾಧ್ಯ. ಹೊಟ್ಟೆ ಇದ್ದವನಿಗೆ ಹಸಿವಾಗುತ್ತದೆ ಹಸಿವನ್ನು ನೀಗಿಸಲು ರಟ್ಟೆಯ ಬಲವನ್ನು ಬಳಸಿ ದುಡಿಯಬೇಕು ನೆತ್ತಿದ್ದವನು ಜ್ಞಾನಕ್ಕಾಗಿ ಓದಬೇಕು ಇದು ಶರಣರ ವೈಚಾರಿಕತೆಯ ನೈಜ ನಿಲುವಾಗಿದೆ. ಗುರುಗಳಿಗೆ ಅಕ್ಷಯವಾದ ಆಸ್ತಿ ಎಂದರೆ ಶಿಷ್ಯ ವೃಂದ. ಅಂಥ ಐಕೈಕ ಆಸ್ತಿಯನ್ನು ಗಳಿಸುವ ಶಿಕ್ಷಕರೇ ಧನ್ಯರು. 900 ವರ್ಷಗಳು ಗತಿಸಿದರು ಇಂದಿಗೂ ಹಸನಾಗಿ ಉಳಿದಿರುವುದು ವಚನ ಸಾಹಿತ್ಯ. ಶಿಕ್ಷಕರು ವಿದ್ಯಾರ್ಥಿಗಳಿಗೆ ವಚನ ಸಾಹಿತ್ಯದ ಒಲವು ಮೂಡಿಸಿ ಸುಸಂಸ್ಕೃತ ರನ್ನಾಗಿ ಮಾಡುವ ಹೊಣೆಗಾರಿಕೆ ಎಂದಿಗಿಂತಲೂ ಇಂದು ಅಗತ್ಯವಾಗಿದೆ ಎಂದರು

ಕಲ್ಲ ನಾಗರ ಕಂಡರೆ ಹಾಲನೆರೆ ಎಂಬರು ದಿಟದ ನಾಗರ ಕಂಡರೆ ಕೊಲ್ಲೆಂಬರಯ್ಯ ಎಂಬ ಮೌಢ್ಯತೆಯ ತತ್ವವನ್ನು ವಿವರಿಸಿ ಬಸವಣ್ಣನವರ ಮಾರ್ಗವನ್ನು ಅನುಸರಿಸಬೇಕು.

ಶ್ರೀ ತರಳಬಾಳು ಸೇವಾ ಟ್ರಸ್ಟ್ ಅಧ್ಯಕ್ಷರಾದ ಮಾಗನೂರು ಸಂಗಮೇಶಗೌಡರು ಮಾತನಾಡಿ ಯುವಶರಣರು ತಮ್ಮ ತಮ್ಮ ಇಷ್ಟ ದೈವದ ಎದುರು ತಮ್ಮ ಬದುಕಿನ ದೌರ್ಬಲ್ಯಗಳನ್ನು ಹೇಳಿಕೊಂಡು ಆತ್ಮಶುದ್ಧಿಗೆ ಮುಂದಾದವರು ಅವರ ನಡೆದ ಹಾದಿಯಲ್ಲಿ ಸಮಾಜ ಮುಂದಾದರೆ ಯಾವುದೇ ವರ್ಣ ವರ್ಗ ಲಿಂಗ ತಾರತಮ್ಯ ಇರುವುದಿಲ್ಲ ಎಂದು ನುಡಿದರು ಯುವಕರು ವಚನಗಳ ಆಳವಾದ ಅಭ್ಯಾಸ ನಡೆಸಿ ವಚನದಲ್ಲಿರುವ ತಾತ್ವಿಕತೆಯನ್ನು ಮನಗಾಣಬೇಕಾಗಿದೆ ಬಾಲ್ಯದಲ್ಲಿಯೇ ಮಕ್ಕಳಲ್ಲಿ ಮಕ್ಕಳಿಗೆ ವಚನ ಸಾಹಿತ್ಯದ ಕುರಿತು ಆಸಕ್ತಿ ಮೂಡಿಸಿದ್ದಲ್ಲಿ ಅವರು ಕೆಟ್ಟ ಮಾರ್ಗ ಕೆಟ್ಟ ಅಭ್ಯಾಸ ಕೆಟ್ಟ ನಡತೆ ಕೆಟ್ಟ ಚಿಂತನೆಗೆ ಹೋಗುವುದಿಲ್ಲವೆಂದರು

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ಆಡಳಿತ ಅಧಿಕಾರಿಗಳಾದ ಡಾ. ಎಚ್ ವಿ ವಾಮದೇವಪ್ಪನವರು ಪ್ರಭಾರೆ ಮುಖ್ಯ ಶಿಕ್ಷಕ ಎಚ್‌ಬಿ ನಾಗರಾಜಯ್ಯ ಉಪಸ್ಥಿತರಿದ್ದರು.

ಲಿಂಗೈಕ್ಯ ಶರಣೆ ನಾಗಮ್ಮ ಲಿಂಗೈಕ್ಯ ಶರಣ ಶಿವನಹಳ್ಳಿ ರೇವಣ ಸಿದ್ದಪ್ಪನವರ ಸ್ಮರಣಾರ್ಥ ಪ್ರಸಾದ ಸೇವೆ ಮಾಡಲಾಯಿತು

ಆರಂಭದಲ್ಲಿ ಕದಳಿ ಮಹಿಳಾ ವೇದಿಕೆಯವರು ವಚನ ಗಾಯನ ನಡೆಸಿಕೊಟ್ಟರು. ಪಲ್ಲಾಗಟ್ಟೆ ಗ್ರಾಮದ ಶ್ರೀಮತಿ ಸಿದ್ದಮ್ಮ ಗ್ರಾಮೀಣ ಪ್ರೌಢಶಾಲೆಯ ಶಿಕ್ಷಕಿ ಶ್ರೀಮತಿ ಸುನಂದಮ್ಮ ಸ್ವಾಗತಿಸಿದರು ಶಿಕ್ಷಕ ಚೇತನ್ ಕುಮಾರ್ ನಾಯಕ ವಂದಿಸಿದರು. ಶಿಕ್ಷಕ ಶ್ರೀ ರವಿ ಕಾರ್ಯಕ್ರಮವನ್ನು ನಿರೂಪಿಸಿದರು.

# ಸ್ವ ಸಹಾಯ ಸಂಘಗಳ ತಯಾರಿಕಾ ವಸ್ತುಗಳನ್ನು ಉತ್ತೇಜಿಸಿ

### ಮಣ್ಣಿನಿಂದ ತಯಾರಿಸಿದ ವಿವಿಧ ಬಗೆಯ ದೀಪಗಳ ಮಳಿಗೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಡಾ. ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ :** ದೀಪಾವಳಿ ಹಬ್ಬದ ಪ್ರಯುಕ್ತ ಗ್ರಾಮೀಣ ಭಾಗದ ಸಂಜೀವಿನಿ ಎನ್,ಆರ್,ಎಲ್,ಎಂ ಮಹಿಳಾ ಸ್ವಸಹಾಯ ಸಂಘದವರು ಮಣ್ಣಿನಿಂದ ತಯಾರಿಸಿದ ವಿವಿಧ ಬಗೆಯ ದೀಪಗಳನ್ನು ಖರೀದಿಸುವ ಮೂಲಕ ಮಹಿಳಾ ಸ್ವ ಸಹಾಯ ಸಂಘ ಪ್ರೋತ್ಸಾಹಿಸುವಂತೆ ತಿಳಿಸಿದರು.

ಅವರು ಕೆ. ಎಸ್. ಆರ್,ಟಿ,ಸಿ ಬಸ್ ನಿಲ್ದಾಣದ ಮುಂಭಾಗದಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಗ್ರಾಮೀಣ ಭಾಗದ ಸಂಜೀವಿನಿ ಎನ್,ಆರ್,ಎಲ್,ಎಂ ಮಹಿಳಾ ಸ್ವಸಹಾಯ ಸಂಘದವರು ಮಣ್ಣಿನಿಂದ ತಯಾರಿಸಿದ ವಿವಿಧ ಬಗೆಯ ದೀಪಗಳ



ಮಳಿಗೆ ಯನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣದ ಮಹಿಳಾ ಸಂಘಗಳಿಗೆ ಉತ್ತೇಜಿಸಲು ದೀಪ ಸಂಜೀವಿನಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ, ಮಹಿಳೆಯರು ಬೇರೆ ಬೇರೆ ರೀತಿಯ ಮಣ್ಣಿನ ದೀಪಗಳನ್ನು ಕಪ್ಪು ಮಣ್ಣಿನಿಂದ ಹಾಗೂ ಟೆರಕೋಟ ದಿಂದ ತಯಾರಿಸಿರುವ ದೀಪಗಳನ್ನು ಮಾರಾಟ ಮಾಡುತ್ತಿದ್ದಾರೆ ಎಂದರು

ಹೆಚ್ಚು ಮಾರಾಟವಾಗುತ್ತಿರುವ ದೀಪಗಳ ಬಗ್ಗೆ ಗ್ರಾಹಕರ ಅಭಿಪ್ರಾಯವನ್ನು ಪಡೆಯಿರಿ ಮತ್ತು ಮಣ್ಣಿನ ಜಗ್, ಪಾಟ್ ಗಳು, ಚಿಕ್ಕ ಜಗ್ ಗಳನ್ನು ವರ್ಷಪೂರ್ತಿ ಮಾರಾಟ ಮಾಡಲು ಚಿಂತಿಸುವಂತೆ ತಿಳಿಸಿದರು ಮುಂದಿನ ವರ್ಷ ಪ್ರಾರಂಭದಲ್ಲಿ ಮಣ್ಣಿನ ದೀಪಗಳು ಹೆಚ್ಚು ಬೇಡಿಕೆ ಆಗುವ ಸಂಭವವಿರುತ್ತದೆ ಎಂದು ಅಭಿಪ್ರಾಯ ಪಟ್ಟರು.

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕಿ ಹಾಗೂ ಇತರರು ಉಪಸ್ಥಿತರಿದ್ದರು.

# ಚುನಾವಣಾಧಿಕಾರಿಯಾಗಿ ಮಲ್ಲಿಕಾರ್ಜುನ್ ಕಬ್ಬೂರು ನೇಮಕ

**ದಾವಣಗೆರೆ:** ಕರ್ನಾಟಕ ಕಾರ್ಯನಿರತ ಪತ್ರಕರ್ತಕರ ಸಂಘದ 2025–28ನೇ ಸಾಲಿನ ದಾವಣಗೆರೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಚುನಾವಣಾಧಿಕಾರಿಯಾಗಿ ಹಿರಿಯ ಪತ್ರಕರ್ತ ಮಲ್ಲಿಕಾರ್ಜುನ್ ಕಬ್ಬೂರು ಅವರನ್ನು ನೇಮಕ ಮಾಡಿ ರಾಜ್ಯ ಚುನಾವಣಾಧಿಕಾರಿ ಎನ್. ರವಿಕುಮಾರ್ ಆದೇಶ ಹೊರಡಿಸಿದ್ದಾರೆ.



ಜಿಲ್ಲಾ ಸಂಘದ ಅಧ್ಯಕ್ಷರಾದ ಮಂಜುನಾಥ್ ಇ.ಎಂ. ಹಾಗೂ ಕಾರ್ಯದರ್ಶಿ ಎ. ಫಕ್ರುದ್ದೀನ್ ಸೇರಿದಂತೆ ಪದಾಧಿಕಾರಿಗಳು ಕಳೆದ ವಾರ ಮಲ್ಲಿಕಾರ್ಜುನ್ ಕಬ್ಬೂರು ಅವರನ್ನು ಚುನಾವಣಾಧಿಕಾರಿಯಾಗಿ ನಿಯೋಜಿಸುವಂತೆ ರಾಜ್ಯ ಸಂಘ–ಕ್ಕೆ ಶಿಫಾರಸು ಮಾಡಿದ್ದರು.

ಚುನಾವಣೆ ನ.9ರಂದು ಬೆಳಗ್ಗೆ 9ರಿಂದ ಮಧ್ಯಾಹ್ನ 3ರ ವರಗೆ ನಡೆಯಲಿದೆ. ಅಂದೆ ಮಧ್ಯಾಹ್ನ 3 ಗಂಟೆಯಿಂದ ಮತ ಎಣಿಕೆ ಪ್ರಾರಂಭವಾಗಿ ಫಲಿತಾಂಶ ಪ್ರಕಟವಾಗಲಿದೆ.

# ಅ.14ಕ್ಕೆ ಶ್ರೀ ಕೊಪ್ಪದಂಬ ದೇವಿಯ 30ನೇ ವರ್ಷದ ಕೆಂಡದಾರ್ಚನೆ

**ದಾವಣಗೆರೆ:** ಹರಿಹರ ರಸ್ತೆಯಲ್ಲಿರುವ ಶ್ರೀಕ್ಷೇತ್ರ ನವಸ್ಥಾನದ ಶ್ರೀ ಶನೇಶ್ವರ ಸ್ವಾಮಿಯ ದೇವಸ್ಥಾನದಲ್ಲಿರುವ ಶ್ರೀ ಕೊಪ್ಪದಂಬ ದೇವಿಯ 30ನೇ ವರ್ಷದ ಕೆಂಡದಾರ್ಚನೆಯು ಅ.14ರಂದು ನಡೆಯಲಿದೆ.

ಅಂದು ಬೆಳಗ್ಗೆ 9 ಗಂಟೆಗೆ ಕುಂಬೋತ್ಸವ ಹಾಗೂ ರಾಜಬೀದಿಗಳಲ್ಲಿ ಪಲ್ಲಕ್ಕಿಯ ಉತ್ಸವದ ನಂತರ ಬೆಳಗ್ಗೆ 10ಕ್ಕೆ ಕೆಂಡದಾರ್ಚನೆ ನಡೆಯಲಿದೆ. ಇದಕ್ಕೂ ಮುನ್ನಾ ದಿನ ಅ.13ರ ಸೋಮವಾರ ರಾತ್ರಿ ಹರಿಹರದ ತುಂಗಭದ್ರ ನದಿಯಲ್ಲಿ ಗಂಗೆ ಪೂಜೆ, ಎಡೆ ಪೂಜೆ ಸೇರಿದಂತೆ 101 ಪೂಜೆ ಮುಗಿಸಿಕೊಂಡು ನಗರದ ಗ್ರಾಮದೇವತೆಯಾದ ಶ್ರೀ ದುರ್ಗಾಂಬಿಕಾ ದೇವಸ್ಥಾನಕ್ಕೆ ತೆರಳಿ ಪೂಜೆಗೈದು, ಅಲ್ಲಿಂದ ಕುಂಬೋತ್ಸವದೊಂದಿಗೆ ಪ್ರಮುಖ ರಾಜಬೀದಿಗಳಲ್ಲಿ ಪಲ್ಲಕ್ಕಿ ಉತ್ಸವ ನಡೆಯಲಿದೆ. ಪಲ್ಲಕ್ಕಿ ಮೆರವಣಿಗೆಯಿಂದ ಶ್ರೀ ಕ್ಷೇತ್ರ ನವಸ್ಥಾನಕ್ಕೆ ಆಗಮಿಸಿದ ನಂತರ ಕೆಂಡದಾರ್ಚನೆಯ ತರುವಾಯ ಮಧ್ಯಾಹ್ನ 12 ಗಂಟೆಯಿಂದ ಅನ್ನದಾಸೋಹ ನಡೆಯಲಿದೆ ಎಂದು ಶ್ರೀ ಕೊಪ್ಪದಾಂಬ ಟ್ರಸ್ಟ್ ತಿಳಿಸಿದೆ.

# ಇಂದು ಶ್ರೀ ರಾಜ ವೀರ ಮದಕರಿ ನಾಯಕರ ಜಯಂತಿ

**ದಾವಣಗೆರೆ:** ಜಿಲ್ಲಾ ವಾಲ್ಮೀಕಿ ನಾಯಕ ಸಮಾಜದಿಂದ ಶ್ರೀ ರಾಜ ವೀರ ಮದಕರಿ ನಾಯಕರ ಜಯಂತಿಯನ್ನು ಅ.13ರಂದು ಬೆಳಗ್ಗೆ 10:30ಕ್ಕೆ ನಗರದ ಶ್ರೀ ರಾಜವೀರ ಮದಕರಿ ನಾಯಕ ವೃತ್ತ(ಹೋಂಡದ ವೃತ್ತ)ದಲ್ಲಿ ಹಮ್ಮಿಕೊಳ್ಳಲಾಗಿದ್ದು, ನಾಯಕ ವಿದ್ಯಾರ್ಥಿ ನಿಲಯದ ಆಡಳಿತ ಮಂಡಳಿಯವರು ಮತ್ತು ಸಮಾಜದ ಬಾಂಧವರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸಮಾಜದ ಅಧ್ಯಕ್ಷ ಬಿ. ವೀರಣ್ಣ ಕೋರಿದ್ದಾರೆ.

# ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಸಿಲಿಂಡರ್ ಸ್ಫೋಟ: ಮೃತರ ಸಂಖ್ಯೆ 6ಕ್ಕೆ ಏರಿಕೆ

**ಬೆಂಗಳೂರು:** ಬಿಡದಿ ಪೊಲೀಸ್ ಠಾಣಾ ವ್ಯಾಪ್ತಿಯ ಭೀಮೇನಹಳ್ಳಿ ಗ್ರಾಮದಲ್ಲಿ ಮಂಗಳವಾರ ಸಂಭವಿಸಿದ ಸಿಲಿಂಡರ್ ಸ್ಫೋಟದಲ್ಲಿ ಸಾವಿನ ಸಂಖ್ಯೆ 6ಕ್ಕೆ ಏರಿಕೆಯಾಗಿದೆ.

ಈ ದುರ್ಘಟನೆ ಅಕ್ಟೋಬರ್ 7ರಂದು ಬೆಂಗಳೂರು ದಕ್ಷಿಣ ಜಿಲ್ಲೆ ರಾಮನಗರ ತಾಲೂಕಿನ ಭೀಮನಹಳ್ಳಿ ಸಮೀಪದ ಶೆಡ್‌ನಲ್ಲಿ ನಡೆದಿದೆ. ಪಶ್ಚಿಮ ಬಂಗಾಳ ಮೂಲದ 7 ಕಾರ್ಮಿಕರು ಈ ಸ್ಫೋಟದಲ್ಲಿ ಗಂಭೀರವಾಗಿ ಗಾಯಗೊಂಡಿದ್ದರು. ಅವರಲ್ಲಿ 6 ಮಂದಿ ಸಾವನ್ನಪ್ಪಿದ್ದಾರೆ.

# ಅನಧಿಕೃತ 36 ಮನೆಗಳ ತೆರವು, ಸ್ಥಳೀಯರ ಆಕ್ರೋಶ

**ದಾವಣಗೆರೆ.ಅ.12:** ಇಲ್ಲಿನ ಲೋಕಿಕೆರೆ ರಸ್ತೆಯಲ್ಲಿರುವ ಎಸ್.ಎ.ರವೀಂದ್ರನಾಥ್ ಬಡಾವಣೆಯಲ್ಲಿ ಅಕ್ರಮವಾಗಿ ನಿರ್ಮಿಸಿಕೊಂಡಿದ್ದ 36 ಮನೆಗಳನ್ನು ಶನಿವಾರ ಬೆಳಿಗ್ಗೆ ತಹಶೀಲ್ದಾರ್ ಎಂ.ಬಿ.ಅಶ್ವಥ್ ಅವರ ನೇತೃತ್ವದಲ್ಲಿ ಪೊಲೀಸ್ ಭದ್ರತೆಯಲ್ಲಿ ಅಧಿಕಾರಿಗಳು ಜೆಸಿಬಿಗಳ ಮುಖಾಂತರ ತೆರವುಗೊಳಿಸಲು ಮುಂದಾದಾಗ ಸ್ಥಳೀಯರೊಂದಿಗೆ ವಾಗ್ವಾದ ನಡೆದು ಬಿಗುವಿನ ವಾತಾವರಣ ನಿರ್ಮಾಣಗೊಂಡಿತು.

ಗೋಮಾಳ ಜಾಗದಲ್ಲಿ ಅಕ್ರಮವಾಗಿ ನಿರ್ಮಿಸಿಕೊಂಡಿದ್ದ ಮನೆಗಳನ್ನು ತೆರವುಗೊಳಿಸುವಂತೆ ಇತ್ತೀಚೆಗೆ ನ್ಯಾಯಾಲಯ ಆದೇಶ ನೀಡಿತ್ತು. ಆದಕಾರಣ ಬೆಳ್ಳಬೆಳಿಗ್ಗೆ ತಹಶೀಲ್ದಾರ್ ಎಂ.ಬಿ.ಅಶ್ವಥ್ ಅವರ ನೇತೃತ್ವದಲ್ಲಿ ಕಂದಾಯ , ಪಾಲಿಕೆ ಅಧಿಕಾರಿಗಳು ನೂರಾರು ಪೊಲೀಸರು ಸಮ್ಮುಖದಲ್ಲಿ ಅಲ್ಲಿನ ನಿವಾಸಿಗಳ ಹಾಗೂ ಜನಪ್ರತಿನಿಧಿಗಳ ವಿರೋಧದ ನಡುವೆಯೂ ಮನೆಗಳನ್ನು ತೆರವುಗೊಳಿಸಲಾಯಿತು.

ಸುಮಾರು ವರ್ಷಗಳ ಹಿಂದೆ ಅಲ್ಲಿ ಯಾವುದೇ ಬಡಾವಣೆಗಳು ಆಗದಿರುವ ಕಾಲದಲ್ಲಿ ಸರ್ಕಾರದ ಗೋಮಾಳದಲ್ಲಿ ನಿರಾಶ್ರಿತರು ಸಣ್ಣ ಸಣ್ಣ ಶೆಡ್‌ಗಳು, ಮನೆಗಳನ್ನು ನಿರ್ಮಿಸಿಕೊಂಡು ಜೀವನ ಮಾಡಿಕೊಂಡು ಬಂದಿದ್ದಾರೆ. ಈಗ ಎಷ್ಟೇ ವಿರೋಧ ಮಾಡಿದರು ಮತ್ತು ಬೇರೆ ಕಡೆ ನಿವೇಶನ ನೀಡಿ ನಂತರ ತೆರವುಗೊಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದರೂ ಯಾವುದೇ ಪ್ರಯೋಕನವಾಗಿಲ್ಲ. ಏಕಾಏಕಿ ತೆರವುಗೊಳಿಲಾಗುತ್ತಿದೆ ಎಂದು ಸ್ಥಳೀಯರು ಜೆಸಿಬಿಗೆ ಅಡ್ಡಲಾಗಿ ಮಲಗಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ಮಹಿಳಾ ಪೊಲೀಸ್ ಸಿಬ್ಬಂದಿಗಳು ಅವರನ್ನು ವಶಕ್ಕೆ ಪಡೆದರು.

ನಮಗೆ ಬೇರೆ ಕಡೆ ಜಾಗ ನೀಡಿದ್ದರೆ ಅಲ್ಲಿಯೇ ಶೆಡ್ಗಳ ನಿರ್ಮಾಣ ಮಾಡಿಕೊಂಡು ಬದುಕುತ್ತಿದ್ದವು. ಆದರೆ ಏಕಾಏಕಿ ತೆರವು ಎಂದರೆ ನಾವು ಹೋಗುವುದಾದರೂ ಎಲ್ಲಿಗೆ?. ಮನೆಯಲ್ಲಿ ವಯಸ್ಸಾದ ತಂದೆ ತಾಯಿ ಇದ್ದು ಅವರಿಗೆ ನಡೆಯಲು ಶಕ್ತಿ ಇಲ್ಲ. ವಾರದ ಹಿಂದೆ ಮಗು ಹೆತ್ತ ಬಾಣಂತಿಯರೂ ಇದ್ದಾರೆ. ಇಂತಹವರನ್ನ ಬೀದಿಗೆ ತಂದು ನಿಲ್ಲಿಸಲಾಗಿದೆ ಎಂದು ಅಲ್ಲಿನ ನಿವಾಸಿಯೊಬ್ಬರು ತಮ್ಮ ಅಳಲು ತೋಡಿಕೊಂಡರು.ನ್ಯಾಯಾಲಯದ ಆದೇಶದಂತೆ ಗೋಮಾಳ ಜಾಗದಲ್ಲಿ ಅಕ್ರಮವಾಗಿ ಕಟ್ಟಿದ್ದ ಮನೆಗಳನ್ನು ತೆರವುಗೊಳಿಸಿದ್ದೇವೆ. 36 ಕುಟುಂಬಗಳಿಗೂ ಬೇರೆಡೆ ನಿವೇಶನ ಗುರುತಿಸಿಲಾಗಿದ್ದು ಮುಂದಿನ ದಿನಗಳಲ್ಲಿ ನಿವೇಶನ ನೀಡಲಿದ್ದೇವೆ. ಅಲ್ಲಿಯವರೆಗೆ ತಾತ್ಕಾಲಿಕವಾಗಿ ನಿರಾಶ್ರಿತರ ಕೇಂದ್ರಕ್ಕೆ ಕಳಿಸುತ್ತೇವೆ ಎಂದು ಅಧಿಕಾರಿಗಳು ಭರವಸೆ ನೀಡಿ, ತೆರವುಗೊಳಿಸುವಂತೆ ಜೆಸಿಬಿಗೆ ಸೂಚನೆ ನೀಡಿದರು.

# ಬಂಜಾರ ಸೇರಿ ತಳಸಮುದಾಯದವರು ಸ್ವಲ್ಪ ಆಳ ಅಧ್ಯಯನ ಮಾಡಿದ್ರೆ ಐಎಎಸ್ ಕಷ್ಟವಾಗದು: ಜಿ.ಬಿ. ವಿನಯ್ ಕುಮಾರ್

**ದಾವಣಗೆರೆ:** ಬಂಜಾರ ಸಮುದಾಯವದರು ಸೇರಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಸ್ವಲ್ಪ ಆಳವಾಗಿ ಅಧ್ಯಯನ ಮಾಡಿದರೆ, ಮನಸ್ಸಿದ್ದರೆ ಮಾರ್ಗ ಎಂಬಂತೆ ಕಷ್ಟಪಟ್ಟರೆ ಐಎಎಸ್, ಐಪಿಎಸ್ ಆಗಲು ಸಾಧ್ಯವಾಗುತ್ತದೆ.ಬೌದ್ಧಿಕವಾಗಿ,ಅಧ್ಯಯನಶೀಲರಾಗಿ, ನಾಯಕತ್ವಗುಣ ಹೊಂದಿದ ಸಾಮರ್ಥ್ಯದವರು ಇದ್ದವರಿಗೆ ಸೂಕ್ತ ವೇದಿಕೆ ಕಲ್ಪಿಸಿಕೊಡಬೇಕು ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್‌ಕುಮಾರ್ ಪ್ರತಿಪಾದಿಸಿದರು.

ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಹಿರೇಕಲ್ಮಠದ ಜಗದ್ಗುರು ಪಂಚಾಚಾರ್ಯ ಸಮುದಾಯ ಭವನದಲ್ಲಿ ಬಂಜಾರ ಸೇವಾ ಸಂಘ ವತಿಯಿಂದ ಆಯೋಜಿಸಿದ್ದ ಹೊನ್ನಾಳಿ ತಾಲೂಕಿನ ಲಂಬಾಣಿ ಸಮಾಜದ ನಾಯಕರು, ಡಾವ್ಗಳು, ಕಾರಬಾರಿಗಳು ಸಂಘದ ಮಾಜಿ ಅಧ್ಯಕ್ಷರು ಮತ್ತು ಹೊನ್ನಾಳಿ ತಾಲೂಕು ಮತ್ತು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರಿಗೆ ಸನ್ಮಾನ ಹಾಗೂ ಸಮಾಜದ ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಮಾಹಿತಿ ವಿನಿಮಯ ಕಾರ್ಯಕ್ರಮದಲ್ಲಿ ಮುಖ್ಯ



ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಐಎಎಸ್ ಮಾಡುತ್ತೇನೆಂಬ ಅಚಲವಾದ ಬಯಕೆ ಇರಬೇಕು. ಮನೆ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿಯೂ ಉನ್ನತ ಹುದ್ದೆಗೆ ಹೋಗುವಂಥ ವಾತಾವರಣ ಕಲ್ಪಿಸಿಕೊಡಬೇಕು. ಪುಸ್ತಕ ಮತ್ತು ಸಾಹಿತ್ಯ ಓದುವಂಥ ಸಂಸ್ಕೃತಿ ಬೆಳೆಸಿಕೊಳ್ಳಬೇಕು. ನಮ್ಮ ಸುತ್ತಮುತ್ತಲಿನ ವಿಚಾರಗಳು, ದೇಶ, ಅಂತಾರಾಷ್ಟ್ರೀಯ ಮಟ್ಟದ ವಿಷಯಗಳನ್ನು ತಿಳಿದುಕೊಳ್ಳಬೇಕಾದರೆ ಪ್ರತಿನಿತ್ಯವೂ ಪತ್ರಿಕೆಗಳನ್ನು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಆಗ ಜ್ಞಾನವೂ ಬೆಳೆಯುತ್ತದೆ, ಎದುರಿಸುವ ಛಲವೂ ಬರುತ್ತದೆ ಎಂದು ಅಭಿಪ್ರಾಯಪಟ್ಟರು.

ನಗರ ಪ್ರದೇಶಗಳಿಗೆ ಹೋಲಿಸಿದರೆ ಗ್ರಾಮಾಂತರ ಪ್ರದೇಶಗಳಲ್ಲಿ ಉತ್ಕೃಷ್ಟ ಮಟ್ಟದ ಶಿಕ್ಷಣ ಸಿಗುತ್ತಿಲ್ಲ. ಕನ್ನಡದ ಜೊತೆಗೆ ಇಂಗ್ಲೀಷ್ ಭಾಷೆಯಲ್ಲಿ ಪ್ರೌಢಿಮ್ಯತೆ ಹೊಂದಿದ್ದರೆ ಐಎಎಸ್, ಐಪಿಎಸ್ ಕಷ್ಟವಾಗಲಾರದು. ಪ್ರಾಥಮಿಕ ಹಂತದಲ್ಲೇ ಗುಣಮಟ್ಟದ ಶಿಕ್ಷಣ ಮತ್ತು ಸೂಕ್ತ ವೇದಿಕೆ ಸಿಗುವಂತಾಗಬೇಕು ಎಂದು ಅವರು ಹೇಳಿದರು.

ಇಂದಿನ ದಿನಗಳಲ್ಲಿಯೂ ಶಿಕ್ಷಣ ಕ್ಷೇತ್ರದಲ್ಲಿನ ಅಸಮಾನತೆ ಹೋಗಿಲ್ಲ. ಶೋಷಣೆಗೆ ಒಳಗಾದ, ಹಿಂದುಳಿದ, ದಬ್ಬಾಳಿಕೆಗೆ ತುತ್ತಾದ, ತುಳಿತಕ್ಕೊಳಗಾದವರು ನಿಜವಾದ ಸಂತ್ರಸ್ತರು. ಇಂದು ಎಸ್ಸಿ ಸೇರಿದಂತೆ ಶೋಷಿತ ಸಮುದಾಯವರ ಸಾಮರ್ಥ್ಯ ಹೊರ ಬರುವ ಮುನ್ನವೇ ನಶಿಸಿ ಹೋಗುತ್ತಿದೆ. ಪ್ರತಿಭೆ ಅನಾವರಣಕ್ಕೆ ಸೂಕ್ತ ವೇದಿಕೆ ಸಿಗುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ನಮ್ಮ ಸುತ್ತಮುತ್ತಲು ನೂರಾರು ಪ್ರತಿಭೆಗಳಿರುತ್ತವೆ. ಆದ್ರೆ, ಹೊರ ಬರುತ್ತಿಲ್ಲ. ಅಲ್ಲಿಯೇ ಚಿವುಟಿ ಹೋಗುತ್ತಿವೆ. ನಾವು ಹೊರತಂದಾಗ ಮಾತ್ರ ಸಮುದಾಯದ ಜೊತೆ ನಾವೂ ಯಶಸ್ಸು ಸಾಧಿಸುತ್ತೇವೆ. ಕರ್ನಾಟಕದಲ್ಲಿ ನೂರಾರು ಐಎಎಸ್, ಐಪಿಎಸ್ ಅಧಿಕಾರಿಗಳಿದ್ದಾರೆ. ಅವರೆಲ್ಲರೂ ಕೇವಲ ಮೂರು ವರ್ಷಗಳಲ್ಲಿ ಈ ಸಾಧನೆ ಮಾಡಿದವರಲ್ಲ. ಕನಿಷ್ಠ ಎಂದರೂ ಆರರಿಂದ ಏಳು ವರ್ಷ ಬೇಕಾಗುತ್ತದೆ. ಸತತ ಪರಿಶ್ರಮ, ಕಠಿಣ ಅಧ್ಯಯನ ಇರಬೇಕು. ಆಸಕ್ತಿ ಇದ್ದರೆ ಕೂಲಿ ಕಾರ್ಮಿಕರು, ತುಂಬಾ ಬಡವರು, ಆರ್ಥಿಕವಾಗಿ ಹಿಂದುಳಿದವರಿಗೆ ಉಚಿತವಾಗಿ ಐಎಎಸ್ ಕೋಚಿಂಗ್ ನೀಡಲು ತಯಾರಿದ್ದೇನೆ. ನೀವು ಸನ್ನದ್ಧರಾಗಿ ಬರಬೇಕು ಎಂದು ತಿಳಿಸಿದರು.

ವಿಧಾನಸಭೆ ಉಪಸಭಾಪತಿ ರುದ್ರಪ್ಪ ಲಮಾಣಿ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿದರು. ಸೂರಗೊಂಡನಕೊಪ್ಪದ ಮಹಾಮಠ ಸಮಿತಿ ಸದಸ್ಯ ಬಿಯ ರವಿನಾಯ್ಕ ಅಧ್ಯಕ್ಷತೆ ವಹಿಸಿದ್ದರು. ಚಿತ್ರದುರ್ಗದ ಬಯಲು ಸಮಿತಿ ಅಭಿವೃದ್ಧಿ ನಿಮಗದ ಅಧ್ಯಕ್ಷ ಹೆಚ್. ಬಿ. ಮಂಜಪ್ಪ, ಶಾಸಕ ಡಿ. ಜಿ. ಶಾಂತನಗೌಡ, ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವ ನಾಯ್ಕ, ಕೆಪಿಸಿಸಿ ಸದಸ್ಯ ಡಾ. ಎಲ್. ಈಶ್ವರನಾಯ್ಕ, ಶಿವರಾಂ ನಾಯ್ಕ, ವಕೀಲ ಅನಂತನಾಯ್ಕ, ಉಪಸ್ಥಿತರಿದ್ದರು.

# ಆಟ ಆಡುವಾಗ ಬಾವಿಗೆ ಬಿದ್ದು ಮಗು ಸಾವು

**ಬೀದರ್,ಅ.13–** ಆಟ ಆಡುವಾಗ ಬಾವಿಗೆ ಬಿದ್ದು ಬಾಲಕ ಸಾವನ್ನಪ್ಪಿದ ಘಟನೆ ಬೀದರ್ ಜಿಲ್ಲೆಯ ಬಸವಕಲ್ಯಾಣ ಪಟ್ಟಣದ ಈಶ್ವರ ಕಾಲೋನಿಯಲ್ಲಿ ನಡೆದಿದೆ. ಶೇಖ್ ನುಸ್ತಕಿಮ್ ಅಕ್ಬರಲಿ(6) ಮೃತ ಬಾಲಕನಾಗಿದ್ದಾನೆ.



ಮನೆಯ ಪಕ್ಕದಲ್ಲಿ ಆಟ ಆಡುವ ವೇಳೆ ಆವರಣದಲ್ಲಿದ್ದ ಬಾವಿಗೆ ಆಕಸಿಕವಾಗಿ ಬಾಲಕ ಬಿದ್ದಿದೆ.ಮೊದಲು ಯಾರಿಗೂ ತಿಳಿಯಲಿಲ್ಲ ನಂತರ ಕಳೆದ ರಾತ್ರಿ ವಿಷಯ ತಿಳಿದು ಸ್ಥಳಕ್ಕೆ ದೌಡಾಸಿದ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಬಾಲಕನ ಶವ ಹೊರತೆಗೆದಿದ್ದಾರೆ.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು. ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು.

### ವೃಷಭ ರಾಶಿ

ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು. ಆಗಾಗ ನಿಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳುವುದು ಸಹಾಯ ಮಾಡುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

### ಮಿಥುನ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ ಮತ್ತು ನಿಮ್ಮ ಅತ್ಯುತ್ತಮ ಸ್ನೇಹಿತರ ಬಳಿ ಸಹಾಯ ಕೇಳಿ. ನಿಮ್ಮ ಸಂಪೂರ್ಣ ಹಾಗೂ ಪ್ರಶ್ನಾತೀತ ಪ್ರೀತಿ ಒಂದು ಜಾದುವಿನಂಥ ಸೃಜನಶೀಲ ಶಕ್ತಿಯನ್ನು ಹೊಂದಿದೆ.

### ಕರ್ಕ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ. ನೀವು ನಿಮ್ಮ ಕೌಶಲ್ಯ ಮತ್ತು ಪ್ರತಿಭೆಗಳನ್ನು ಸರಿಯಾದ ಜನರಿಗೆ ತೋರಿಸಿದಲ್ಲಿ ನೀವು ಶೀಘ್ರದಲ್ಲೆ ಹೊಸ ಮತ್ತು ಒಳ್ಳೆಯ ಸಾರ್ವಜನಿಕ ವ್ಯಕ್ತಿತ್ವವನ್ನು ಹೊಂದಲು ಸಾಧ್ಯವಿದೆ.

### ಸಿಂಹ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ. ಇದು ನಿಮ್ಮ ಸಂಬಂಧವನ್ನು ಸುಧಾರಿಸುವ ಬದಲು ಹಾಳುಮಾಡುತ್ತದೆ.

### ಕನ್ಯಾ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ಸಂಬಂಧಿಕರ ಜೊತೆ ಕಳೆದ ಸಮಯ ನಿಮಗೆ ಅನುಕೂಲಕರವಾಗಿರುತ್ತದೆ. ಪ್ರೀತಿಗಾಗಿ ವಿಶೇಷ ದಿನ-ರಾತ್ರಿಗಾಗಿ ಯಾವುದಾದರೂ ಯೋಜನೆ ಹಾಕಿ ಮತ್ತು ಇದನ್ನು ಸಾಧ್ಯವಾದಷ್ಟು ಪ್ರಣಯಮಯವಾಗಿಸಲು ಪ್ರಯತ್ನಿಸಿ. ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿ ಇದ್ದಂತೆ ತೋರುತ್ತದೆ.

### ತುಲಾ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು ಮತ್ತು ಅವರಿಗೆ ಸಹಾಯ ಮಾಡಿ ನೀವು ಸ್ವತಃ ಆರ್ಥಿಕ ಒತ್ತಡಕ್ಕೆ ಬರಬಹುದು. ಆದಾಗ್ಯೂ ಪರಿಸ್ಥಿತಿ ಬೇಗ ಸುಧಾರಿಸುತ್ತದೆ. ನಿಮ್ಮ ಹೆತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ.

### ವೃಶ್ಚಿಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

### ಧನು ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಮಕರ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ - ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

### ಕುಂಭ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸ ಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ.

### ಮೀನ ರಾಶಿ

ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು - ಯಾವುದೇನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು.

# ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಕರ್ನಾಟಕ ರಾಜ್ಯೋತ್ಸವ ರಾಜ್ಯ ಪ್ರಶಸ್ತಿ



**ದಾವಣಗೆರೆ:** ಬೆಂಗಳೂರಿನ ರಂಗಭೂಮಿ ಕಲಾವಿದರ ಒಕ್ಕೂಟ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ನವಂಬರ್ 1ನೇ ತಾರೀಖಿನಂದು ಕರ್ನಾಟಕ ರಾಜ್ಯೋತ್ಸವ ರಾಜ್ಯ ಪ್ರಶಸ್ತಿಗೆ ದಾವಣಗೆರೆಯ ಸಾಂಸ್ಕೃತಿಕ ರಾಯಭಾರಿ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ವಿತರಿಸಲಾಗುವುದು ಎಂದು ರಂಗಭೂಮಿ ಕಲಾವಿದರ ಒಕ್ಕೂಟದ ಅಧ್ಯಕ್ಷರಾದ ಸಾಗರ ಅರ್. ಕಲಾದಗಿ ತಿಳಿಸಿದ್ದಾರೆ.

ಕರ್ನಾಟಕ ನೆಲ, ಜಲ, ಭಾಷೆ, ಸಾಹಿತ್ಯ, ಶಿಕ್ಷಣ, ಸಾಂಸ್ಕೃತಿಕ ನಿರಂತರ 4 ದಶಕಗಳಿಂದ ಯಕ್ಷಗಾನ ಸೇರಿದಂತೆ ಕಠಿಣ ಪರಿಶ್ರಮದಿಂದ ಸಾಧನೆ ಮಾಡುತ್ತಿರುವ ಶೆಣೈಯವರಿಗೆ ಈ ರಾಜ್ಯ ಪ್ರಶಸ್ತಿ ಪ್ರಧಾನ ಮಾಡಲಾಗುವುದೆಂದು ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಸಂಗೀತ ಮಠಪತಿಯವರು ಪ್ರಕಟಿಸಿದ್ದಾರೆ.

ಕ`ಲಾ ಕ`೦ ೦ ಚ` ಸೇರಿದಂತೆ ಯಕ್ಷರಂಗ, ಸಿನಿಮಾಸಿರಿ, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಕರ್ನಾಟಕ ಸಗಮ ಸಂಗೀತ ಪರಿಷತ್ ಸೇರಿದಂತೆ, ದಾವಣಗೆರೆ ಜಿಲ್ಲಾ ಛಾಯಾಗ್ರಾಹಕ ಸಂಘ, ಕರಾವಳಿ ಮಿತ್ರ ಮಂಡಳಿ, ಶ್ರೀ ಗಾಯತ್ರಿ ಪರಿವಾರ, ಕನ್ನಡ ಸಾಹಿತ್ಯ ಪರಿಷತ್ತು, ಬಿಚ್ಕತ್ತಿ ಕುಟುಂಬ, ಸಮಾನ ಮನಸ್ಕರ ವೇದಿಕೆ ಮುಂತಾದ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸರ್ವ ಸದಸ್ಯರು, ಶೆಣೈಯವರಿಗೆ ಅಭಿಮಾನದಿಂದ ಅಭಿನಂದಿಸಿದ್ದಾರೆ.

# ಯಶಸ್ವಿಯಾದ ಕುವೆಂಪು ವಿ.ವಿಯ 398ನೇ ಸಿಂಡಿಕೇಟ್ ಸಭೆ



**ಚಿಕ್ಕಮಗಳೂರು:** ಕುವೆಂಪು ವಿಶ್ವವಿದ್ಯಾಲಯದ 398ನೇ ಸಿಂಡಿಕೇಟ್ ಸಭೆಯು ಸಹ್ಯಾದ್ರಿ ಇನ್ಸಿ ಟ್ಯೂಟ್ ಆಫ್ ಕಾಮರ್ಸ್, ಪ್ರಥಮ ದರ್ಜೆ ಕಾಲೇಜು ಚಿಕ್ಕಮಗಳೂರಿನಲ್ಲಿ ಜರುಗಿತು.

ಸಭೆಗೂ ಮುನ್ನ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಮಾನ್ಯ ಕುಲಪತಿಗಳಾದ ಪ್ರೊ. ಶರತ್ ಅನಂತ್‌ಮೂರ್ತಿರವರು ಸಹ್ಯಾದ್ರಿ ಕಾಲೇಜು ಮತ್ತು ಅದರ ಆಡಳಿತ ವ್ಯವಸ್ಥೆಗಳು ತುಂಬಾ ಶಿಸ್ತಿನಿಂದ ಕೂಡಿದ್ದು ವಿದ್ಯಾರ್ಥಿಗಳು ಸಹ ತಮ್ಮ ಜೀವಿತದಲ್ಲಿ ಶಿಸ್ತನ್ನು ಅಳವಡಿಸಿಕೊಳ್ಳುವಂತೆ ತಿಳಿಸಿದರು ಹಾಗೂ ಸಭೆಯ ನಂತರದಲ್ಲಿ ಅಚ್ಚುಕಟ್ಟಾಗಿ ಸಭೆಯನ್ನು ಆಯೋಜಿಸಿದಕ್ಕಾಗಿ ಆಡಳಿತ ಮಂಡಳಿ ಹಾಗೂ ಸಂಸ್ಥೆಯನ್ನು ಪ್ರಶಂಸಿಸಿ ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀಮತಿ ನಳಿನಿ ಡಿ.ಸಾ ರವರನ್ನು ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಶ್ರೀಯುತ ಉಲ್ಲಾಸ್ ಇ.ಜಿ ರವರನ್ನು ಸನ್ಮಾನಿಸಿದರು.

ಸಭೆಯಲ್ಲಿ ಕುವೆಂಪು ವಿಶ್ವವಿದ್ಯಾಲಯದ ಕುಲಸಚಿವರು(ಆಡಳಿತ) ಪ್ರೊ.ಮಂಜುನಾಥ್ ಎ.ಎಲ್, ಕುಲಸಚಿವರು(ಮೌಲ್ಯಮಾಪನ) ಪ್ರೊ. ಆರ್ ತಿಮ್ಮರಾಯಪ್ಪ ಹಾಗೂ ವಿಶ್ವವಿದ್ಯಾಲಯದ ಎಲ್ಲಾ ಸಿಂಡಿಕೇಟ್‌ನ ಸದಸ್ಯರು ಉಪಸ್ಥಿತರಿದ್ದರು.

# ರಾಜ್ಯ ಪದಾಧಿಕಾರಿಗಳಿಗೆ ಅಭಿನಂದನೆ



**ಹಾಸನ:** ನಗರ ಹಾಗೂ ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳು, ಎಲ್ಲಾ ಸರಕಾರಿ, ಆರೆ ಸರಕಾರಿ ಇಲಾಖೆಯ ನೌಕರರ ಸಂಘಗಳ ವತಿಯಿಂದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ

ಸಂಘಕ್ಕೆ ಜಿಲ್ಲೆಯಿಂದ ಪದಾಧಿಕಾರಿಗಳಾಗಿ ಆಯ್ಕೆಯಾಗಿರುವ ನೂತನ ಪದಾಧಿಕಾರಿಗಳಿಗೆ ಇದೇ ಅ.17ರ ಶುಕ್ರವಾರದಂದು ಸಂಜೆ 5 ಗಂಟೆಗೆ ನಗರದ ಎಂ.ಜಿ. ರಸ್ತೆಯಲ್ಲಿರುವ ವಿಶ್ವೇಶ್ವರಯ್ಯ ಭವನದಲ್ಲಿ ಅಭಿನಂದನಾ ಸಮಾರಂಭ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಸರಕಾರಿ ನೌಕರರ ಕೋ-ಆಪರೇಟಿವ್ ಸೊಸೈಟಿ ಅಧ್ಯಕ್ಷ ಎಂ.ಎನ್. ಪರಮೇಶ್ ತಿಳಿಸಿದರು.

ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್.ಷಡಾಕ್ಷರಿ ಅವರ ನೇತೃತ್ವದಲ್ಲಿ ರಾಜ್ಯ ಮಟ್ಟದ ಸಂಘದಲ್ಲಿ ಜಿಲ್ಲೆಯಿಂದ ಹಲವಾರು ಪ್ರಮುಖರು ಸ್ಥಾನ ಪಡೆದಿದ್ದಾರೆ.

ಜಿಲ್ಲಾ ರಾಜ್ಯ ನೌಕರರ ಕೋ-ಆಪರೇಟಿವ್ ಸೊಸೈಟಿ ಹಾಗೂ ಜಿಲ್ಲಾ ರಾಜ್ಯ ಸರ್ಕಾರಿ, ಅರೆ ಸರ್ಕಾರಿ ಹಾಗೂ ನಿಗಮ ಮಂಡಳಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಸಂಸ್ಥಾಪಕ ಅಧ್ಯಕ್ಷ ಮತ್ತು ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷರಾಗಿರುವ ಕೆ.ಎಂ.ಶ್ರೀನಿವಾಸ್ ಅವರು ರಾಜ್ಯ ಉಪಾಧ್ಯಕ್ಷರಾಗಿ ನೇಮಕಗೊಂಡಿದ್ದಾರೆ.

ನಮ್ಮ ಸೊಸೈಟಿಯ ಗೌರವಾಧ್ಯಕ್ಷ ಜಿ.ಪಿ.ವಿಶ್ವನಾಥ ಅವರು ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ, ಸೊಸೈಟಿಯ ನಿರ್ದೇಶಕರಾದ ಎಸ್.ಮಧು ಅವರು ರಾಜ್ಯ ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಹಾಗೂ ಸದಸ್ಯರಾದ ರಾಜು ಟಿ. ಅವರು ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ ನೇಮಕಗೊಂಡಿದ್ದಾರೆ. ಇದು ನಮಗೆಲ್ಲ ಸಂತೋಷ ತಂದಿದೆ ಎಂದರು.

ನಮ್ಮ ಸೊಸೈಟಿ ವತಿಯಿಂದ ಹಾಗೂ ವಿವಿಧ ವೃಂದ ಸಂಘಗಳು, ಇಲಾಖೆಯ ಆತ್ಮೀಯರು ಮತ್ತು ಸ್ವಾಭಿಮಾನಿ ಸ್ನೇಹ ಬಳಗದ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯಿಂದ ರಾಜ್ಯ ಸಂಘದ ವಿವಿಧ ಹುದ್ದೆಗಳಿಗೆ ಆಯ್ಕೆಯಾಗಿರುವವರಿಗೆ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ. ಎಲ್ಲರೂ ಬಂದು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಹಾಸನದ ಶ್ರೀ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಅವರು ದಿವ್ಯ ಸಾನಿಧ್ಯವಹಿಸಲಿದ್ದಾರೆ. ಅಭಿನಂದನಾ ಸಮರ್ಪಣೆಯನ್ನು ಜಿಲ್ಲಾ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ, ರಾಜ್ಯ ಉಪಾಧ್ಯಕ್ಷ ಕೆ.ಎಂ. ಶ್ರೀನಿವಾಸ್ ನಡೆಸಿಕೊಡಲಿದ್ದಾರೆ. ರಾಜ್ಯ ಸಂಘಟನಾ ಕಾರ್ಯದರ್ಶಿಗಳಾದ ಟಿ. ರಾಜು, ವಿಶ್ವನಾಥ ಜಿ.ಪಿ. ರಾಜ್ಯ ಸಾಂಸ್ಕೃತಿಕ ಕಾರ್ಯದರ್ಶಿ ಎನ್. ಮಧು ಉಪಸ್ಥಿತರಿರುವರು ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಸರಕಾರಿ ನೌಕರರ ಕೋ-ಆಪರೇಟಿವ್ ಸೊಸೈಟಿ ಗೌರವಾಧ್ಯಕ್ಷ ಬಿ.ಎನ್. ರಾಜಶೇಖರಪ್ಪ, ನಿರ್ದೇಶಕ ಎನ್. ಪಾಲಾಕ್ಷ, ಉಪಾಧ್ಯಕ್ಷ ಬಿ.ಆರ್.ಧರ್ಮ, ಗೌರವ ಕಾರ್ಯದರ್ಶಿ ಸತೀಶ್, ಉಪಾಧ್ಯಕ್ಷ ಗೋಪಾಲಕೃಷ್ಣ ಮೊದಲಾದವರಿದ್ದರು. ಕಾರ್ಯಕ್ರಮ ನಂತರ ಸಂಜೆ ಮಿಮಿಕ್ರಿ ಗೋಪಿ ಮತ್ತು ತಂಡದವರಿಂದ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ ಇರಲಿದೆ.

# ಜಿಲ್ಲಾ ಉಸ್ತುವಾರಿ ಸಚಿವರಿಂದ ನೂತನ ತಾ.ಪಂ. ಕಟ್ಟಡ ಲೋಕಾರ್ಪಣೆ



**ಶಿವಮೊಗ್ಗ:** ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಜನಸಾಮಾನ್ಯರ ಪರಿಶ್ರಮದ ಫಲವಾಗಿ ಇಂದು ನೂತನ ತಾಲ್ಲೂಕು ಪಂಚಾಯ್ತಿ ಕಟ್ಟಡ ಉದ್ಘಾಟನೆಯಾಗಿರುವುದು ಬಹಳ ಸಂತೋಷವನ್ನು ಉಂಟು ಮಾಡಿದೆ ಎಂದು ಸಾರ್ವಜನಿಕ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ತಿಳಿಸಿದರು.

ಶನಿವಾರ ನಗರದಲ್ಲಿ ನೂತನ ತಾಲ್ಲೂಕು ಪಂಚಾಯತಿ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತಾನಾಡಿದರು.

ತಾಲ್ಲೂಕು ಪಂಚಾಯಿತಿ ನೂತನ ಕಟ್ಟಡವನ್ನು ಬಹಳ ಅಚ್ಚುಕಟ್ಟಾಗಿ ನಿರ್ಮಿಸಲಾಗಿದೆ ಎಂದ ಅವರು ಇನ್ನು ಬಾಕಿ ಉಳಿದಿರುವ ಕಾಮಗಾರಿಗಳಿಗೆ, ಹೆಚ್ಚಿನ ಅನುದಾನ ತಂದು ಉಳಿದ ಕೆಲಸವನ್ನು ಸಂಪೂರ್ಣ ಮಾಡಲು ಸಹಕರಿಸುವುದಾಗಿ ಇದೇ ವೇಳೆ ಭರವಸೆ ನೀಡಿದರು.

ಕಾರ್ಯಪಾಲಕ ಅಭಿಯಂತರರಾದ ಬಿ.ಎನ್. ಮಂಜುನಾಥ್ ಮಾತನಾಡಿ, ತಾ.ಪಂ. ಕಟ್ಟಡವು ರೂ.2 ಕೋಟಿ ಮೊತ್ತದಲ್ಲಿ ಅನುಮೋದನೆಗೊಂಡಿದ್ದು, 1.72 ಕೋಟಿ ಮೊತ್ತದಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗಿದೆ ಹಾಗೂ ಕಟ್ಟಡಕ್ಕೆ ತಾರಸಿ ಶೀಟ್ ಸೇರಿದಂತೆ ಇನ್ನೂ ಕೆಲವು ಕಾಮಗಾರಿಗಳು ಬಾಕಿ ಉಳಿದಿದ್ದು, ಸಚಿವರು ಅನುದಾನ ಬಿಡುಗಡೆ ಮಾಡಿಸಿಕೊಡಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶಿವಮೊಗ್ಗ ಗ್ರಾಮಾಂತರ ಶಾಸಕರಾದ ಶಾರದಾ ಪೂರ್ಯಾನಾಯ್ಕ್ ಮಾತನಾಡಿ, ತಾ.ಪಂ. ಕಟ್ಟಡವನ್ನು ಸುಸಜ್ಜಿತವಾಗಿನಿರ್ಮಿಸಲಾಗಿದೆ. ಮುಂಬರುವ ದಿನಗಳಲ್ಲಿ ತಾ.ಪಂ. ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಆಯ್ಕೆಯಾಗಿ ಇಲ್ಲಿ ಉತ್ತಮವಾದ ಆಡಳಿತ ನಡೆಸುವಂತಾಗಲಿ ಎಂದು ಹಾರೈಸಿದರು.

ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಚೇತನ್ ಕೆ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಎಸ್. ಚಂದ್ರಭೂಪಾಲ್, ತಾಲ್ಲೂಕು ಗ್ಯಾರಂಟಿ ಯೋಜನೆಯ ಅಧ್ಯಕ್ಷರಾದ ಮಧು ಹೆಚ್. ಎಂ, ಜಿ.ಪಂ.ಸಿಇಓ ಹೇಮಂತ್, ತಾಲ್ಲೂಕು ಪಂಚಾಯತ್ ಇಓ ತಾರಾ, ಇತರೆ ಅಧಿಕಾರಿಗಳು ಹಾಜರಿದ್ದರು.

# ವ್ಯಾಲಿಡೇಷನ್ ಆಕ್ಟಲ್ಲಿರುವ ಪರಿಷ್ಕೃತ ಅಂಶ ತೆಗೆದುಹಾಕಲು ಒತ್ತಾಯಿಸಿ ಮನವಿ



**ದಾವಣಗೆರೆ:** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವ್ಯಾಲಿಡೇಷನ್ ಆಕ್ಟ್ 2025ರ ಮುಖಾಂತರ ಸೇರಿಸಲ್ಪಟ್ಟಿದೆ ಎನ್ನಲಾದ ಪಿಂಚಣಿ ಪರಿಷ್ಕರಣೆಯ ಅಂಶವನ್ನು ತೆಗೆದುಹಾಕಲು ಸೂಕ್ತ ಕ್ರಮ ವಹಿಸುವಂತೆ ಆಗ್ರಹಿಸಿ ಬಿಎಸ್‌ಎನ್‌ಎಲ್ ನಿವೃತ್ತ ನೌಕರರು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಮೂಲಕ ಕೇಂದ್ರಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಕಳೆದ ಮಾರ್ಚ್‌ನಲ್ಲಿ ಲೋಕಸಭೆಯಲ್ಲಿ ಮಂಡಿಸಿ ಒಪ್ಪಿಗೆ ಪಡೆಯಲಾದ ಫೈನಾನ್ಸ್ ಬಿಲ್ಲಿನಲ್ಲಿ ಬಿ.ಎಸ್.ಎನ್.ಎಲ್. ನಿವೃತ್ತ ನೌಕರರ ಪಿಂಚಣಿಗೆ ಮಾತ್ರವಲ್ಲ ಕೇಂದ್ರ ಮತ್ತು ರಾಜ್ಯ ಸರ್ಕಾರದ ಎಲ್ಲಾ ನಿವೃತ್ತ ನೌಕರರ ಪಿಂಚಣಿಗೂ ಅನ್ವಯಿಸುತ್ತದೆ ಎಂದು ಬಿಲ್‌ನಲ್ಲಿ ತಿಳಿಸಲಾಗಿದೆ ಎಂದು ನಿವೃತ್ತ ನೌಕರರು ಬೇಸರ ಹೊರಹಾಕಿದರು.

ಪಿಂಚಣಿ ನಿಯಮಗಳಿಗೆ ಯಾವುದೇ ಪೂರ್ವಾಗ್ರಹವಿಲ್ಲದೆ, ಕೇಂದ್ರ ಸರ್ಕಾರವು ಪಿಂಚಣಿದಾರರ ನಡುವೆ ವ್ಯತ್ಯಾಸಗಳನ್ನು ಸಾಮಾನ್ಯ ತತ್ವವಾಗಿ ಸ್ಥಾಪಿಸುವ ಅಧಿಕಾರವನ್ನು ಹೊಂದಿದೆ. ಪಿಂಚಣಿದಾರರ ನಡುವೆ ವ್ಯತ್ಯಾಸವನ್ನು ಅಥವಾ ನಿರ್ದಿಷ್ಟವಾಗಿ ನಿವೃತ್ತಿ ದಿನಾಂಕದ ಆಧಾರದ ಮೇಲೆ ವ್ಯತ್ಯಾಸವನ್ನು ಮಾಡಬಹುದು ಎಂಬ ತತ್ವವನ್ನು ಈ ಊರ್ಜಿತಗೊಳಿಸುವ ಶಾಸನವು ಮಾನ್ಯ ಮಾಡುತ್ತದೆ.

ಸಿವಿಲ್ ಪಿಂಚಣಿದಾರರ ಪಿಂಚಣಿ ಪರಿಷ್ಕರಣೆಯನ್ನು ಪೂರ್ವಾನ್ವಯವಿಲ್ಲದಂತೆ ಪರಿಷ್ಕರಿಸುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ. ಇದು ನಿರ್ದಿಷ್ಟ ಅವಧಿಯ ಮೊದಲು ನಿವೃತ್ತರಾದ ಮತ್ತು ತದನಂತರ ನಿವೃತ್ತರಾದ ಪಿಂಚಣಿದಾರರ ನಡುವೆ ತಾರತಮ್ಯವನ್ನು ಏರ್ಪಡಿಸುತ್ತದೆ. ಇದು ಭಾರತ ಸಂವಿಧಾನವು ಕೊಡಮಾಡಿರುವ ಸಮಾನತೆಯ ಹಕ್ಕನ್ನು ಉಲ್ಲಂಘಿಸುತ್ತದೆ ಎಂದು ವಿಷಾದಿಸಿದರು.

ಈ ಸಂದರ್ಭದಲ್ಲಿ ಬಿಎಸ್‌ಎನ್‌ಎಲ್ ನಿವೃತ್ತರ ಮುಖಂಡರಾದ ಆರ್. ಆನಂದ, ಟಿ. ಷಣ್ಮುಖ, ನಂದಗೋಪಾಲ್ ಮತ್ತು ಎಂ.ವಿ. ಸ್ವಾಮಿ ಇದ್ದರು.

# ಸಂಸದರಿಂದ ಸಾರ್ವಜನಿಕರ ಅಹವಾಲು ಸ್ವೀಕಾರ

**ಬಳ್ಳಾರಿ:** ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರಾದ ಈ.ತುಕಾರಾಮ್ ಅವರು ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಹಾಗೂ ಇತರೆ ಯೋಜನೆಗಳ ಕುರಿತಂತೆ ಅ.13 ರಂದು ಬೆಳಿಗ್ಗೆ 09.30 ಗಂಟೆಗೆ ನಗರದ ಕೋಟೆ ಪ್ರದೇಶದ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು.

ಅಹವಾಲುಗಳಿರುವ ಸಾರ್ವಜನಿಕರು ಲಿಖಿತವಾಗಿ ಸಲ್ಲಿಸಬಹುದು.

ನಂತರ ಅಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ "ದಿಶಾ" ಸಮಿತಿಯ ದ್ವಿತೀಯ ತ್ರೈಮಾಸಿಕ ಸಭೆಯನ್ನು ನಡೆಸಲು ನಿಗದಿಪಡಿಸಲಾಗಿದೆ.

ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಮ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು.

ಸಭೆಗೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಅಗತ್ಯಪೂರ್ಣ ಮಾಹಿತಿಯೊಂದಿಗೆ ತಪ್ಪದೇ ಹಾಜರಿರಬೇಕು ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ದಿಶಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ತಿಳಿಸಿದ್ದಾರೆ.

# ಹೃದಯಾಘಾತದಿಂದ ಸಾವು



**ಚಿಕ್ಕಮಗಳೂರು:** ಬಸಗೋಡುಗ್ರಾಮದವರಾದ ಬಿ. ನಂಜುಂಡೇಗೌಡ್ರು 90 ವರ್ಷವಾಗಿದ್ದುಶನಿವಾರ ಮದ್ಯಾಹ್ನ ಹೃದಯಗಾತದಿಂದ ಮೃತರಾಗಿರುತ್ತಾರೆಇವರಿಗೆ ಮೂವರು ಪುತ್ರಿಯರು,ಇಬ್ಬರು ಪುತ್ರರು ಹಾಗೂ ಬಂಧು ಮಿತ್ರರನ್ನುಬಿಟ್ಟುಅಗಲಿರುತ್ತಾರೆ. ಇವರಅಂತ್ಯಕ್ರಿಯೆಯನ್ನು ಮದ್ಯಾಹ್ನ ಮೂರುಗಂಟೆಗೆ ಸ್ವಗ್ರಾಮದಲ್ಲಿ ನೆರವೇರಿಸಲಾಗುವುದು.

# ಚಿಕ್ಕಹಳ್ಳಿ ಗ್ರಾಮ ಪಂಚಾಯಿತಿ ಅಧಿಕಾರಿ ಅಮಾನತ್ತು

**ಹಾಸನ :** ಅರಕಲಗೂಡು ತಾಲ್ಲೂಕಿನ ಚಿಕ್ಕಹಳ್ಳಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿ.ಪಿ. ಮನು ಇವರು ಮಹೇಶ್ ಕೆ.ಕೆ. ಕೋನಾಪುರ ಗ್ರಾಮ, ಅರಕಲಗೂಡು ತಾಲ್ಲೂಕು ಇವರ ನಿವೇಶನ ಖಾತೆ ಸಂಖ್ಯೆ:52 ಮತ್ತು 206 ಕ್ಕೆ ಸಂಬಂಧಿಸಿದಂತೆ ಇ-ಸ್ವತ್ತು ವಿತರಣೆ ಮಾಡಲು ಹಣ ಪಡೆದಿರುವ ಮತ್ತು ಹೆಚ್ಚುವರಿ ಹಣಕ್ಕೆ ಬೇಡಿಕೆ ಇಟ್ಟಿರುವ ಸುದ್ದಿಯು ದಿನ ಪತ್ರಿಕೆಯಲ್ಲಿ ಸುದ್ದಿ ಮಾಧ್ಯಮಗಳಲ್ಲಿ ಸುದ್ದಿ ಪ್ರಸಾರವಾಗಿರುವ ಹಿನ್ನಲೆಯಲ್ಲಿ ಹಾಗೂ 15ನೇ ಹಣಕಾಸು

ಯೋಜನೆಯ ಅನುದಾನ ಮತ್ತು ನಿಧಿ-1, ನಿಧಿ-2 ರ ಅನುದಾನವನ್ನು ನಿಯಮ ಬಾಹಿರವಾಗಿ ವೆಚ್ಚ ಮಾಡಿರುವ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಅರಕಲಗೂಡು ಇವರು ತನಿಖೆ ನಡೆಸಿ ಸಲ್ಲಿಸಿರುವ ತನಿಖಾ ವರದಿಯನ್ವಯ ಇವರ ಮೇಲಿನ ಆರೋಪಗಳ ಕುರಿತು ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸಿ.ಪಿ. ಮನು, ಪಂಚಾಯಿತಿ

ಅಭಿವೃದ್ಧಿ ಅಧಿಕಾರಿ, ಚಿಕ್ಕಹಳ್ಳಿ ಗ್ರಾಮ ಪಂಚಾಯಿತಿ ಇವರನ್ನು ಅ.06 ರಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ಅವರು ತಿಳಿಸಿದ್ದಾರೆ.

# ಪೋಷಣ ಮಾಸಾಚರಣೆ ಕಾರ್ಯಕ್ರಮದ ಸಮಾರೋಪ ಸಮಾರಂಭ

**ಗದಗ :** ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಹಾಗೂ ಶಿಶು ಅಭಿವೃದ್ಧಿ ಯೋಜನೆ, ಗದಗ ಇವರ ಸಂಯುಕ್ತಾಶ್ರಯದಲ್ಲಿ ಗದಗ ತಾಲೂಕಿನ ಬ್ಯಾಂ ಕ ರ್ಸ ಕಾಲೋನಿಯ ಜಾಕಿರಹುಸೇನ ಸಮುದಾಯ ಭವನದಲ್ಲಿ ಶುಕ್ರವಾರ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪೋಷಣ ಮಾಸಾಚರಣೆ ಕಾರ್ಯಕ್ರಮದ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಪೌಷ್ಠಿಕ ಆಹಾರವನ್ನು ಮಕ್ಕಳು, ಗರ್ಭಿಣಿ, ಬಾಣಂತಿಯರು ಸರಿಯಾಗಿ ಸೇವಿಸಬೇಕು ಹಾಗೂ ಅದರ ಮಹತ್ವದ ಬಗ್ಗೆ ವಿವರವಾಗಿ ಮಾತನಾಡಿದರು. ನಮ್ಮ ಹಾಗೂ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿರಿಸಿಕೊಳ್ಳಬೇಕು. ಇದರಿಂದ ರೋಗ ರುಜಿನೆಗಳನ್ನು ತಡೆಗಟ್ಟಿ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಹೇಳಿದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ., ಮಾತನಾಡಿ ಸೆಪ್ಟೆಂಬರ ಮಾಹೆಯಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಬೊಜ್ಜುತನ ನಿವಾರಣೆ, ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವುದು, ಪೋಷಣ ಭಿ ಪಢಾಯಿ ಭಿ, ಶಿಶು & ಚಿಕ್ಕ ಮಕ್ಕಳ ಆಹಾರ ಅಭ್ಯಾಸಗಳು, ಪುರುಷರ ಸಹಬಾಗಿತ್ವದ ಹಾಗೂ ಇಲಾಖೆಯ ವಿವಿಧ ಯೋಜನೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

# ಶ್ರೀಲಂಕಾ ಅಂತಾರಾಷ್ಟ್ರೀಯ ಕರಾಟೆಯಲ್ಲಿ ಜಿಲ್ಲೆಯ ಇಬ್ಬರಿಗೆ ಪದಕ



**ಶಿವಮೊಗ್ಗ :** ಶ್ರೀಲಂಕಾದ ಯೋನ್ ಸೇನಾನ್ಕಯ ವಾತೂಪಿತಿವಲ ಒಳಾಂಗಣ ಕ್ರೀಡಾಂಗಣದಲ್ಲಿ ಶೋಟೋಖಾನ್ ವರ್ಲ್ಡ್ ಕರಾಟೆ ಶ್ರೀಲಂಕಾ ವತಿಯಿಂದ ಆಯೋಜನೆ ಮಾಡಿದ 9ನೇ ಅಂತರಾಷ್ಟ್ರೀಯ ಮುಕ್ತ ಕರಾಟೆ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ದೇಶವನ್ನು ಪ್ರತಿನಿಧಿಸಿದ್ದ ಭಾರತದ ಶೋಟೋಖಾನ್ ವರ್ಲ್ಡ್ ಕರಾಟೆ ತಂಡದ ಶಿವಮೊಗ್ಗ ಜಿಲ್ಲೆಯ ಶ್ರೀಮತಿ ಮೀನಾಕ್ಷಿ ಕಟಾ ವಿಭಾಗದಲ್ಲಿ ದ್ವಿತೀಯ ಕುಮಿತಿ ವಿಭಾಗದಲ್ಲಿ ದ್ವಿತೀಯ ಮತ್ತು ಶಿಲ್ಪಿ ಮಂಜುನಾಥ ಕುಮಿತಿ ವಿಭಾಗದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದು ಈ ಸಂದರ್ಭದಲ್ಲಿ ಶ್ರೀಲಂಕಾ ಪಂದ್ಯಾವಳಿ ಆಯೋಜಕರಾದ ಮೇಡಾಜಾ ಸೇರಿದಂತೆ ಶೋಟೋಖಾನ್ ವರ್ಲ್ಡ್ ಕರಾಟೆ ಸೌತ್ ಏಷ್ಯಾ ಮುಖ್ಯಸ್ಥರಾದ ಶಿವಮೊಗ್ಗ ವಿನೋದ್ ಉಪಸ್ಥಿತರಿದ್ದು ವಿಜೇತ ಕ್ರೀಡಾಪಟುಗಳಿಗೆ

ಶಿವಮೊಗ್ಗ ಸಿಟಿ ಕರಾಟೆ ಅಸೋಸಿಯೇಷನ್ ನ ಎಲ್ಲಾ ಪದಾಧಿಕಾರಿಗಳು ಶುಭಕೋರಿದ್ದಾರೆ.

# ಸ್ಟ್ರೆಂಥ್ ಲಿಫ್ಟಿಂಗ್, ಇನ್ ಕ್ಲೀನ್ ಬೆಂಚ್ ಪ್ರೆಸ್ ಚಾಂಪಿಯನ್ ಶಿಪ್‌ನಲ್ಲಿ ಎರಡು ಚಿನ್ನದ ಪದಕ

**ದಾವಣಗೆರೆ:** ಕರ್ನಾಟಕ ರಾಜ್ಯ ಸ್ಟ್ರೆಂಥ್ ಲಿಫ್ಟಿಂಗ್ ಅಸೋಸಿಯೇಷನ್ ದಾವಣಗೆರೆ ವತಿಯಿಂದ ಈಚೆಗೆ ನಗರದ ಬೀರಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಸ್ಟ್ರೆಂಥ್ ಲಿಫ್ಟಿಂಗ್ ಮತ್ತು ಇನ್ ಕ್ಲೀನ್ ಬೆಂಚ್ ಪ್ರೆಸ್ ಚಾಂಪಿಯನ್ ಶಿಪ್-2025 ಸ್ಪರ್ಧೆಯಲ್ಲಿ ದಾವಣಗೆರೆ ಕ್ಲಬ್‌ನ ಜಿಮ್ ಕ್ರೀಡಾಪಟುಗಳಾದ ಮಹೇಶ್ ಮತ್ತು ಜಿ.ಎಸ್ ದಿನೇಶ ಎರಡು ವಿಭಾಗದಲ್ಲಿ ಭಾಗವಹಿಸಿ, ಪ್ರಥಮ ಸ್ಥಾನ ಪಡೆದು ಎರಡು ಚಿನ್ನದ ಪದಕಗಳನ್ನು ಪಡೆದಿದ್ದಾರೆ.

ವಿಕಲಚೇತನರಾಗಿರುವ ವಿಜಯ್ ಥಾಮಸ್ ಇವರು ಇನ್ ಕ್ಲೀನ್ ಬೆಂಚ್ ಪ್ರೆಸ್‌ನಲ್ಲಿ ಭಾಗವಹಿಸಿ 96 ಕೆಜಿ ವಿಭಾಗದಲ್ಲಿ ಪ್ರಥಮ ಸ್ಥಾನ ಒಂದು ಚಿನ್ನದ ಪದಕ ಪಡೆದಿರುವುದು ಮಾತ್ರವಲ್ಲ, ಸ್ಟ್ರಾಂಗ್‌ಮೆನ್ ಎಂಬ ಬಿರುದನ್ನು ಸಹ ಪಡೆದಿದ್ದಾರೆ. ಇವರೆಲ್ಲರೂ ನವೆಂಬರ್‌ನಲ್ಲಿ ಸಿಕ್ಕೀಂ ನಲ್ಲಿ ನಡೆಯುವ ರಾಷ್ಟ್ರಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.



ಇವರುಗಳು ದಾವಣಗೆರೆ ಕ್ಲಬ್ ನ ಜಿಮ್ ಕೋಚ್ ಹಾಗೂ ಸ್ಟೇಟ್ ರೆಫರಿ ಜಿ.ಗೋಪಾಲ್ ಇವರ ಮಾರ್ಗದರ್ಶನದಲ್ಲಿ ತರಬೇತಿ ಪಡೆದಿದ್ದು, ಇವರಿಗೆ ದಾವಣಗೆರೆ ಕ್ಲಬ್ ಅಧ್ಯಕ್ಷರಾದ ಎ.ಬಿ.ಚಂದ್ರಶೇಖರ್, ಉಪಾಧ್ಯಕ್ಷರಾದ ಎಸ್.ಜಿ. ಉಳವಯ್ಯ, ಕಾರ್ಯದರ್ಶಿ ರವಿಶಂಕರ್ ಪಲ್ಲಾಗಟ್ಟಿ, ಸಹ ಕಾರ್ಯದರ್ಶಿ ಐನಳ್ಳಿ ಜಯದೀಪ್, ಖಜಾಂಚಿ ಎಸ್.ಕೆ. ಪ್ರಶಾಂತ್ ಗುಪ್ತಾ, ನಿರ್ದೇಶಕರುಗಳಾದ ಬೆಳ್ಳೂಡಿ ಸದಾನಂದ, ಹೆಚ್.ವಿ. ರುದ್ರೇಶ್, ಬಾದಾಮಿ ಮಲ್ಲಿಕಾರ್ಜುನ್, ಅಭಿಷೇಕ್ ಬೇತೂರು, ವಿಶ್ವನಾಥ್ ಬಿ. ಪಾಟೀಲ್, .ಬಿ.ಟಿ. ಸುಪುತ್ರ ಕುಮಾರ್ ಇವರು ಅಭಿನಂದಿಸಿದ್ದಾರೆ.

### ಬೇಡ ಬುಡಕಟ್ಟಿನ ಭಾಷಿಕ ಸಂಕಥನ ಕೃತಿ ಲೋಕಾರ್ಪಣೆಯಲ್ಲಿ ಚಿಂತಕ ಡಾ.ಬಂಜಗೆರೆ ಜಯಪ್ರಕಾಶ್ ಅಭಿಮತ

# ಬದುಕಿನ ದಾಖಲಾತಿ "ಭಾಷೆ"

**ಚಿತ್ರದುರ್ಗ:** ಭಾಷೆ ಎಂಬುದು ಬದುಕಿನ ದಾಖಲಾತಿ. ಇತಿಹಾಸದ ಬಹಳಷ್ಟು ಅಂಶಗಳನ್ನು ಭಾಷೆ ಒಳಗೊಂಡಿರುತ್ತದೆ. ಒಂದು ಸಮುದಾಯದ ಇತಿಹಾಸ, ಸಂಸ್ಕೃತಿ, ಬೆಳವಣಿಗೆ ಹಾಗೂ ಮೂಲ, ವೃತ್ತಿ ಧೋರಣೆಗಳನ್ನು ಭಾಷೆ ಬಹಳ ಚೆನ್ನಾಗಿ ಬಿಂಬಿಸಲಿದೆ ಎಂದು ಸಂಸ್ಕೃತಿ ಚಿಂತಕರು ಹಾಗೂ ಹಂಪಿ ಕನ್ನಡ ವಿಶ್ವವಿದ್ಯಾಲಯ ಸಿಂಡಿಕೇಟ್ ಸದಸ್ಯ ಡಾ.ಬಂಜಗೆರೆ ಜಯಪ್ರಕಾಶ್ ಹೇಳಿದರು.

ನಗರದ ಪತ್ರಿಕಾಭವನದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಶನಿವಾರ ಡಾ.ಆಂಜನೇಯ ಉರ್ತಾಳ್ ಅವರ ಬೇಡ ಬುಡಕಟ್ಟಿನ ಭಾಷಿಕ ಸಂಕಥನ ಕೃತಿ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಆಂಜನೇಯ ಉರ್ತಾಳ್ ಅವರ ಬೇಡ ಬುಡಕಟ್ಟಿನ ಭಾಷಿಕ ಸಂಕಥನ ಕೃತಿಯು ಮ್ಯಾಸಬೇಡ ಬುಡಕಟ್ಟು ಕರ್ನಾಟಕದ ಯಾವ ಸನ್ನಿವೇಶಗಳಲ್ಲಿ ಇಲ್ಲಿಗೆ ಬಂದಿದೆ, ಯಾವ ರೀತಿಯಲ್ಲಿ ಜೀವನ ಕ್ರಮ ರೂಪಿಸಿಕೊಂಡಿದೆ ಎನ್ನುವುದರ ಕುರಿತು ಅಚ್ಚುಕಟ್ಟಾಗಿ, ಒಳ್ಳೆಯ ಅಧ್ಯಯನ ಕ್ರಮ ಅನುಸರಿಸಿ ಅತ್ಯಂತ ಶ್ರದ್ಧೆಯಿಂದ ನಿರೂಪಿಸಲಾಗಿದೆ. ಹೊಸ ವಿಷಯವನ್ನು ಮ್ಯಾಸಬೇಡ ಬುಡಕಟ್ಟಿನ ಸಂದರ್ಭಕ್ಕೆ ತಂದು ಅವರ ಭಾಷಿಕ ಸಂಕಥನ ಕಟ್ಟಿಕೊಡಲಾಗಿದೆ. ಹಾಗಾಗಿ ಇದು ವಿಶಿಷ್ಟ ಹಾಗೂ ಗಮನಾರ್ಹವಾಗಿದೆ. ಯಾವುದೇ ಬುಡಕಟ್ಟುಗಳ ಬಗ್ಗೆ ಅಧ್ಯಯನ ಮಾಡಬೇಕಾದರೆ ಸಾಮಾನ್ಯವಾಗಿ ಆಚರಣೆ, ದೇವರು, ಬೆಡಗು, ಕುಲಗಳ ಬಗ್ಗೆ ಹಾಗೂ ಶರೀರಶಾಸ್ತ್ರದ ಬಗ್ಗೆ ಅಧ್ಯಯನ ಮಾಡುತ್ತಾರೆ. ಆದೀಮ ಸಮುದಾಯಗಳಾದ ಬುಡಕಟ್ಟುಗಳು ತಮ್ಮ ಚರಿತ್ರೆಯನ್ನು ಯಾವ ರೀತಿಯಾಗಿ ರೂಪಿಸಿಕೊಂಡಿವೆ ಎಂಬುದನ್ನು ಭಾಷಾಶಾಸ್ತ್ರದ ಆಧಾರದಲ್ಲಿ ಸಾಮಾಜಿಕ ಉಪಭಾಷೆಯನ್ನು ವಿಸ್ತಾರವಾಗಿ ಅಧ್ಯಯನ ಮಾಡುವ ಮೂಲಕ ಕಟ್ಟಿಕೊಡಲಾಗಿದೆ ಎಂದು ಹೇಳಿದರು.

ಪ್ರತಿಯೊಂದು ಬುಡಕಟ್ಟು ತನ್ನದೇ ಒಂದು ಭಾಷಾ ತಳಹದಿ ಹೊಂದಿರುತ್ತದೆ. ಪ್ರತಿಯೊಂದು ಬುಡಕಟ್ಟು ಒಂದು ಕಾಲದಲ್ಲಿ ಸ್ವಯಂಪೂರ್ಣವಾಗಿದ್ದು, ತನ್ನದೇ ವಾಸದ ನೆಲೆ, ಬದುಕಿನ ಕ್ರಮ, ಆಲೋಚನಾ ಕ್ರಮ, ಆರಾಧನಾ ಕ್ರಮ, ವೈವಾಹಿಕ ಕ್ರಮ ಸೇರಿದಂತೆ ಎಲ್ಲವನ್ನೂ ಹೊಂದಿದ್ದು,



ಪ್ರದೇಶಗಳಲ್ಲಿ ಬೆರೆಯುತ್ತಾ ವಿಶಿಷ್ಟವಾಗಿರುವ ಭಾಷೆಗಳಾಗಿ ಬೆಳೆಯುತ್ತವೆ. ಬುಡಕಟ್ಟುಗಳು ಬೆಳವಣಿಗೆಯಾದ ವಿಧಾನಗಳು ಹೇಗೆ ಎಂಬುದನ್ನು ಭಾಷೆಯ ದಾಖಲಾತಿ ಬಿಡಿಸಿ ಬಿಡಿಸಿ ತೋರಿಸಲಿದೆ ಎಂದು ತಿಳಿಸಿದ ಅವರು, ಸಾಮಾಜಿಕ ಉಪಭಾಷೆಗಳನ್ನು ಅಧ್ಯಯನ ಮಾಡುವುದು ಪ್ರಾದೇಶಿಕ ಉಪಭಾಷೆಗಳನ್ನು ಅಧ್ಯಯನ ಮಾಡುವಷ್ಟೇ ಮಹತ್ವವಾದುದು. ಜಾತಿ, ಕುಲ, ಪಂಗಡಗಳ ದೇಶದಲ್ಲಿ ಸಂಸ್ಕೃತಿಯ ಪ್ರತಿ ಸಣ್ಣ ವಿವರಗಳನ್ನು ಸೂಕ್ಷ್ಮ ಅಧ್ಯಯನಗಳನ್ನು ಮಾಡಿದಷ್ಟು ಭಾರತೀಯ ಸಮಾಜದ ವೈಶಿಷ್ಟ್ಯತೆ ಹಾಗೂ ಔದಾರ್ಯತೆ ಅರ್ಥವಾಗಲಿದೆ. ಪ್ರತಿ ಬುಡಕಟ್ಟಿನ ಭಾಷೆಯು ಕನ್ನಡ ಕಟ್ಟಲು ಕೆಲಸ ಮಾಡಿದೆ ಎಂದು ಹೇಳಿದರು.

ಶಿವಮೊಗ್ಗ ಸರ್ಕಾರಿ ವಿಜ್ಞಾನ ಕಾಲೇಜಿನ ಪ್ರಾಧ್ಯಾಪಕ ಡಾ.ಎಸ್.ಎಂ.ಮುತ್ತಯ್ಯ ಮಾತನಾಡಿ, ಜಾತಿ ಅವಮಾನ, ವೃತ್ತಿ ಅವಮಾನ ಎಂದು ಕೇಳಿದ್ದೇವೆ ಆದರೆ ನಮ್ಮ ಈ ಭಾಗದ ಜನರು ತಮ್ಮ ಬದುಕಿನಲ್ಲಿ ಭಾಷೆಯಿಂದ ಅವಮಾನ ಅನುಭವಿಸಿದ್ದಾರೆ. ಇಂತಹ ಅವಮಾನದ ಸಂಗತಿ, ಅವಮಾನದ ಅಸ್ತ್ರವನ್ನು ಆಂಜನೇಯ ಉರ್ತಾಳ್ ಅವರು ಅಧ್ಯಯನಕ್ಕೆ ಯೋಗ್ಯವಾದ ವಸ್ತು ಆಯ್ಕೆ ಮಾಡಿಕೊಂಡು, ಸಮಾಜದಲ್ಲಿ ಆ ಭಾಷೆಗೆ ಇರುವ ಅವಮಾನ ಹಾಗೂ ಶ್ರೇಷ್ಟತೆಯ ವ್ಯಸವವನ್ನು ಕಳಚಿದ್ದಾರೆ ಎಂದು ಅಭಿಪ್ರಾಯವ್ಯಕ್ತಪಡಿಸಿದರು.

ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಪ್ರಾಂಶುಪಾಲ ಡಾ.ಜೆ.ಕರಿಯಪ್ಪ ಮಾಳಿಗೆ ಮಾತನಾಡಿ, ಸಂಶೋಧನೆಯ ಗುಣಮಟ್ಟದ ಪ್ರಶ್ನೆ ಎದುರಾಗಿರುವ ಕಾಲಘಟ್ಟದಲ್ಲಿ 'ಬೇಡ ಬುಡಕಟ್ಟಿನ ಭಾಷಿಕ ಸಂಕಥನ' ಬಯಲುಸೀಮೆಯ ಬೇಡ ಬುಡಕಟ್ಟಿನ ಸಮಾಜೋಭಾಷಿಕ ಅಧ್ಯಯನಕ್ಕೊಂದು ಮಾದರಿ ಎನ್ನಬಹುದಾದ ಸಂಶೋಧನಾ ಕೃತಿ ಇದಾಗಿದೆ. ಪರಂಪರೆ ಮತ್ತು ವರ್ತಮಾನದ ಮಧ್ಯೆ ಸಹಜವಾಗಿಯೇ ಏರ್ಪಡುವ ಪಲ್ಲಟಗಳನ್ನು ತಾತ್ವಿಕವಾಗಿ ವಿವೇಚಿಸಿದ್ದಾರೆ.

ಸಂಶೋಧನೆ ಕೃತಿ ಎಂದರೆ ಅದು ಸೃಜನಶೀಲ ಸಾಹಿತ್ಯ. ಇಲ್ಲಿ ಅಧ್ಯಯನದ ಜತೆ ಭಾಷೆ, ಪರಿಸರ ಹಾಗೂ ವಿಷಯದ ಒಳಗೊಳ್ಳುವಿಕೆಯನ್ನು ನಿರೂಪಣೆ ಮಾಡಲಾಗಿರುತ್ತದೆ. ಈ ಮೂಲಕ ಸಮುದಾಯವನ್ನು ಸಕಲ ರೀತಿಯಲ್ಲೂ ಕಟ್ಟಿಕೊಡುವ ಶ್ರೀಮಂತಿಕೆಯ ಸಾಹಿತ್ಯವಾಗಿದೆ ಎಂದರು.

ಭಾಷೆಯ ಕೃಷಿಗೆ ಸಂಶೋಧನಾ ಕ್ಷೇತ್ರ ಹೆಚ್ಚು ನೆರವಾಗಿದೆ. ಕೇವಲ ಪದವಿ, ಸ್ನಾತಕೋತ್ತರ ಪದವಿ ಉಪನ್ಯಾಸಕರು ಸಂಶೋಧನೆ ನಡೆಸಬೇಕು ಎಂಬ ನಿಯಮ ಎಲ್ಲಿಯೂ ಇಲ್ಲ. ಪ್ರಾಥಮಿಕ ಶಾಲೆ ಶಿಕ್ಷಕರು ಸಹ ಆಸಕ್ತಿಯಿಂದ ಅಧ್ಯಯನ ನಡೆಸಿ ಸಂಶೋಧನೆ ನಡೆಸಬಹುದು. ಹೆಚ್ಚಿನ ಆಸಕ್ತರು ಈ ಕ್ಷೇತ್ರಕ್ಕೆ ಬರಬೇಕು ಎಂದು ತಿಳಿಸಿದರು.

ಗಡಿ ಪ್ರದೇಶಗಳಲ್ಲಿನ ಭಾಷಾಸಂಪರ್ಕ ಮತ್ತು ಭಾಷಾಮಿಶ್ರಣಕ್ಕೆ ಕಾರಣವಾಗುವ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸನ್ನಿವೇಶಗಳು, ಅವುಗಳ ಮಧ್ಯ ನಡೆಯುವ ನುಡಿಬೆರಕೆ ಮತ್ತು ನುಡಿಜಿಗಿತಗಳು ಹೇಗೆ ರೂಪುಗೊಳ್ಳುತ್ತವೆ ಎನ್ನವುದನ್ನು ತಾರ್ಕಿಕವಾಗಿ ನಿರೂಪಿಸಿದ್ದಾರೆ. ಡಾ. ಆಂಜನೇಯ ಉರ್ತಾಳ್ ಅವರ ವ್ಯಾಪಕವಾದ ಕ್ಷೇತ್ರಕಾರ್ಯದ ಜೊತೆಗೆ ಸಾಮಾಜಿಕ, ಜಾನಪದ, ಭಾಷಿಕ ಕೃತಿಗಳ ವಿಸ್ತೃತ ಅಧ್ಯಯನವು ಈ ಕೃತಿಯ ಗುಣಾತ್ಮಕ ಅಂಶವಾಗಿದೆ ಎಂದರು.

ವ್ಯಾವಹಾರಿಕ ಭಾಷೆಯ ವಿಶ್ಲೇಷಣೆ ಮತ್ತು ವಿಷಯಪ್ರತಿಪಾದನೆಯಲ್ಲಿ ಕೃತಿಕಾರರು ತೋರಿರುವ ಸಮತೋಲನ ಮನೋಧರ್ಮ, ಶಿಸ್ತು, ಬದ್ಧತೆಯು ಕೃತಿಯ ಮೌಲ್ಯವನ್ನು ಹೆಚ್ಚಿಸಿವೆ. ಈ ಎಲ್ಲಾ ಅಂಶಗಳಿಂದ ಇದು ಸಮುದಾಯದ ಪ್ರಾದೇಶಿಕ ಭಾಷಿಕ ಸಂಸ್ಕೃತಿಯನ್ನು ಕುರಿತಾದ ಮುಖ್ಯ ಕೃತಿಯಾಗಿದೆ ಎಂದು ತಿಳಿಸಿದರು.

ಹೊಸದುರ್ಗ ಕಿಟ್ಟದಾಳ್ ಕಲ್ಪತರು ಸಂಯುಕ್ತ ಪದವಿಪೂರ್ವ ಕಾಲೇಜು ಕನ್ನಡ ಉಪನ್ಯಾಸಕ ಹಾಗೂ ಕೃತಿಕಾರ ಡಾ.ಆಂಜನೇಯ ಉರ್ತಾಳ್ ಮಾತನಾಡಿ, ಆಧುನಿಕ ತಂತ್ರಜ್ಞಾನದಲ್ಲೂ ಭಾಷೆ ಉಳಿಯಬೇಕು. ಓದು, ಬರಹ, ಕ್ಷೇತ್ರಕಾರ್ಯ, ವಿದ್ವಾಂಸರ ಒಡನಾಟದಿಂದ ಸಂಶೋಧನಾ ವಿಷಯ ಪಕ್ವವಾಗುತ್ತದೆ. ಈ ಕ್ಷೇತ್ರಕ್ಕೆ ಆಸಕ್ತರು ಹೆಚ್ಚು ಬರಬೇಕು ಎಂದರು.

ಅಧ್ಯಯನ ನಡೆಸಲು ಸಾಕಷ್ಟು ವಿಷಯಗಳಿವೆ. ಆಸಕ್ತಿ ಜತೆಗೆ ಪಕ್ವವಾದ ಪೂರ್ವ ತಯಾರಿ ಬಹು ಮುಖ್ಯವಾಗುತ್ತದೆ. ಸೌಲಭ್ಯಗಳು ಹೆಚ್ಚಾಗಿದ್ದು ಬಳಸಿಕೊಳ್ಳುವ ಕಾರ್ಯವಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯೂರು ಸರ್ಕಾರಿ ಪದವಿಪೂರ್ವ ಕಾಲೇಜು ಕನ್ನಡ ಉಪನ್ಯಾಸಕ ಡಾ.ಎಸ್.ಮಾರುತಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಗೌಡಗೆರೆ, ದಾವಣಗೆರೆ ವಿಶ್ವವಿದ್ಯಾಲಯ ಪ್ರಾಧ್ಯಾಪಕ ಡಾ.ಹೆಚ್.ಜಿ.ವಿಜಯಕುಮಾರ, ಸೃಷ್ಟಿ ಪ್ರಕಾಶನದ ಸೃಷ್ಟಿ ನಾಗೇಶ ಇದ್ದರು.

# ಸಾರ್ವಜನಿಕರಿಗೆ ಸುಗಮವಾಗಿ ದೇವಿ ದರ್ಶನ

**ಹಾಸನ :** ಶ್ರೀ ಹಾಸನಾಂಬ ದೇವಿ ದರ್ಶನಕ್ಕೆ ಸರತಿ ಸಾಲಿನಲ್ಲಿ ಸಾಗುತ್ತಿದ್ದಜನರನ್ನು ಇಂದುಮಾತನಾಡಿಸಲು ಹೋದ ಸಂದರ್ಭದಲ್ಲಿ ಅವರು ಮಾತನಾಡಲು ನಿಲ್ಲುವುದಕ್ಕೆ ಆಗದ ರೀತಿ ಲೈನ್ ಮುಂದೆ ಸಾಗುತ್ತಿದೆ. ಅಷ್ಟು ಸರಾಗವಾಗಿ ದರ್ಶನ ಕಾರ್ಯಕ್ರಮ ನಡೆಯುತ್ತಿರುವುದು ಬಹಳ ಸಂತೋಷವಾಗುತ್ತಿದೆ ಎಂದು ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಭೈರೇಗೌಡಅವರುತಿಳಿಸಿದ್ದಾರೆ.

ದೇವಾಲಯದ ಆವರಣದಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು ಅರ್ಧ ದಿನದ ದರ್ಶನದಲ್ಲಿ 91 ಸಾವಿರ ಜನ ಅತೀ ಕಡಿಮೆ ಅವಧಿಯಲ್ಲಿ ದರ್ಶನ ಪಡೆದುಕೊಂಡು ಹೋಗುತ್ತಿದ್ದಾರೆ ಎಂದರೆ ಜವಾಬ್ದಾರಿಯುತ ಸ್ಥಾನದಲ್ಲಿ ಇರುವ ನಾವು, ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು ಪಕ್ಷಾತೀತವಾಗಿ ಸೇರಿಕೊಂಡು ಕೆಲವು ಬದಲಾವಣೆಗಳನ್ನು ಮಾಡಿದ್ದೇವೆ ಅದನ್ನುಜಿಲ್ಲಾಡಳಿತ ಸಮರ್ಪಕವಾಗಿ ಅನುಷ್ಠಾನ ಮಾಡಿರುವುದಕ್ಕೆ ಸಾರ್ಥಕತೆ ಆಗಿದೆ. ಎಲ್ಲೋ ಒಂದು ಕಡೆ ಶ್ರೀ ಸಾಮಾನ್ಯರಿಗೆ ಚೆನ್ನಾಗಿ ದರ್ಶನ ಆಗುತ್ತಿದೆ ಎಂದರೆ ಅದು ನಮಗೆ ಬಹಳ ಸಂತೋಷದ ಸಂಗತಿ ಎಂದು ತಿಳಿಸಿದರು.

ಹಾಸನದ ಸ್ಥಳೀಯರಿಗೆ ನಮ್ಮ ಊರಿನ ದೇವರ ದರ್ಶನ ಮಾಡಲು ನಮಗೆ ಅವಕಾಶವಿಲ್ಲ ಎನ್ನುವ ಆತಂಕವಿತ್ತು ಆದರೆ ಇಂದು ಸ್ಥಳಿಯರು ಕೂಡಾ ಆರಾಮಾಗಿ ದರ್ಶನ ಮಾಡಿಕೊಂಡು ಹೋಗುತ್ತಿದ್ದಾರೆ. ಗಣ್ಯರಿಗೂ ಸರಾಗವಾಗಿ ದರ್ಶನ ನಡೆಯುತ್ತಿದೆ ಎಂದರಲ್ಲದೆ,ಹೊಸ ಬದಲಾವಣೆ ತಂದಾಗ ಆತಂಕವಿತ್ತು ಆದರೆ ಮೊದಲನೇ ದಿನ ಸರಾಗವಾಗಿ ದರ್ಶನ ಕಾರ್ಯಕ್ರಮ ನಡೆಯಿತು. ಎರಡನೇ ದಿನ ಶನಿವಾರ ಎರಡುಪಟ್ಟು ಜನ ಬರುತ್ತಾರೆ ಎಂಬ ಆತಂಕವಿತ್ತು. ಇಂದು ಎರಡು ಪಟ್ಟು ಜನ ಬಂದಿದ್ದರೂ ಕೂಡಾ ನಿನ್ನೆಗಿಂತ ವೇಗವಾಗಿ ದರ್ಶನವಾಗಿದೆ ಯಾವುದು ಕೂಡಾ ವ್ಯತ್ಯಾಸವಾಗಿಲ್ಲ ಎಂದರು.



ನಿನ್ನೆ ಶೌಚಾಲಯದ ಸಮಸ್ಯೆ ಸೇರಿದಂತೆ ಸಣ್ಣ ಪುಟ್ಟ ಸಮಸ್ಯೆಗಳಾಗಿವೆ ಎಂದು ದೂರುಗಳು ಬಂದಿದ್ದವು ಇಂದು ಖುದ್ದು ನಾನೇ ಹೋಗಿ ಶೌಚಾಲಯಗಳ ವೀಕ್ಷಣೆ ಮಾಡಿ ಬಂದಿದ್ದೇನೆ ಎಲ್ಲವೂ ಚೆನ್ನಾಗಿವೆ. ಅವರಿಗೂ ಯಾವುದೇ ವ್ಯತ್ಯಾಸವಾಗದಂತೆ ಸ್ವಚ್ಛವಾಗಿಡಿ ಎಂದು ತಿಳಿಸಿದ್ದೇನೆ ಎಂದರಲ್ಲದೆ, ಬ್ಯಾರಿಕೇಡ್ ಗೆ ಹಾಕಿರುವ ಪಟ್ಟಿಯಿಂದ ಎಡವಿ ಗಾಯಗಳಾಗುತ್ತಿವೆ ಎಂದು ದೂರು ಕೇಳಿ ಬಂದಿತ್ತು. ಆ ಹಿನ್ನೆಯಲ್ಲಿ ರಾತ್ರೋ ರಾತ್ರಿ ಜಿಲ್ಲಾಡಳಿದವರು ಆ ಪಟ್ಟಿಗೆ ಬಟ್ಟೆಯನ್ನು ಸುತ್ತಿ ಗಾಯ ಆಗದಂತೆ ತಡೆದಿದ್ದಾರೆ. ಬರುವಂತಹ ಸಾರ್ವಜನಿಕರಿಗೆ ಯಾವುದೇ ರೀತಿ ತೊಂದರೆಯಾಗದಂತೆ ನೋಡಿಕೊಳ್ಳಲು ಬದ್ಧರಿದ್ದೇವೆ ಎಂದರಲ್ಲದೆ ರಾಜ್ಯ ಹಾಗೂ ದೇಶಾದ್ಯಂತ ಜನ ಬಂದು ದರ್ಶನ ಪಡೆಯಲಿ ಎಂದರು.

ಇದಕ್ಕೂ ಮುನ್ನ ಶ್ರೀ ಹಾಸನಾಂಬ ದೇವಾಲಯದ ಆವರಣದಲ್ಲಿ ಏರ್ಪಡಿಸಿರುವ ಸಾಂಸ್ಕೃತಿಕ ವೇದಿಕೆಯಲ್ಲಿ ಮಾತನಾಡಿದ ಅವರು ಇಂದುಕೂಡಾಶ್ರೀ ಹಾಸನಾಂಬ ದೇವಿ ಜಾತ್ರಾ ಮಹೋತ್ಸವದ ವ್ಯವಸ್ಥೆಗಳ ಪರಿಶೀಲಿಸಿ ನಂತರ ಸರತಿ ಸಾಲಿನಲ್ಲಿ ಸಾಗುತ್ತಿದ್ದ ಸಾರ್ವಜನಿಕರನ್ನು ಮಾತನಾಡಿಸಿದ ಸಂದರ್ಭದಲ್ಲಿ ಈ ಬಾರಿ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಲಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಳೆದ ವರ್ಷದಲ್ಲಿ 5-6 ಗಂಟೆಗೆ ಧರ್ಮದರ್ಶನ ಮಾಡಬೇಕಾದ ಪರಿಸ್ಥಿತಿ ಇತ್ತು, ಆದರೆ ಇಂದು 01 ರಿಂದ 1.30 ಗಂಟೆಗೆ ಸುಗಮವಾಗಿ ಸುಲಲಿತವಾಗಿ ದರ್ಶನ ಮಾಡಲು ಅವಕಾಶ ಕಲ್ಪಿಸಿಕೊಡಲಾಗಿದೆ ಎಂದರಲ್ಲದೆ, ನಾಡಿನ ವಿವಿಧ ಭಾಗಗಳಿಂದ ಕಲಾವಿದರನ್ನು ಕರೆಸಿ ಅವರಿಗೆ ಪ್ರೋತ್ಸಾಹ ನೀಡುವುದರ ಜೊತೆಗೆ ಭಕ್ತಾಧಿಗಳಿಗೆ ಜಾನಪದ ಕಲೆ, ಸುಗಮ ಸಂಗೀತದ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಾಸನಾಂಬ ಕಲಾಕ್ಷೇತ್ರ ಸೇರಿದಂತೆ ವಿವಿಧ ಭಾಗಗಳಲ್ಲಿ ಆಯೋಜಿಸಲಾಗಿದೆ. ಆ ಕಾರ್ಯಕ್ರಮಗಳಲ್ಲಿ ಎಲ್ಲರೂ ಭಾಗವಹಿಸುವಂತೆ ತಿಳಿಸಿದರು.

ಈ ವೇಳೆಯಲ್ಲಿಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರುಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಸಂಸದರಾದ ಶ್ರೇಯಸ್ ಎಂ ಪಟೇಲ್, ಜಿಲ್ಲಾಧಿಕಾರಿಕೆ.ಎಸ್ ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿಡಾ. ಪೂರ್ಣಿಮಾಬಿ.ಆರ್, ಉಪ ವಿಭಾಗಾಧಿಕಾರಿ ಹಾಗೂ ಹಾಸನಾಂಬ ದೇವಾಲಯದ ಆಡಳಿತಾಧಿಕಾರಿ ಮಾರುತಿಮತ್ತಿತರರು ಹಾಜರಿದ್ದರು.

# ಪ್ರಧಾನ ಮಂತ್ರಿಧನ್‌ಧಾನ್ಯ ಕೃಷಿ ಯೋಜನೆಯ ನೇರ ಪ್ರಸಾರ



**ಶಿವಮೊಗ್ಗ :** ಕೃಷಿ ವಿಜ್ಞಾನಕೇಂದ್ರದ ವತಿಯಿಂದ ದಿನಾಂಕ 11-10-2025 ರಂದು ಪ್ರಧಾನ ಮಂತ್ರಿಧನ್‌ಧಾನ್ಯ ಕೃಷಿ ಯೋಜನೆ (ಪಿಎಂಡಿಡಿಕೆವೈ) ಯಉದ್ಘಾಟನೆಯ ನೇರ ಪ್ರಸಾರವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಕೃಷಿ ಕ್ಷೇತ್ರದಲ್ಲಿಉತ್ಪಾದಕತೆ, ಸುಗ್ಗಿಯ ನಂತರದ ನಿರ್ವಹಣೆ ಮತ್ತು ಮೌಲ್ಯವರ್ಧನೆಯನ್ನು ಹೆಚ್ಚಿಸುವತ್ತ ಗಮನಹರಿಸಿದ ಕೇಂದ್ರ ಸರ್ಕಾರ ಹೊಸದಾಗಿ ಪ್ರಾರಂಭಿಸಿರುವ ಯೋಜನೆಯ ಬಗ್ಗೆ ರೈತರಲ್ಲಿಜಾಗೃತಿ ಮೂಡಿಸುವಉದ್ದೇಶವನ್ನು ಈ ಕಾರ್ಯಕ್ರಮಉದ್ದೇಶವಾಗಿತ್ತು.

ಶಿವಮೊಗ್ಗ ಜಿಲ್ಲೆಯ ವಿವಿಧ ಭಾಗಗಳಿಂದ ಒಟ್ಟು 295 ರೈತರು ಕೆವಿಕೆ ವಿಜ್ಞಾನಿಗಳೊಂದಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕೃಷಿ-ಆರ್ಥಿಕತೆಯನ್ನು ಬಲಪಡಿಸುವಲ್ಲಿ ಮತ್ತುರೈತರ ಸಮೃದ್ಧಿಯನ್ನು ಖಚಿತಪಡಿಸಿಕೊಳ್ಳುವಲ್ಲಿ ಪಿಎಂಡಿಡಿಕೆವೈಯ ಉದ್ದೇಶಗಳು ಮತ್ತು ಪ್ರಯೋಜನಗಳನ್ನು ಎತ್ತಿತೋರಿಸುವಗೌರವಾನ್ವಿತ ಪ್ರಧಾನ ಮಂತ್ರಿಯವರ ಭಾಷಣದ ನೇರ ಪ್ರಸಾರವನ್ನು ಭಾಗವಹಿಸಿದ ರೈತರುವೀಕ್ಷಿಸಿದರು.

ನೇರ ಪ್ರಸಾರದ ನಂತರ, ಪ್ರಮುಖ ಹಿಂಗಾರು ಬೆಳೆಗಳ ಸುಧಾರಿತ ಬೇಸಾಯ ಪದ್ಧತಿಗಳು, ಎಣ್ಣೆ ಕಾಳು ಬೆಳೆಗಳು, ನೈಸರ್ಗಿಕಕೃಷಿಯ ತತ್ವಗಳು,ಇದರ ಅಭ್ಯಾಸಗಳು ಮತ್ತು ಪದ್ಧತಿ ಪ್ರಾತ್ಯಕ್ಷಿಕೆ, ರಾಷ್ಟ್ರೀಯಕೀಟ ಪರಿವೀಕ್ಷಣೆ ವ್ಯವಸ್ಥೆಯಕುರಿತುಜಾಗೃತಿ, ರೈತರಕುಂದುಕೊರತೆ ಪರಿಹಾರದ ಪೋರ್ಟಲ್, ಜಿ.ಎಸ್.ಟಿ. ಕಡಿತ ಪ್ರಯೋಜನಗಳು, ಭಾರತ ಸರ್ಕಾರದ ಪ್ರಮುಖ ಯೋಜನೆಗಳ ಕುರಿತುತಾಂತ್ರಿಕ ಸಮಾವೇಶವನ್ನುಆಯೋಜಿಸಲಾಯಿತ ು. ತಾಂತ್ರಿಕ ಸಮಾವೇಶದಕೊನೆಯಲ್ಲಿ, ಸೂರ್ಯಕಾಂತಿ ಮತ್ತು ಶೇಂಗಾದಲ್ಲಿ ಸಮಗ್ರ ಬೆಳೆ ನಿರ್ವಹಣೆಕುರಿತು ರೈತ-ವಿಜ್ಞಾನಿಗಳ ಸಂವಾದಆಯೋಜಿಸಲಾಯಿತು, ನೈಸರ್ಗಿಕ ಕೃಷಿ, ಸಮಗ್ರ ಕೃಷಿ ಪದ್ಧತಿಯ ಅನುಕೂಲಗಳು ಮತ್ತುಕೃಷಿಯೇತರ ಚಟುವಟಿಕೆಗಳಾದಜೇನು, ಕೋಳಿ, ಕುರಿ ಮತ್ತು ಮೇಕೆ, ಕೃಷಿ ಹೊಂಡದಲ್ಲಿ ಮೀನು ಸಾಕಣೆಗಳ ಕುರಿತುಚರ್ಚಿಸಲಾಯಿತು. ಕೆವಿಕೆ ವಿಜ್ಞಾನಿಗಳು ಸುಧಾರಿತ ಬೆಳೆ ಉತ್ಪಾದನಾ ತಂತ್ರಜ್ಞಾನಗಳು, ಕೀಟ ಮತ್ತುರೋಗ ನಿರ್ವಹಣೆ, ಪೋಷಕಾಂಶ ನಿರ್ವಹಣೆ ಮತ್ತು ನೀರಿನ ಬಳಕೆಯ ದಕ್ಷತೆಯಕುರಿತು ವಿವರವಾದ ಮಾರ್ಗದರ್ಶನ ನೀಡಿದರು.ನೇರ ಪ್ರಸಾರದ ನಂತರ, ರೈತರನ್ನು ಕೃಷಿ ವಿಜ್ಞಾನಕೇಂದ್ರದಕುರಿ ಮತ್ತು ಮೇಕೆ ಸಾಕಣೆಘಟಕ, ಕೋಳಿ ಸಾಕಣೆಘಟಕ, ಹೈಡ್ರೋಪೋನಿಕ್‌ಘಟಕ, ಕೃಷಿ ಹೊಂಡ, ಅಂತರ್ಜಲ ಮರುಪೂರಣಘಟಕ, ಆರ್ಕಿಡ್‌ಘಟಕಗಳಿಗೆ ಕರೆದೊಯ್ಯಲಾಯಿತು ಮತ್ತುಅಲ್ಪಾವಧಿಯಎಣ್ಣೆ ಬೀಜಗಳು, ದ್ವಿದಳ ಧಾನ್ಯಗಳು ಮತ್ತುತರಕಾರಿ ಬೆಳೆಗಳ ಬಗ್ಗೆ ವಿವರಿಸಿದರು.ರೈತರು ವಿಜ್ಞಾನಿಗಳೊಂದಿಗೆ ಸಕ್ರಿಯವಾಗಿ ಸಂವಹನ ನಡೆಸಿಅವರಕ್ಷೇತ್ರ ಅನುಭವಗಳು ಮತ್ತು ಸವಾಲುಗಳನ್ನು ಹಂಚಿಕೊಂಡರು.

ರೈತರಉತ್ಸಾಹಭರಿತ ಭಾಗವಹಿಸುವಿಕೆ ಮತ್ತುಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸುವಲ್ಲಿ ಕೆವಿಕೆ ಸಿಬ್ಬಂದಿಯ ಪ್ರಯತ್ನಗಳನ್ನು ಶ್ಲಾಘಿಸಿ ಕಾರ್ಯಕ್ರಮವು ಧನ್ಯವಾದಗಳೊಂದಿಗೆ ಮುಕ್ತಾಯವಾಯಿತು. ಈ ಕಾರ್ಯಕ್ರಮದಿಂದರೈತರು ಪಿಎಂಡಿಡಿಕೆವೈನ ಉದ್ದೇಶಗಳು ಮತ್ತು ಪ್ರಯೋಜನಗಳ ಬಗ್ಗೆ ಅರಿತರು.ಸೂರ್ಯಕಾಂತಿ ಮತ್ತುಶೇಂಗಾ ಬೆಳೆಯಲ್ಲಿ ಸಮಗ್ರ ಬೆಳೆ ನಿರ್ವಹಣಾ ಪದ್ಧತಿಗಳ ಬಗ್ಗೆ ಮಾಹಿತಿಪಡೆದುಕೊಂಡೆವುಎಂದುಅಭಿಪ್ರಾಯಿಸಿದರು.

# ಸುಪ್ರೀಂ ಪೀಠಕ್ಕೆ ಶೂ ಎಸೆದಿರುವುದು ಖಂಡಿಸಿ ಮನವಿ ಸಲ್ಲಿಕೆ

**ದಾವಣಗೆರೆ:** ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರ ಮೇಲೆ ಶೂ ಎಸೆದಿರುವ ಘಟನೆ ಖಂಡಿಸಿ ದಾವಣಗೆರೆ ಜಿಲ್ಲಾ ವಕೀಲರ ಸಂಘದಿಂದ ಕೈಗೆ ಕೆಂಪು ಪಟ್ಟಿ ಧರಿಸಿ ಜಿಲ್ಲಾಡಳಿತದ ಮುಂದೆ ಪ್ರತಿಭಟನೆ ನಡೆಸಲಾಯಿತು.

ಸಂಘದ ವಕೀಲ ಸದಸ್ಯರು ನ್ಯಾಯಾಲಯದ ಎಲ್ಲಾ ಕಲಾಪಗಳಲ್ಲಿ ಕೆಂಪು ಪಟ್ಟಿ ಬಲಗೈಗೆ ಧರಿಸಿ ಪಾಲ್ಗೊಳ್ಳುವುದಾಗಿ ಜಿಲ್ಲಾಡಳಿತದಿಂದ ಸಂಬಂಧಪಟ್ಟ ಇಲಾಖೆಗೆ ರವಾನಿಸಲು ಮನವಿ ಪತ್ರ ಸಲ್ಲಿಸಿದರು.

ಇದೆ ವೇಳೆ ಮಾತನಾಡಿದ ಸಂಘದ ಉಪಾಧ್ಯಕ್ಷ ಕೆ ಜಿ ಕೆ ಸ್ವಾಮಿ, ಸುಪ್ರೀಂ ನ್ಯಾಯಮೂರ್ತಿಗಳ ಮೇಲೆ ವಕೀಲ ರಾಕೇಶ್ ಕಿಶೋರ್ ಎನ್ನುವ ವ್ಯಕ್ತಿ ಶೂ ಎಸೆದು ಅನುಚಿತ ವರ್ತನೆ ತೋರಿರುವುದು ಖಂಡನೀಯ. ಈಗಾಗಲೇ ಸಂಘದ ಸದಸ್ಯರ ತುರ್ತು ಸಭೆಯನ್ನು ಕರೆದು ಘಟನೆಯನ್ನು ವಿರೊಧಿಸಲಾಗಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಖಜಾಂಚಿ ಜೆ.ಈ ವನಜಾಕ್ಷಿ, ಎಚ್.ಕೆ ಅಮೃತ್, ಗುಮ್ಮನೂರು ಮಲ್ಲಿಕಾರ್ಜುನ, ಕೆ. ಮಂಜುಳಾ, ಎಂ. ಚೌಡಪ್ಪ, ಕೆ. ಅಣ್ಣಪ್ಪ, ಎಚ್.ಕೆ. ಅಮೃತ ಸೇರಿದಂತೆ ಇತರರು ಹಾಜರಿದ್ದರು.

# ಶಾಲಾ ಮಕ್ಕಳು ಪರಿಸರದ ಚಿಂತನೆಯನ್ನ ಅಳವಡಿಸಿಕೊಳ್ಳಬೇಕು

**ಚಿತ್ರದುರ್ಗ:**

ವಿದ್ಯಾರ್ಥಿಗಳಾಗಿದ್ದಾಗಲೇ ಪರಿಸರ ಚಿಂತನೆಯನ್ನು ಮಾಡಿ, ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸಿಕೊಂಡು, ಶಾಲೆ ಸುತ್ತಮುತ್ತ ಆವರಣಗಳನ್ನ ಪ್ಲಾಸ್ಟಿಕ್ ಮುಕ್ತವಾಗಿ ಮಾಡಿಕೊಂಡು, ಮರ ಗಿಡಗಳನ್ನು ಬೆಳೆಸಿಕೊಂಡು, ಸ್ವಚ್ಛವಾದ ಪರಿಸರದಲ್ಲಿ ವಿದ್ಯಾರ್ಥಿಗಳು ಬೆಳೆಯಬೇಕು ಎಂದು ಆರ್ ಪ್ರವೀಣ್ ಚಂದ್ರರವರ ಜಾನ್ ಮೈನ್ಸ್ ನ ಜನರಲ್ ಮ್ಯಾನೇಜರ್ ಆದ ರಣಧೀವೆಯವರು ಮಾತನಾಡಿದರು.

ಅವರು ಚಿತ್ರದುರ್ಗ ನಗರದ ಮಠದ ಕುರುಬರಟ್ಟಿ ಬಳಿ ಇರುವ ಅಮ್ಮ ವಿದ್ಯಾ ಸಂಸ್ಥೆಯ, ಅಮ್ಮ ಪಬ್ಲಿಕ್ ಶಾಲೆಯಲ್ಲಿ ಸ್ವಚ್ಛತಾ ಪಕ್ವಾಡ ಕಾರ್ಯಕ್ರಮವನ್ನು ಉದ್ಘಾಟಿಸುತ್ತ ಮಾತನಾಡುತ್ತಿದ್ದರು.

ಈಗಲೂ ಸಹ ಶಾಲೆಯ ಸುತ್ತಮುತ್ತ, ಆವರಣಗಳು ಸ್ವಚ್ಛವಾಗಿಲ್ಲದೆ, ಪ್ಲಾಸ್ಟಿಕ್ ನಿಂದ ತುಂಬಿ ತುಳುಕುವಂತಹ ವ್ಯವಸ್ಥೆ ಇದ್ದು, ವಿದ್ಯಾರ್ಥಿಗಳಿಗೆ ಸ್ವತಃ ತಾವೇ ಪ್ಲಾಸ್ಟಿಕ್ ನ್ನ ಸಂಗ್ರಹಿಸಿ, ಮರುಬಳಕೆಗೆ ಕಳುಹಿಸಿ, ತಾವು ಬಳಸುವಂತಹ ತ್ಯಾಜ್ಯ ಪ್ಲಾಸ್ಟಿಕ್ ನ್ನ ವಿಂಗಡಿಸಿ ಮರುಬಳಕೆಗೆ ಕಳಿಸಬೇಕು ಎಂದು ಶಾಲೆಗೆ ಕಸ ಸಂಗ್ರಹಿಸುವ ಬಕೆಟ್ ಗಳನ್ನು ನೀಡಿ ಮಾತನಾಡಿದರು.

ಕರ್ನಾಟಕ ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಮಾತನಾಡುತ್ತಾ, ಮಕ್ಕಳಿಗೆ ಪರಿಸರ ಜಾಗೃತಿ ಮೂಡಿಸಲು ಮಾದರಿಗಳನ್ನ ಬಳಕೆ ಮಾಡಬೇಕು, ವನ್ಯಜೀವಿಗಳ ಸಂರಕ್ಷಣೆ, ಪ್ಲಾಸ್ಟಿಕ್ ಮುಕ್ತ ವಾತಾವರಣ, ನೀರು ಸದ್ಬಳಕೆ, ಹಸಿರೀಕರಣ, ಮುಂತಾದ ವಿಚಾರಗಳನ್ನ ತಿಳಿಸಿಕೊಟ್ಟರೆ, ಮಕ್ಕಳು ಸಹ ಮುಂದೆ ತಮಗೆ ಬೇಕಾದಂತಹ



ಸಮಾಜವನ್ನು ರೂಪಿಸಿಕೊಳ್ಳಲು ಅನುಕೂಲಕರವಾಗುತ್ತದೆ ಎಂದರು.

ಬಹಳಷ್ಟು ಶಾಲಾ ಕಾಲೇಜುಗಳಲ್ಲಿ, ಮಕ್ಕಳಿಗೆ ಪ್ರಾತ್ಯಕ್ಷಿಕೆ ಮುಖಾಂತರ ಪರಿಸರ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು, ಗಾಂಧೀಜಿಯವರ ಚಿಂತನೆಗಳನ್ನ ಮಕ್ಕಳಿಗೆ ಅಳವಡಿಸಿಕೊಳ್ಳಲು ಚರಕದ ಮಾದರಿಯನ್ನು ತೋರಿಸಿ, ಗುಡಿ ಕೈಗಾರಿಕೆಗಳನ್ನ ಪ್ರೋತ್ಸಾಹಿಸಬೇಕು, ಎಲ್ಲದಕ್ಕೂ ನಗರೀಕರಣ ಉತ್ತರವಲ್ಲ ಎಂಬುದನ್ನು ಮನದಟ್ಟು ಮಾಡಿಕೊಡಬೇಕಾಗಿದೆ ಎಂದರು.

ಸ್ವಚ್ಛತಾ ಕಾರ್ಯಕ್ರಮ ಮಾಡಲು ವಿದ್ಯಾರ್ಥಿಗಳಿಗೆ ಕೈಗವಚವನ್ನು ನೀಡಿ, ಶಾಲೆ ಸುತ್ತಮುತ್ತ ಇದ್ದಂತಹ ಎಲೆ, ಕಸ, ಪ್ಲಾಸ್ಟಿಕ್ ನ್ನ ಸಂಗ್ರಹಿಸಿ, ವಿಲೇವಾರಿ ಮಾಡುವುದನ್ನು ಪ್ರಾತ್ಯಕ್ಷಿಕೆ ಮೂಲಕ ತೋರಿಸಿಕೊಡಲಾಯಿತು.

ಕಾರ್ಯಕ್ರಮದಲ್ಲಿ ಜಾನ್ ಮೈನ್ಸ್ ನ ಪರಿಸರ ಅಧಿಕಾರಿ ಅಜಿತ್, ಅಮರೇಶ್ ಶಾಲಾ ಸಿಬ್ಬಂದಿಗಳು, ಶಿಕ್ಷಕರು, ಮುಖ್ಯೋಪಾಧ್ಯಾಯರು, ಆಡಳಿತ ಮಂಡಳಿ ಸದಸ್ಯರು, ಗ್ರಾಮಸ್ಥರು, ಪೋಷಕರು ಭಾಗವಹಿಸಿದ್ದರು.

## ಅ.19 ರಂದು ಶ್ವಾನ ಪ್ರದರ್ಶನ

**ಹಾಸನ :** ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಆಚರಣೆ ಅಂಗವಾಗಿ ಅ.19 ರಂದು ಹಾಸನ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಶ್ವಾನ ಪ್ರದರ್ಶನವನ್ನು ಆಯೋಜಿಸಲಾಗಿದೆ.

## ಶ್ರೀ ಹಾಸನಾಂಬ ಜಾತ್ರಾ ಮಹೋತ್ಸವ ಫಲಪುಷ್ಪ ಪ್ರದರ್ಶನ ಸ್ಪರ್ಧೆಗೆ ನೋಂದಣಿಗೆ ಆಹ್ವಾನ

**ಹಾಸನ:** ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಆಚರಣೆ ಅಂಗವಾಗಿ ಅ.17ರಿಂದ ಅ.20 ರವರೆಗೆ ಹಾಸನ ನಗರದ ಸಿಲ್ವರ್ ಜ್ಯೂಬಿಲಿ ಆರ್ಚರ್ಡ್ ಪಾರ್ಕ್‌ನಲ್ಲಿ ತೋಟಗಾರಿಕೆ ಇಲಾಖೆ, ಜಿಲ್ಲಾ ಪಂಚಾಯತ್, ಹಾಸನ ಹಾಗೂ ಹೇಮಾವತಿ ತೋಟಗಾರಿಕೆ ಸಂಘ, ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಫಲಪುಷ್ಪ ಪ್ರದರ್ಶನವನ್ನು ಆಯೋಜಿಸಲಾಗುತ್ತಿದೆ.

ಫಲಪುಷ್ಪ ಪ್ರದರ್ಶನದ ಅಂಗವಾಗಿ ಸಾರ್ವಜನಿಕರಲ್ಲಿ ನೈಸರ್ಗಿಕ ಸಂಪನ್ಮೂಲಗಳು ಹಾಗೂ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಹಾಗೂ ನಗರದ ಜನತೆಗೆ ತೋಟದ ಹವ್ಯಾಸವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಈ ಕೆಳಕಂಡ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಮನೆ/ ಖಾಸಗಿ ಸಂಸ್ಥೆಗಳು ಹಾಗೂ ಸರ್ಕಾರಿ ಶಾಲೆ/ ಕಚೇರಿಗಳ ಅಂಗಳದಲ್ಲಿ ಅಲಂಕಾರಿಕ ತೋಟ ನಿರ್ವಹಣೆ ಸ್ಪರ್ಧೆಯನ್ನು (Garden Maintence)ಏರ್ಪಡಿಸಿದ್ದು, ಮನೆ, ಶಾಲೆ ಕಚೇರಿಗಳಿಗೆ ಭೇಟಿ ನೀಡಿ ತೀರ್ಪುನೀಡಲಾಗುವುದು.

ಪ್ಲಾಸ್ಟಿಕ್ ವಸ್ತುಗಳು, ಬಾಟಲಿಗಳು, ಟೈರುಗಳು ಇತ್ಯಾದಿ ಅನುಪಯುಕ್ತ ವಸ್ತುಗಳನ್ನು ಬಳಸಿ ಉದ್ಯಾನ ಸೌಂದರ್ಯೀಕರಣದ ಸ್ಪರ್ಧೆ (Garden beautification by using unused products) ಯನ್ನು ಏರ್ಪಡಿಸಿದ್ದು, ಅತ್ಯುತ್ತಮ ಪ್ರದರ್ಶಿಕೆಗಳನ್ನು ಫಲಪುಷ್ಪ ಪ್ರದರ್ಶನದಲ್ಲಿ ಪ್ರದರ್ಶಿಸಲಾಗುವುದು. ನಗರದ ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆ ವಿಷಯಾಧಾರಿತ ಚಿತ್ರಕಲಾ ಸ್ಪರ್ಧೆ (Drawing Compitation) ಯನ್ನು ಆಯೋಜಿಸಲಾಗಿರುತ್ತದೆ.ಆಸಕ್ತಿವುಳ್ಳ ಹಾಸನ ನಗರದ ನಾಗರೀಕರು, ಖಾಸಗಿ ಸಂಸ್ಥೆಗಳು, ಸರ್ಕಾರಿ ಶಾಲೆ/ ಕಾಲೇಜು ಹಾಗೂ ಸರ್ಕಾರಿ ಕಛೇರಿಗಳು ಹಾಗೂ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು ದಿನಾಂಕ 10.10.2025 ರೊಳಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಜಿಲ್ಲಾ ಪಂಚಾಯತ್, ಹಾಸನ ತಾಲ್ಲೂಕು ರವರ ಕಚೇರಿಗೆ ಸಂಪರ್ಕಿಸಿ, ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಸಲ್ಲಿಸಿ ನೊಂದಾಯಿಸಿಕೊಳ್ಳಲು ಕೋರಿದೆ.

ಹೆಚ್ಚಿನ ವಿವರಗಳಿಗೆ ಈ ಕೆಳಕಂಡ ದೂರವಾಣಿ ಸಂಖ್ಯೆ– 9164100138, 9986024885, 8277097450, ಗಳನ್ನು ಸಂಪರ್ಕಿಸಲು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯೋತ್ಸವ ನಿಮಿತ್ಯ ವಿವಿಧ ಪುರಸ್ಕಾರಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ:** ಕರ್ನಾಟಕ ರಾಜ್ಯದಲ್ಲಿ ನಿರಂತರವಾಗಿ ಕಲೆ, ಸಾಹಿತ್ಯ, ಸಂಗೀತ, ಸಂಸ್ಕೃತಿ, ಶಿಕ್ಷಣ, ಕನ್ನಡ ನಾಡು ನುಡಿ ಮತ್ತು ಇತಿಹಾಸ ಪರಂಪರೆಗಳನ್ನು ವೈಭವೀಕರಿಸುವ ನಿಟ್ಟಿನಲ್ಲಿ ಕ್ರಿಯಾಶೀಲವಾಗಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿರುವ ಸಾಹಿತ್ಯಕ ಸಂಸ್ಥೆ ಕವಿತ್ತ ಕರ್ಮಮಣಿ ಫೌಂಡೇಶನ್(ರಿ), ನಾಗರಮುನ್ನೋಳಿ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಅನವರತವಾಗಿ ಸೇವೆ ಸಲ್ಲಿಸುತ್ತಿರುವ ಪ್ರತಿಭಾನ್ವಿತ ಸಾಧಕರು 1. ಕರ್ನಾಟಕ ರಾಜ್ಯೋತ್ಸವ ಪುರಸ್ಕಾರ 2. ತಾಯ್ನುಡಿ ಸೇವಾರತ್ನ ಪುರಸ್ಕಾರ 3. ಗುರುಕುಲ ತಿಲಕ ಪುರಸ್ಕಾರ 4. ಕನ್ನಡ ಕುಲ ತಿಲಕ ಪುರಸ್ಕಾರ 5. ವಿಶ್ವಮಾನ್ಯ ಕನ್ನಡಿಗ ಪುರಸ್ಕಾರ' ಕ್ಕೆ ಅರ್ಜಿಯನ್ನು ಸಲ್ಲಿಸಬಹುದು. ಆಯ್ಕೆಯಾದ ಪ್ರತಿಭಾನ್ವಿತ ಸಾಧಕರಿಗೆ ಪುರಸ್ಕಾರವನ್ನು ನವಂಬರ್ 01 ರಿಂದ 15 ನವಂಬರ್ 2025 ರ ವರೆಗೆ ವಿತರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಪ್ರತಿಭಾನ್ವಿತ ಸಾಧಕರು ತಮ್ಮ ಪರಿಚಯವನ್ನು ವೇದಿಕೆ ಅಧ್ಯಕ್ಷರಾದ ಕವಿತ್ತ ಕರ್ಮಮಣಿ ಅವರ 9743867298 ನಂಬರಿಗೆ ವಾಟ್ಸಾಪ್ ಮಾಡಬಹುದು ಎಂದು ಗೌರವ ಸಲಹೆಗಾರರಾದ ಶ್ರೀ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

## ನ್ಯಾಯಮೂರ್ತಿಗಳ ಮೇಲೆ ಶೂ ಎಸೆತ ಸಂವಿಧಾನಕ್ಕೆ ಮಾಡಿದ ಅಪಚಾರ ಎಐಡಿಆರ್‌ಎಂ ಖಂಡನೆ

**ದಾವಣಗೆರೆ:** ನ್ಯಾಯಮೂರ್ತಿಗಳ ಮೇಲೆ ಶೂ ಎಸೆದದ್ದು ಸಂವಿಧಾನಕ್ಕೆ ಮಾಡಿದ ಅಪಚಾರವಾಗಿದೆ ಕೂಡಲೇ ಆ ವಕೀಲನನ್ನು ಬಂಧಿಸಿ ಕಾನೂನು ಶಿಕ್ಷೆಗೆ ಒಳಪಡಿಸಬೇಕೆಂದು ಆಗ್ರಹಿಸಿ ಅಖಿಲ ಭಾರತ ದಲಿತ ಆಂದೋಲನ ಜಿಲ್ಲಾ ಸಮಿತಿ ಪ್ರತಿಭಟನೆ ನಡೆಸಿತು.ಶುಕ್ರವಾರ ನಗರದ ಸಮಿತಿ ಪದಾಧಿಕಾರಿಗಳು ಪ್ರತಿಭಟನೆ ನಡೆಸಿ ನಂತರ ಉಪ ವಿಭಾಗಾಧಿಕಾರಿಗಳ ಕಚೇರಿಗೆ ತೆರಳಿ ಶೂ ಎಸೆದ ವಕೀಲರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಆಂದೋಲನದ ಜಿಲ್ಲಾ ಅಧ್ಯಕ್ಷ ನರೇಗಾ ರಂಗನಾಥ್ ಮಾತನಾಡಿ, ಸರ್ವರಿಗೂ ಒಳ್ಳೆಯದನ್ನೇ ಬಯಸುವ ಭಾರತದ ಸಂವಿಧಾನವನ್ನು ಒಪ್ಪಿಕೊಳ್ಳದ ಮನುವಾದಿ ಮನಸ್ಥಿತಿಯ ವಕೀಲನೊಬ್ಬ ಸುಪ್ರೀಂ ಕೋರ್ಟ್‌ನ ಒಬ್ಬ ದಲಿತ ನ್ಯಾಯಮೂರ್ತಿಗಳ ಮೇಲೆ ಅಸಹನೆಯಿಂದ ಶೂ ಎಸೆದಿರುವುದನ್ನು ಒಪ್ಪಲಾಗುವುದಿಲ್ಲ ಇಂತಹ ಮನುವಾದಿ ಮನಸ್ಥಿತಿಯ ವಕೀಲನನ್ನು ಕೂಡಲೇ ಬಂಧಿಸಿ ಕಾನೂನು ಶಿಕ್ಷೆಗೆ ಒಳಪಡಿಸಬೇಕೆಂದು ಆಗ್ರಹಿಸಿದರು.

ಕೆರನಹಳ್ಳಿ ರಾಜು, ಎನ್.ಟಿ.ಸುರೇಶ್, ತಿಪ್ಪೇಸ್ವಾಮಿ ಬಿ.ಎಚ್., ಜೆ.ರಂಗನಾಥ್, ದಾದಾಪೀರ್, ಮೈಲಾರಿ ಎಸ್., ರಂಗನಾಥ, ಮಂಜುನಾಥ, ಹುಲಿಗೆಮ್ಮ, ನಾಗಮ್ಮ, ಕಾಂತಮ್ಮ, ಪರಶುರಾಮ ಎನ್., ವಿಜಯಕುಮಾರ್, ಪ್ರಕಾಶ್ ಎ ಆರ್., ತಿಮ್ಮಾರೆಡ್ಡಿ, ಸಂಜು, ಪರಮೇಶಿ ಅಕ್ಕಿ, ಕರಿಯಪ್ಪ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಏಕ ಬಳಕೆ ಪ್ಲಾಸ್ಟಿಕ್ ನಿಷೇಧ: ಜಿಲ್ಲಾಧಿಕಾರಿ

**ದಾವಣಗೆರೆ :** ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಸೂಚನೆಯಂತೆ ಜಿಲ್ಲೆಯಲ್ಲಿ ಎಲ್ಲಾ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ನಿಂದ ತಯಾರಿಸಿದ ರಾಷ್ಟ್ರೀಯ ಧ್ವಜ ಬಳಕೆದಾರರು, ಮಾರಾಟಗಾರರು, ದಾಸ್ತಾನುದಾರರು ಮತ್ತು ಉತ್ಪಾದನಾ ಘಟಕಗಳನ್ನು ಪರಿಶೀಲನೆ ನಡೆಸಲು ಮತ್ತು ಪರಿಶೀಲನೆ ವೇಳೆ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳು ಕಂಡುಬಂದಲ್ಲಿ ಜಪ್ತಿ ಮಾಡುವುದರೊಂದಿಗೆ ದಂಡ ವಿಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಪ್ಲಾಸ್ಟಿಕ್ ಬಾವುಟ ಬಳಕೆಯ ಪರ್ಯಾಯವಾಗಿ ಕಾಗದ ಅಥವಾ ಬಟ್ಟೆಗಳಿಂದ ತಯಾರಿಸಿದ ಬಾವುಟಗಳನ್ನು ಬಳಸುವ ಬಗ್ಗೆ ಸದರಿ ಕಾರ್ಯಕ್ರಮಗಳ ನಂತರ ಉಪಯೋಗಿಸಿದ ಧ್ವಜಗಳನ್ನು ಧ್ವಜದ ಘನತೆಗೆ ಅನುಗುಣವಾಗಿ ವಿಲೇವಾರಿ ಮಾಡಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಗೆ ತೊಂದರೆ ಕೊಟ್ಟು ಒಕ್ಕಲೆಬ್ಬಿಸಬೇಡಿ



**ಶಿವಮೊಗ್ಗ:** ಬಹು ಹಿಂದಿನಿಂದ ಸಾಗುವಳಿ ಮಾಡಿಕೊಂಡು ಬರುತ್ತಿರುವ ಅರಣ್ಯ ಭಾಗದ ರೈತರಿಗೆ ತೊಂದರೆ ನೀಡಿ ಒಕ್ಕಲೆಬ್ಬಿಸಬಾರದು ಎಂದು ಸಾರ್ವಜನಿಕ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ಅರಣ್ಯ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಕಚೇರಿಯಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಅರಣ್ಯ ಇಲಾಖೆ, ಲೋಕೋಪಯೋಗಿ ಇಲಾಖೆ, ಕೆಆರ್‌ಐಡಿಎಲ್, ನೀರಾವರಿ ಇಲಾಖೆಗಳ ಕುರಿತು ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅನಾದಿ ಕಾಲದಿಂದ ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರಿಗೆ ನೋಟಿಸ್ ನೀಡುವುದು, ತೊಂದರೆ ಕೊಟ್ಟು ಒಕ್ಕಲೆಬ್ಬಿಸುವ ಕೆಲಸವನ್ನು ಅರಣ್ಯ ಇಲಾಖೆ ಮಾಡಬಾರದು. ಹಾಗೂ ರೈತರ ಪರವಾಗಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪುಗಳನ್ವಯ ನಡೆದುಕೊಳ್ಳಬೇಕೆಂದು ಸಂಬಂಧಿಸಿದ ಅರಣ್ಯ ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು.

ಹೊಸದಾಗಿ ಒತ್ತುವರಿಗೆ ಅವಕಾಶ ಮಾಡಬಾರದು. ಹಾಗೂ 27–04–1978 ರ ಪೂರ್ವದ ಅರಣ್ಯ ಒತ್ತುವರಿವನ್ನು ಸಕ್ರಮಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ ಅವರು ಸರ್ಕಾರದ ವಿವಿಧ ಭೂ ಮಂಜೂರಾತಿ ಕಾಯ್ದೆ ಹಾಗೂ ನಿಯಮಗಳ ಅಡಿಯಲ್ಲಿ ಮಂಜೂರು ಮಾಡಲಾದ ರೈತರ ಸಾಗುವಳಿ/ವಸತಿ ಭೂಮಿಗಳನ್ನು ಅರಣ್ಯ ಭೂಮಿ ಇಂಡೀಕರಣ ಪ್ರಸ್ತಾವನೆಯಿಂದ ಕೈಬಿಡುವ ಸಂಬಂಧ ಕೈಗೊಂಡ ಕ್ರಮದ ಕುರಿತು ವರದಿಯನ್ನು ನೀಡಬೇಕೆಂದು ತಿಳಿಸಿದರು.

ಶಾಸಕರಾದ ಗೋಪಾಲಕೃಷ್ಣ ಬೇಳೂರು ಮಾತನಾಡಿ, ಮಲೆನಾಡಿನ ಭಾಗದಲ್ಲಿ ರೈತನ್ನು ಒಕ್ಕಲೆಬ್ಬಿಸುವ ಸಂಬಂಧ ನೋಟಿಸ್ ನೀಡಲಾಗುತ್ತಿದೆ. ಕೆಲವೆಡೆ ತೊಂದರೆ ನೀಡಲಾಗುತ್ತಿದೆ. ಇದು ಸರಿಯಾದ ಕ್ರಮವಲ್ಲ ಎಂದರು.

ಸಿಸಿಎಫ್ ಹನುಮಂತಪ್ಪ ಮಾತನಾಡಿ, ಪಿಎಫ್ ಮತ್ತು ಎಂಎಫ್ ಪ್ರಕರಣಗಳು ಕಿರು ಅರಣ್ಯ ವ್ಯಾಪ್ತಿಗೆ ಬರುತ್ತವೆ. ಇವುಗಳನ್ನು ಸೆಟ್ಲ್ ಮಾಡಬಹುದು, ಈ ಸಂಬಂಧ 375 ಅಧಿಸೂಚನೆಗಳಿವೆ ಎಂದು ತಿಳಿಸಿದರು.

ರಸ್ತೆ ಕಾಮಗಾರಿ ಪೂರ್ಣಗೊಳಿಸಿ : ಸಚಿವರು, ಜಿಲ್ಲೆಯ ಎಲ್ಲ ರಾಜ್ಯ ಹೈವೇಗಳು, ಮುಖ್ಯ ರಸ್ತೆಗಳನ್ನು ನವೆಂಬರ್ ಅಂತ್ಯದೊಳಗೆ ಮತ್ತು ಇತರೆ ಎಲ್ಲ ರಸ್ತೆಗಳನ್ನು ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಬೇಕೆಂದು ಪಿಡಬ್ಲ್ಯುಡಿ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಮಳೆ ಮುಗಿದ ತಕ್ಷಣ ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಬೇಕು. ಗುಂಡಿಗಳನ್ನು ಮುಚ್ಚುವ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು. ಗುಂಡಿಗಳಿಂದಾಗಿ ದ್ವಿಚಕ್ರ ವಾಹನಗಳ ರಸ್ತೆ ಅಪಘಾತಗಳು ಹೆಚ್ಚುತ್ತಿದ್ದು ಸಾವು–ನೋವು ಸಂಭವಿಸುತ್ತಿದೆ. ಆದ್ದರಿಂದ ಶೀಘ್ರವಾಗಿ ಗುಂಡಿಗಳನ್ನು ಮುಚ್ಚಬೇಕು ಮತ್ತು ರಸ್ತೆಯ ಎಡ್ಜ್ ಹಾಗೂ ಮಧ್ಯಭಾಗವನ್ನು ಮಾರ್ಕಿಂಗ್ ಮಾಡಬೇಕೆಂದು ಸೂಚಿಸಿದ ಅವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ರಸ್ತೆ ಸುರಕ್ಷತಾ ನಿಯಮಗಳ ಬಗ್ಗೆ ಅರಿವು ಮೂಡಿಸಬೇಕೆಂದು ತಿಳಿಸಿದರು. ಹಾಗೂ ಎನ್‌ಹೆಚ್ ಕಾಮಗಾರಿಗಳನ್ನು ನಿಗದಿತ ವೇಳೆಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕು ಎಂದರು.

ನೀರಾವರಿ ಇಲಾಖೆ : ಸೊರಬ ತಾಲ್ಲೂಕಿನ ಗುಡುವಿ, ಯಡಗೊಪ್ಪ, ದಂಡಾವತಿ ಮತ್ತು ವರದಾ ನದಿಗಳಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸುವ ರೂ.160 ಕೋಟಿ ಮೊತ್ತದ ಕಾಮಗಾರಿಯನ್ನು ಶೀಘ್ರದಲ್ಲೇ ಪ್ರಾರಂಭಿಸಬೇಕು.

ಹಾಗೂ ಕಾಲುಸಂಕಗಳ ಕಾಮಗಾರಿಯನ್ನು ಸಹ ಕೈಗೆತ್ತಿಕೊಳ್ಳಬೇಕು. ಅಧಿಕಾರಿಗಳ ನಡುವೆ ಸಮನ್ವಯತೆ ಇದ್ದಲ್ಲಿ ಕಾಮಗಾರಿ ಕ್ಷಿಪ್ರಗತಿಯಲ್ಲಿ ಆಗಲು ಸಾಧ್ಯವಾಗುತ್ತದೆ. ಆದ್ದರಿಂದ ಎಲ್ಲರೂ ಒಂದು ತಂಡದಂತೆ ಸಮನ್ವಯದೊಂದಿಗೆ ಕೆಲಸ ಮಾಡಬೇಕೆಂದರು.

ಸೊರಬ ತಾಲ್ಲೂಕು ಮಾವಿನ ಹೊಳೆ, ಕೆರೆಹಳ್ಳಿ, ಜಂಗಿನಕೊಪ್ಪ ಗ್ರಾಮಗಳಲ್ಲಿ ವರದಾ ನದಿಗೆ ಅಡ್ಡಲಾಗಿ ಬ್ರಿಡ್ಜ್ ಮತ್ತು ಬ್ಯಾರೇಜ್ ನಿರ್ಮಾಣ ಕಾಮಗಾರಿಗಳ ಕುರಿತು ವರದಿ ಪಡೆದುಕೊಂಡರು.

ಶಿವಮೊಗ್ಗ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಘೋಷಿತವಾಗಿರುವ ಕೊಳಚೆ ಪ್ರದೇಶಗಳ ಕುರಿತು ಪ್ರಗತಿ ಪರಿಶೀಲಿಸಿದ ಸಚಿವರು, ಗ್ರಾಮೀಣ ಭಾಗದ ಕೊಳಚೆ ಪ್ರದೇಶಗಳಲ್ಲಿನ ಮನೆಗಳಿಗೆ ಹಕ್ಕುಪತ್ರ ನೀಡುವುದು ಹಾಗೂ ನಗರ ಪ್ರದೇಶದಲ್ಲಿನ ಕೊಳಚೆ ಪ್ರದೇಶಗಳಲ್ಲಿನ ಮನೆಗಳಿಗೆ 94 ಸಿ ಮತ್ತು ಸಿಸಿ ನೀಡುವ ಕುರಿತು ಪರಿಶೀಲನೆ ನಡೆಸಬೇಕು ಎಂದು ತಿಳಿಸಿದರು.

ಶಾಸಕರು, ಸಾಗರದ ಕೊಳಚೆ ಪ್ರದೇಶದಲ್ಲಿನ ಮನೆ ನಿರ್ಮಾಣ ಕಾಮಗಾರಿ ನಿಂತು 12 ವರ್ಷ ಆಯ್ತು. 150 ಮನೆಗಳ ಕೆಲಸ ಬಾಕಿ ಇದ್ದು, ಶೀಘ್ರದಲ್ಲಿ ಈ ಕಾಮಗಾರಿ ಆರಂಭಿಸಿ ಪೂರ್ಣಗೊಳಿಸಲು ಕ್ರಮ ವಹಿಸಬೇಕೆಂದರು.

ಪಾಲಿಕೆ ಆಯುಕ್ತರಾದ ಮಾಯಣ್ಣಗೌಡ ಮಾತನಾಡಿ, ಶಿವಮೊಗ್ಗ ಮಹಾನಗರಪಾಲಿಕೆಯ ವಿವಿಧ ವಾರ್ಡ್ಗಳ ವ್ಯಾಪ್ತಿಯಲ್ಲಿ ಮಹಾನಗರಪಾಲಿಕೆ ಒಡೆತನಕ್ಕೆ ಸೇರಿದ ನಿವೇಶನಗಳಲ್ಲಿ 40 ವರ್ಷಗಳಿಂದ ವಾಸ ಮಾಡುತ್ತಿರುವ ಬಡ ಕುಟುಂಬಗಳ ಮನೆಗಳನ್ನು ಸಕ್ರಮಗೊಳಿಸುವ ಸಂಬಂಧ 9000 ಅರ್ಜಿಗಳನ್ನು ಕಳುಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಚಿವರು, ಪಾಲಿಕೆ ವ್ಯಾಪ್ತಿಯ ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಿಸಬೇಕು. ಯುದ್ಧೋಪಾದಿಯಲ್ಲಿ ಈ ಕಾರ್ಯ ಕೈಗೊಂಡು ನವೆಂಬರ್ ಅಂತ್ಯದೊಳಗೆ ರಸ್ತೆ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಪೂರ್ಣಗೊಳಿಸಬೇಕು. ಇಲ್ಲವಾದಲ್ಲಿ ಅಪಘಾತ, ಅನಾಹುತಗಳ ಸಂಖ್ಯೆ ಹೆಚ್ಚಲಿದೆ ಎಂದು ತಿಳಿಸಿದರು.

ಸಚಿವರು ಜಿಲ್ಲೆಯಲ್ಲಿ 62 ಪ್ರವಾಸಿ ತಾಣಗಳಿದ್ದು ಈ ಕುರಿತು ಹೋರ್ಡಿಂಗ್, ಮಾಹಿತಿ ಫಲಕಗಳ ಮೂಲಕ ಪ್ರಚಾರ ಮಾಡಬೇಕು ಎಂದು ತಿಳಿಸಿದರು.

## ಉಚಿತ ಆರೋಗ್ಯ ತಪಾಸಣಾ ಶಿಬಿರ



**ಶಿವಮೊಗ್ಗ :** ದುರ್ಗಿಗುಡಿಯ ತೃಪ್ತಿ ಹೆಲ್ತ್‌ಕೇರ್‌ನಲ್ಲಿ ಬೀದಿಬದಿ ವ್ಯಾಪಾರಸ್ಥರ ಸಂಘದಿಂದ ತೃಪ್ತಿ ಹೇಲ್ತ್‌ಕೇರ್ ಸಹಯೋಗದೊಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು. 50ಕ್ಕೂ ಹೆಚ್ಚು ಬೀದಿಬದಿ ವ್ಯಾಪಾರಸ್ಥರಿಗೆ ಡಾ|| ಚಂದ್ರಶೇಖರ್ ನೇತೃತ್ವದಲ್ಲಿ ಬಿಪಿ, ಶುಗರ್, ಇಸಿಜಿ, ಕಿಡ್ನಿ ತಪಾಸಣೆ ಯಶಸ್ವಿಯಾಗಿ ನಡೆಯಿತು.

## ನಿಷೇಧಿತ ಪಟಾಕಿ ದಾಸ್ತಾನು ಇದ್ದಲ್ಲಿ ಗೋದಾಮು ಮುಟ್ಟುಗೋಲು

**ಚಿಕ್ಕಮಗಳೂರು:** ದೀಪಾವಳಿ ಹಬ್ಬದ ಆಚರಣೆ ಸಂದರ್ಭದಲ್ಲಿ ಪಟಾಕಿಗಳನ್ನು ಬಳಸುವ ವಿಚಾರಕ್ಕೆ ಸಂಬಂಧಿಸಿದಂತೆ ಸರ್ವೋಚ್ಚ ನ್ಯಾಯಾಲಯವು ನಿರ್ದೇಶಿಸಿರುವ ಅಂಶಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.ಎಲ್ಲ ಪಟಾಕಿ ಮಾರಾಟಗಾರರ ಗೋದಾಮುಗಳಲ್ಲಿ ಯಾವುದೇ ರೀತಿಯ ನಿಷೇಧಿತ ಪಟಾಕಿಗಳ ಉತ್ಪಾದನೆ, ಸಂಗ್ರಹ ಮತ್ತು ಮಾರಾಟವನ್ನು ಮಾಡುತ್ತಿದ್ದಲ್ಲಿ, ಈ ಕೂಡಲೇ ಅದನ್ನು ಪರಿಶೀಲಿಸಿ, ಅಲ್ಲಿ ಹಸಿರು ಪಟಾಕಿಯಲ್ಲದೇ ಇನ್ನಾವುದಾದರೂ ನಿಷೇಧಿತ ಪಟಾಕಿಗಳನ್ನು ದಾಸ್ತಾನು ಮಾಡಿದ್ದಲ್ಲಿ ಇಡೀ ಗೋದಾಮನ್ನು ಮುಟ್ಟುಗೋಲು ಹಾಕಿಕೊಳ್ಳುವುದು ಹಾಗೂ ಉಲ್ಲಂಘಿಸಿದವರ ವಿರುದ್ಧ ಕಾನೂನು ಪ್ರಕಾರ ತೀವ್ರವಾದ ಕ್ರಮ ಕೈಗೊಳ್ಳಬೇಕೆಂದು ತಿಳಿಸಲಾಗಿದೆ.

ಈ ಬಾರಿಯ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಹಾಗೂ ಇನ್ನಾವುದೇ ಹಬ್ಬದ ಆಚರಣೆಯ ಸಂದರ್ಭದಲ್ಲಿ ಹಸಿರು ಪಟಾಕಿ ಹೊರತುಪಡಿಸಿ, ನಿಷೇಧಿತ ಪಟಾಕಿಗಳ ಉತ್ಪಾದನೆ, ಸಂಗ್ರಹ ಮತ್ತು ಮಾರಾಟ ಹಾಗೂ ಬಳಸುವುದನ್ನು ನಿಷೇಧಿಸಲಾಗಿದೆ ಎಂದು ಅವರು ನೀಡಿರುವ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ನಿಟ್ಟಿನಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪಟಾಕಿಗಳಿಗೆ ಸಂಬಂಧಿಸಿದಂತೆ, ರಿಟ್ ಪಿಟಿಷನ್(ಸಿ) ನಂ.728/2015 ರಲ್ಲಿ ದಿನಾಂಕ:23/10/2018 ಮತ್ತು ದಿನಾಂಕ:31/10/2018 ಹಾಗೂ ತದನಂತರ ಹಲವಾರು ನಿರ್ದೇಶನಗಳನ್ನು ನೀಡಿದ್ದು, ಈ ಆದೇಶದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಮಯ ರಾತ್ರಿ 8 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಸಿಡಿಸಲು ಅವಕಾಶ ನೀಡಿದೆ.

**ಗದಗ ಮತಕ್ಷೇತ್ರದಲ್ಲಿ ಶೇ.100 ಗುರಿ ಸಾಧನೆ ಗ್ಯಾರಂಟಿ ಯೋಜನೆಗಳಲ್ಲಿ ರಾಜ್ಯಕ್ಕೆ ಮಾದರಿಯಾಗುತ್ತಿದೆ ಗದಗ**

## ಗ್ರಾಮೀಣ ಜನರಿಗೆ ಸ್ಥಳದಲ್ಲಿಯೇ ಪರಿಹಾರ ಕ್ರಮ




**ಗದಗ :** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಗದಗ ಮತಕ್ಷೇತ್ರದಲ್ಲಿ ಶೇ 100 ರಷ್ಟು ಗುರಿ ಸಾಧನೆ ಮಾಡುವ ಮೂಲಕ ರಾಜ್ಯದಲ್ಲಿಯೇ ಮಾದರಿ ಕಾರ್ಯ ಮಾಡಲು ಸಚಿವರಾದ ಎಚ್.ಕೆ. ಪಾಟೀಲ ಅವರು ಸೂಚಿಸಿದ್ದು ಜನರು ಸಭೆಯ ಪ್ರಯೋಜನ ಪಡೆಯಬೇಕು ಎಂದು ಗದಗ ತಾಲೂಕಾ ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಹೇಳಿದರು.

ಸಮೀಪದ ನಾಗಾವಿ ಗ್ರಾಮದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಾರ್ವಜನಿಕ ಅಹವಾಲು ಸ್ವೀಕಾರ ಅಹವಾಲು ಸಲ್ಲಿಕೆ ಪರಿಹಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಬಡ ಜನರ ಬದುಕು ರೂಪಿಸುವಲ್ಲಿ ಗ್ಯಾರಂಟಿ ಯೋಜನೆಗಳು ಮಹತ್ವದ್ದಾಗಿದ್ದು ಕಾನೂನು ಸಚಿವರಾದ ಎಚ್. ಕೆ. ಪಾಟೀಲ ಅವರ ಮಾರ್ಗದರ್ಶನದಂತೆ ಗದಗ ಮತಕ್ಷೇತ್ರದಲ್ಲಿ ಯಾರೊಬ್ಬರು ಹಸಿವಿನಿಂದ ಬಳಲಬಾರದು ಎಂದರು.

ಸರ್ಕಾರದ ಯೋಜನೆಗಳು ಯಾವುದೇ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ನೇರವಾಗಿ ಜನರಿಗೆ ತಲುಪಲು ಜನರ ಬಳಿಗೆ ಸಭೆ ಮಾಡುವ ಮೂಲಕ ಸಮಸ್ಯೆಗೆ ಆದಲ್ಲಯೆ ಫರಿಹಾರ ನೀಡುವ ನಿಟ್ಟಿನಲ್ಲಿ ಅಧಿಕಾರಿಗಳ ಸಮೇತ ಗ್ರಾಮ ಪಂಚಾಯತಿ ಮಟ್ಟದಲ್ಕಿ ಸಭೆ ನಡೆಸುತ್ತಿದ್ದು ಬಹುತೇಕ ಜನರಿಗೆ ಅನುಕೂಲ ಕಲ್ಪಿಸಲಾಗುತ್ತಿದೆ ಎಂದರು.

ತಾಪಂ ಮಾಜಿ ಅಧ್ಯಕ್ಷರಾದ ಬಿ.ಆರ್. ದೇವರಡ್ಡಿ ಮಾತನಾಡಿ ಜನರ ಬಳಿಗೆ ಸರ್ಕಾರ ಎನ್ನುವ ಕಲ್ಪನೆಯ ಮೂಲಕ ಸರ್ಕಾರದ ಹಲವು ಯೋಜಬೆಗಳು ಹಾಗೂ ಪಂಚ ಗ್ಯಾರಂಟಿ ಅನುಷ್ಠಾನ ಮಾಡುವ ಮೂಲಕ ಬಡವರ ಬದುಕು ಹಸನಾಗಬೇಕು ಆ ನಿಟ್ಟಿನಲ್ಲಿ ಸಮಾಜದ ಸರ್ವಾಂಗೀಣ ಅಭಿವೃದ್ಧಿಯ ದೃಷ್ಠಿಯಿಂದ ಜಾರುಗೆ ಬಂದ ಯೋಜನೆಗಳು ಜನೋಪಕಾರಿಯಾಗಿವೆ ಎಂದರು.

ಗದಗ ತಾಲ್ಲುಕು ಗ್ಯಾರಂಟಿ ಯೋಜನಾ ಪ್ರಾಧಿಕಾರದ ಸದಸ್ಯರಾದ ಕೆ.ಎಚ್. ಪಾಟೀಲ ಮಾತನಾಡಿ, ಬಡ ಜನರು ನೆಮ್ಮದಿಯಿಂದ ಬದುಕಬೇಕು. ಅವರದೂ ಸ್ವಾಭಿಮಾನದ ಜೀವನವಾಗಬೇಕು, ಗ್ರಾಮಾಂತರ ಪ್ರದೇಶಗಳಲ್ಲಿ ಗುಣಮಟ್ಟ ಶಿಕ್ಷಣ, ಅನ್ನ, ಆರೋಗ್ಯ, ಉದ್ಯೋಗ ಸೇರಿದಂತೆ ಹಕ್ಕಿನ ಬದುಕು ನೆಮ್ಮದಿಯ ವಾತಾವರಣ ನಿರ್ಮಾಣವಾಗುವ ಮೂಲಕ ಗ್ರಾಮಗಳು ಆದರ್ಶವಾಗಬೇಕು ಆ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳು ಸದುಪವಾಗಬೇಕೆನ್ನುವ ಉದ್ದೇಶದೊಂದಿಗೆ ಆಡಳಿತವನ್ನು, ಗ್ಯಾರಂಟಿ ಪ್ರಾಧಿಕಾರವನ್ನು ಜನರ ಬಳಿಗೆ ತರಲಾಗುತ್ತಿದೆ ಎಂದರು.

## ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಮೇಲೆ ಶೂ ಎಸೆದವನನ್ನು ಬಂಧಿಸಿ ಶಿಕ್ಷೆಗೊಳಪಡಿಸುವಂತೆ ಒತ್ತಾಯಿಸಿ ಎಐವೈಎಫ್ ಪ್ರತಿಭಟನೆ

**ದಾವಣಗೆರೆ:** ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಗವಾಯಿ ಅವರ ಮೇಲೆ ಶೂ ಎಸೆದವನನ್ನು ಕೂಡಲೆ ಬಂಧಿಸಿ ಕಠಿಣ ಶಿಕ್ಷೆಗೊಳಪಡಿಸಬೇಕೆಂದು ಅಖಿಲ ಭಾರತ ಯುವಜನ ಫೆಡರೇಷನ್ ಆಗ್ರಹಿಸಿದೆ.ಆವರಗೆರೆಯಲ್ಲಿಂದು ನಡೆದ ಪ್ರತಿಭಟನೆ ಉದ್ದೇಶಿಸಿ ಫೆಡರೇಷನ್ ಜಿಲ್ಲಾ ಪ್ರದಾನ ಕಾರ್ಯದರ್ಶಿ ಎ.ತಿಪ್ಪೇಶಿ ಮಾತನಾಡಿ, ಈ ದೇಶದಲ್ಲಿ ಹಿಂದುಳಿದವರು, ಎಸ್ಸಿ ಮತ್ತು ಎಸ್ಟಿ ವರ್ಗದವರು ಉನ್ನತ ಅಧಿಕಾರದಲ್ಲಿದ್ದರೆ ಆರ್‌ಎಸ್‌ಎಸ್ ಮತ್ತು ಸನಾತನಿ ಮನೋಭಾವನೆ ಉಳ್ಳವರು ಸಹಿಸುತ್ತಿಲ್ಲ ಎಂದರು.

ನ್ಯಾಯಮೂರ್ತಿಗಳ ಮೇಲೆ ಶೂ ಎಸೆದಿದ್ದು ಅದು ಸಂವಿಧಾನಕ್ಕೆ ಅಪಚಾರ ಎಸಗಿದಂತೆ, ಆದ್ದರಿಂದ ನ್ಯಾಯಮೂರ್ತಿಗಳ ಮೇಲೆ ಶೂ ಎಸೆದ ಸನಾತನಿ ವಕೀಲ ಕಿಶೋರ್ ಕುಮಾರನನ್ನು ಕೂಡಲೇ ಬಂಧಿಸಿ ಜೈಲಿಗೆ ಕಳುಹಿಸಬೇಕೆಂದು ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದರು.ಎಐವೈಎಫ್ ಜಿಲ್ಲಾಧ್ಯಕ್ಷ ಕೆರನಹಳ್ಳಿ ರಾಜು ಮಾತನಾಡಿ, ಈ ತರಹದ ಘಟನೆಗಳು ಮೇಲಿಂದ ಮೇಲೆ ನಡೆಯುತ್ತಿದ್ದರೆ ಮುಂದೊಂದು ದಿನ ಸನತಾನಿಗಳು ಸಂವಿಧಾನಕ್ಕೆ ಅಪಾಯ ತರುವರು ಆದ್ದರಿಂದ ಇಂತಹ ಸನಾತನಿ ಮನಸ್ಸಿನವರನ್ನು ಸರಕಾರ ಈಗಲೇ ಮಟ್ಟ ಹಾಕಬೇಕೆಂದು ಹೇಳಿದರು.

ಸಂತೋಷ ದೊಡ್ಡಮನೆ, ತುಂಬಿಗೆರೆ ರಘು, ಬಸವರಾಜ್, ಮಹೇಶ್ ಕೆ, ಯಲ್ಲಪ್ಪ ಜಿ, ಬಿ ಸಿದ್ದಮ್ಮ, ಈರಮ್ಮ, ಪ್ರೇಮ ಲೀಲಾ, ಎನ್ ಬಿ ಶಿವಕುಮಾರ್, ವೈ ಶಿವಾಜಿ, ಮೌನಾಚಾರ್ ಎಸ್, ದುಗ್ಗಪ್ಪ ಬಿ, ಎಚ್ ಎಂ ಮಂಜುನಾಥ, ಆನಂದ, ಅಣ್ಣಪ್ಪ ಕೆ, ಸಂತೋಷ್ ಹೆಚ್, ಶಿವಾನಂದ ಜಿ, ಶಿವಕುಮಾರ್ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

**ಬಳ್ಳಾರಿ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇದಾರ ಶ್ರೀಗಳಿಗೆ ಶಿವಮೊಗ್ಗದಲ್ಲಿ ಅದ್ಧೂರಿ ಸ್ವಾಗತ



**ಶಿವಮೊಗ್ಗ;** ಶಿವಮೊಗ್ಗದಲ್ಲಿ ಕೇದಾರ ಶ್ರೀಗಳಿಗೆ ಅದ್ದೂರಿ ಸ್ವಾಗತ ಕೋರಲಾಯಿತು. ಶಿವಮೊಗ್ಗ ನಗರದಲ್ಲಿ ಆಯೋಜಿಸಿರುವ ಇಷ್ಟಲಿಂಗ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಲು ನಗರಕ್ಕಾಗಮಿಸಿದ ಉತ್ತರಾಖಂಡದ ಕೇದಾರ ಪೀಠದ ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದ ಸ್ವಾಮೀಜಿಗಳಿಗೆ ಭಕ್ತರು ಅದ್ದೂರಿ ಸ್ವಾಗತ ಕೋರಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಶ್ರೀಗಳ ಮೆರವಣಿಗೆ ನಡೆಸಲಾಯಿತು. ಮೆರವಣಿಗೆಯಲ್ಲಿ ಶಿವಶಕ್ತಿ ಸಮಾಜ, ಜಿಲ್ಲಾ ವೀರಶೈವ ಜಂಗಮ ಅರ್ಚಕರು ಹಾಗೂ ಪುರೋಹಿತರ ಕ್ಷೇಮಾಭಿವೃದ್ಧಿ ಸಂಘದ ಪ್ರಮುಖರು ಸೇರಿದಂತೆ ವೀರಶೈವ ಸಮಾಜ ಬಾಂಧವರು ಉಪಸ್ಥಿತರಿದ್ದರು. ಈ ವೇಳೆ ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಲಾ ತಂಡಗಳು, ವಿವಿಧ ವೇಷಭೂಷಣ ತೊಟ್ಟ ಕಲಾವಿದರು ಗಮನ ಸೆಳೆದರು.

## ಮಿಷನ್ ವಾತ್ಸಲ್ಯ ಯೋಜನೆಯಡಿ ಶಿಕ್ಷರ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಮಕ್ಕಳ ರಕ್ಷಣಾ ಘಟಕದಡಿಯಲ್ಲಿ ಬರುವ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಾದ ಸರ್ಕಾರಿ ಬಾಲಕರ/ಬಾಲಕಿಯರ ಬಾಲ ಮಂದಿರ ಹಾಗೂ ಸರ್ಕಾರಿ ವೀಕ್ಷಣಾಲಯಗಳ ಮಕ್ಕಳಿಗೆ ಮಿಷನ್ ವಾತ್ಸಲ್ಯ ಯೋಜನೆಯಡಿ ಸಮಾಜ ವಿಜ್ಞಾನ/ ಆಂಗ್ಲ, ಗಣಿತ / ವಿಜ್ಞಾನ ಮತ್ತು ಸಂಗೀತ/ಕ್ರಾಫ್ಟ್, ಯೋಜ/ದೈಹಿಕ ಶಿಕ್ಷರನ್ನು ಮಾಸಿಕ ರೂ. 10,000/– ದಂತೆ ಗೌರವಧನ ಅಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿದ್ದು, ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿನ ಅರ್ಹ ಆಸಕ್ತರಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, 100ಅಡಿ ರಸ್ತೆ, ಆಲ್ಕೋಳ, ಶಿವಮೊಗ್ಗ ಇವರಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅ.15ರೊಳಗಾಗಿ ಸಲ್ಲಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಪೋಷಣ ಮಾಸಾಚರಣೆ ಕಾರ್ಯಕ್ರಮದ ಸಮಾರೋಪ ಸಮಾರಂಭ

**ಗದಗ** : ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಹಾಗೂ ಶಿಶು ಅಭಿವೃದ್ಧಿ ಯೋಜನೆ, ಗದಗ ಇವರ ಸಂಯುಕ್ತಾಶ್ರಯದಲ್ಲಿ ಗದಗ ತಾಲೂಕಿನ ಬ್ಯಾಂ ಕ ರ್ಸ ಕಾಲೋನಿಯ ಜಾಕಿರಹುಸೇನ ಸಮುದಾಯ ಭವನದಲ್ಲಿ ಶುಕ್ರವಾರ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪೋಷಣ ಮಾಸಾಚರಣೆ ಕಾರ್ಯಕ್ರಮದ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಪೌಷ್ಠಿಕ ಆಹಾರವನ್ನು ಮಕ್ಕಳು, ಗರ್ಭಿಣಿ, ಬಾಣಂತಿಯರು ಸರಿಯಾಗಿ ಸೇವಿಸಬೇಕು ಹಾಗೂ ಅದರ ಮಹತ್ವದ ಬಗ್ಗೆ ವಿವರವಾಗಿ ಮಾತನಾಡಿದರು. ನಮ್ಮ ಹಾಗೂ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಚವಾಗಿರಿಸಿಕೊಳ್ಳಬೇಕು.

ಇದರಿಂದ ರೋಗ ರುಜಿನೆಗಳನ್ನು ತಡೆಗಟ್ಟಿ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ., ಮಾತನಾಡಿ ಸೆಪ್ಟೆಂಬರ ಮಾಹೆಯಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಬೊಜ್ಜುತನ ನಿವಾರಣೆ, ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವುದು, ಪೋಷಣ ಭಿ ಪಢಾಯಿ ಭಿ, ಶಿಶು & ಚಿಕ್ಕ ಮಕ್ಕಳ ಆಹಾರ ಅಭ್ಯಾಸಗಳು, ಪುರುಷರ ಸಹಬಾಗಿತ್ವದ ಹಾಗೂ ಇಲಾಖೆಯ ವಿವಿಧ ಯೋಜನೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಡಾ. ಗಡಾದ ವೈದ್ಯಾಧಿಕಾರಿಗಳು ಆರೋಗ್ಯ ಇಲಾಖೆ ಇವರು ಮಾತನಾಡಿ ಪೋಷಣ ಮಾಸಾಚರಣೆಯ ಇತಿಹಾಸದ ಕುರಿತು ಹಾಗೂ ಸ್ವಸ್ಥ ನಾರಿ ಸಶಕ್ತ ಪರಿವಾರ ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ರಾಧಾ ಜಿ ಮಣ್ಣೂರ ನಿರೂಪಣಾಧಿಕಾರಿಗಳು , ಶ್ರೀಮತಿ ಸುರೇಖಾ ಮಲ್ಲಾಪೂರ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಕು. ಸಂಗೀತಾ ಹೂಗಾರ ಪೋಷಣ ಜಿಲ್ಲಾ ಸಂಯೋಜಕರು, ಕು. ಪವನ ಕಾಟೀಗರ ಪೋಷಣ ಜಿಲ್ಲಾ ಕಾರ್ಯಕ್ರಮ ಸಹಾಯಕರು, ಶ್ರೀಮತಿ ಕಾವೇರಿ ಚೇಗೂರ ಪೋಷಣ ತಾಲೂಕು ಸಂಯೋಜಕರು, ಗದಗ ಯೋಜನೆಯ ಎಲ್ಲ ವಲಯ ಮೇಲ್ವಿಚಾರಕಿಯರು ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಗರ್ಭಿಣಿಯರು, ತಾಯಂದಿರು, ಭಾಗವಹಿಸಿದ್ದರು.

ಶ್ರೀಮತಿ ಫಾತಿಮಾ ಚುಳ್ಕಿ ಸ್ವಾಗತಿಸಿದರು, ಶ್ರೀಮತಿ ರುಕ್ಮಿಣಿ ದೇವಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಹಮ್ಮಿಕೊಂಡ ಕಾರ್ಯಕ್ರಮಗಳು :–ಪೌಷ್ಠಿಕ ಆಹಾರಗಳ ಪ್ರಾತ್ಯಕ್ಷಿಕೆ. 6 ತಿಂಗಳ ಮೇಲ್ಪಟ್ಟ ಮಕ್ಕಳಿಗೆ ಅನ್ನಪ್ರಾಶನ ಕಾರ್ಯಕ್ರಮ, ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ, ಕಾರ್ಯಕರ್ತೆ ಹಾಗೂ 0 ರಿಂದ 6 ವರ್ಷದ ಮಕ್ಕಳಿಂದ ವಯಸ್ಸಿಗೆ ತಕ್ಕಂತೆ ಮಗುವಿನ ಚಟುವಟಿಕೆಗಳ ಕುರಿತಾದ ಪಾತ್ಯಕ್ಷಿಕೆ. ಅಂಗನವಾಡಿ ಕಾರ್ಯಕರ್ತೆ ಹಾಗೂ ಮುದ್ದು ಮಕ್ಕಳಿಂದ ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳು.

# 8.94 ಕೋಟಿ ವೆಚ್ಚದ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ರವರಿಂದ ಚಾಲನೆ

**ಚಿಂತಾಮಣಿ** : ಚಿಂತಾಮಣಿ ತಾಲ್ಲೂಕಿನಲ್ಲಿ 8.94 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಇಂದು (ಅ 10) ಚಾಲನೆ ನೀಡಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ಅವರು ತಿಳಿಸಿದರು.

ಅವರು ಶುಕ್ರವಾರ ಚಿಂತಾಮಣಿ ತಾಲ್ಲೂಕಿನ ಸಿದ್ದೇಪಲ್ಲಿ ಕ್ರಾಸ್ ಬಳಿ ಆಯೋಜಿಸಿದ್ದ, ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಸುದ್ದಿಗಾರರೊಂದಿಗೆ ಮಾತನಾಡಿದರು.



ರಸ್ತೆ ಸುರಕ್ಷತಾ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಿದರೆ ಅಪಘಾತಗಳನ್ನು ತಡೆಗಟ್ಟಬಹುದಾಗಿದೆ. ಆದ್ದರಿಂದ ತಾಲ್ಲೂಕಿನ ವಿವಿಧ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಉದ್ದೇಶಕ್ಕಾಗಿ 30 ಕೋಟಿ ಅನುದಾನ ನೀಡುವಂತೆ ಲೋಕೋಪಯೋಗಿ ಇಲಾಖೆಯ ಸಚಿವರಲ್ಲಿ ಮನವಿ ಮಾಡಲಾಗಿತ್ತು. ಮಾನ್ಯ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರ ಸಹಕಾರದಿಂದ ರಸ್ತೆ ಸುರಕ್ಷತಾ ಕಾಮಗಾರಿಗಳನ್ನು ಚಿಂತಾಮಣಿ ತಾಲ್ಲೂಕಿನಲ್ಲಿ ಕೈಗೊಳ್ಳಲು 27.5 ಕೋಟಿ ಅನುದಾನ ಮಂಜೂರಾಗಿದೆ. ಈ ಅನುದಾನದಲ್ಲಿ ಹಂಪ್ಸ್ ಗಳ ನಿರ್ಮಾಣ, ರಸ್ತೆ ಅಗಲೀಕರಣ, ಜೋಡಿ ರಸ್ತೆ ನಿರ್ಮಾಣ, ಸೂಚನಾ ಫಲಕಗಳ ನಿರ್ಮಾಣ ಸೇರಿದಂತೆ, ರಸ್ತೆ ಅಭಿವೃದ್ಧಿ ಮಾಡುವ ಸುರಕ್ಷತಾ ಕಾಮಗಾರಿಗಳನ್ನು ಕೈಗೊಳ್ಳಲು ಯೋಜಿಸಲಾಗಿದೆ. ಲೋಕೋಪಯೋಗಿ ಇಲಾಖೆ ಒಂದರಿಂದಲೇ ಈಗಾಗಲೇ 150 ಕೋಟಿ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗಳು ಈಗಾಗಲೇ ಪ್ರಗತಿಯಲ್ಲಿವೆ. ಇದರ ಭಾಗವಾಗಿ ಇಂದು 8.94 ಕೋಟಿ ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದರು.

ಅಂತರ್ಜಲ ವೃದ್ಧಿ ಕಾಮಗಾರಿಗಳಿಗೆ ಒತ್ತು ಚಿಂತಾಮಣಿ ಭಾಗದಲ್ಲಿ ಈ ವರ್ಷ ವಾಡಿಕೆ ಪ್ರಮಾಣದಲ್ಲಿ ಮಳೆಯಾಗಿದ್ದರೂ ಸಹ ಕೆರೆಗಳಿಗೆ ನೀರು ತುಂಬಿರುವುದಿಲ್ಲ. ಚಿಂತಾಮಣಿ, ಶಿಡ್ಲಘಟ್ಟ ಭಾಗದಲ್ಲಿ ಬಹುತೇಕ ಕೆರೆಗಳು ಶೇ. 30 ಕ್ಕಿಂತ ಕಡಿಮೆ ಪ್ರಮಾಣದಲ್ಲಿ ತುಂಬಿರುತ್ತವೆ.

ಹಿಂದಿನ ಹಲವು ವರ್ಷಗಳ ಮಳೆಯ ಪ್ರಮಾಣವನ್ನು ಅವಲೋಕಿಸಿದಾಗ ಚಿಂತಾಮಣಿ ಭಾಗಕ್ಕೆ ಶಾಶ್ವತವಾಗಿ ಅಂತರ್ಜಲ ವೃದ್ಧಿಸುವ ಕಾಮಗಾರಿಗಳನ್ನು ಕೈಗೊಳ್ಳುವ ಅನಿವಾರ್ಯತೆಯನ್ನು ಸೂಚಿಸುತ್ತದೆ. ಈ ಹಿನ್ನೆಲೆಯಲ್ಲಿ ಕೆ.ಸಿ ವ್ಯಾಲಿ ಮತ್ತು ಹೆಚ್. ಎನ್ ವ್ಯಾಲಿ ನೀರಾವರಿ ಯೋಜನೆಗಳಿಂದ ಚಿಂತಾಮಣಿ ತಾಲ್ಲೂಕಿನ 119 ಕೆರೆಗಳಿಗೆ ಹಾಗೂ ಶಿಡ್ಲಘಟ್ಟ ತಾಲ್ಲೂಕಿನ 37 ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿವೆ. ಕೆಸಿ ವ್ಯಾಲಿಯ ಎರಡನೇ ಹಂತದಲ್ಲಿ ಚಿಂತಾಮಣಿ ತಾಲ್ಲೂಕಿನಲ್ಲಿ 50 ಕೆರೆ ತುಂಬಿಸುವ ಕಾಮಗಾರಿಗಳು ನಿರಂತರವಾಗಿ ನಡೆಯುತ್ತಿವೆ. ಅಲ್ಲದೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ಸರಣಿ ಚೆಕ್ ಡ್ಯಾಂಗಳನ್ನು ನಿರ್ಮಿಸುವ ಉದ್ದೇಶಕ್ಕೆ ಈಗಾಗಲೇ 140 ಕೋಟಿ ಅನುದಾನ ಮಂಜೂರಾಗಿದ್ದು, ಈ ಪೈಕಿ 90 ಕೋಟಿ ಅನುದಾನ ಬಿಡುಗಡೆಯಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಮುನಿನಾರಾಯಣಪ್ಪ, ತಾ.ಪಂ.ಮಾಜಿ ಅಧ್ಯಕ್ಷ ಲಕ್ಷ್ಮೀನಾರಾಯಣರೆಡ್ಡಿ, ಶ್ರೀರಾಮರೆಡ್ಡಿ, ತಹಶೀಲ್ದಾರ್ ಸುದರ್ಶನ ಯಾದವ್, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಎಸ್.ಆನಂದ್ ಹಾಗೂ ಸ್ಥಳೀಯ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಸದಸ್ಯರು, ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# 15 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರು ಯುವ ಕೇಂದ್ರದ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಅ.15ರ ಬುಧವಾರ ಬೆಳಿಗ್ಗೆ 10.30ಕ್ಕೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಚಿವರಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳು, ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಘನ ಉಪಸ್ಥಿತಿ ವಹಿಸುವರು.

ಸಾರಿಗೆ, ಮುಜರಾಯಿ ಇಲಾಖೆ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗರೆಡ್ಡಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಧ್ಯಕ್ಷತೆ ವಹಿಸುವರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ. ಸುಧಾಕರ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಮತ್ತು ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್, ನೆಲಮಂಗಲ ವಿಧಾನಸಭಾ ಕ್ಷೇತ್ರದ ಶಾಸಕರಾದ ಎನ್. ಶ್ರೀನಿವಾಸ್, ವಿಧಾನ ಪರಿಷತ್ ಶಾಸಕರಾದ ಪುಟ್ಟಣ್ಣ, ಎಸ್. ರವಿ, ಸುಧಾಮ್ ದಾಸ್, ರಾಮೋಜಿ ಗೌಡ, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ. ರೇವಣ್ಣ, ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಬಿ.ಎಂ.ಐ.ಸಿ.ಪಿ.ಎ ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ನಟರಾಜು ಗಾಣಕಲ್, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್ ಎ.ಬಿ. ಹಾಗೂ ರಾಮನಗರ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ (ಶಶಿ) ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:** 2025–26ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು 13 ಫಲಾನುಭವಿ ಆಧಾರಿತ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅ. 15ರ ವರೆಗೆ ಅವಧಿ ವಿಸ್ತರಿಸಿದೆ.

ಯೋಜನೆಗಳ ವಿವರ: ಆಧಾರ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ, ಶಿಶುಪಾಲನಾ ಭತ್ಯೆ, ಮರಣ ಪರಿಹಾರ ನಿಧಿ, ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಯೋಜನೆ, ದೃಷ್ಠಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೆಲ್‌ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನ ಸಲಕರಣೆಗಳ ಯೋಜನೆ, ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿಚಾಲಿತ ವೀಲ್ ಚೇರ್ ಹಾಗೂ ಪ್ರತಿಭೆ ಯೋಜನೆ.

ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಸೇವಾಸಿಂಧು ತಂತ್ರಾಂಶದ ಮೂಲಕ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಕೇಂದ್ರಗಳಲ್ಲಿ ವಿಕಲಚೇತನ ವ್ಯಕ್ತಿಗಳು https://sevesindhu.karnataka.gov.in/Sevasindhu/kannada ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಠಡಿ ಸಂಖ್ಯೆ: 107, ನೆಲ ಮಹಡಿ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ, ಬಿ.ಎಂ. ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ–562159 ಈ ಕಚೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿರಾಳಕೊಪ್ಪ: ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ** : ಶಿರಾಳಕೊಪ್ಪ ಮೆಸ್ಕಾಂ ಉಪವಿಭಾಗ ಕಛೇರಿಯಲ್ಲಿ ಅ.14ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆನಡೆಯಲ್ಲಿದ್ದು, ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದಾರೆ. ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ಮಾನಸಿಕ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡಬೇಡಿ: ನ್ಯಾ.ಎಸ್.ವಿ.ಕಾಂತರಾಜು



**ಚಿಕ್ಕಬಳ್ಳಾಪುರ:** ಮಾನಸಿಕ ರೋಗಿಗಳಿಗೆ ಉಚಿತ ಕಾನೂನು ನೆರವನ್ನು ಕಾನೂನು ಸೇವೆಗಳ ಪ್ರಾಧಿಕಾರದಿಂದ ನೀಡುವ ಸೌಲಭ್ಯವಿದೆ. ಅಲ್ಲದೇ ಯಾವುದೇ ನ್ಯಾಯಾಲಯದಲ್ಲಿ ಶುಲ್ಕವಿಲ್ಲದೆ ಉಚಿತವಾಗಿ ಅವರ ಪರವಾಗಿ ಪ್ರಕರಣವನ್ನು ನಡೆಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಗೌರವಾನ್ವಿತ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕಾಂತರಾಜು.ಎಸ್.ವಿ. ರವರು ತಿಳಿಸಿದರು.

ಅವರು ತಾಲ್ಲೂಕಿನ ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಚಿಕ್ಕಬಳ್ಳಾಪುರ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ "ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಮಾನಸಿಕ ರೋಗಿಗಳಿಗೆ ಆರೋಗ್ಯ ಸುಧಾರಿಸಲು ಉಚಿತ ಸಲಹೆ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಕಲ್ಪಿಸಿಕೊಡಲಾಗುತ್ತದೆ. ಮಾನಸಿಕ ಆರೋಗ್ಯದ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಇರುವುದಿಲ್ಲ. ತಮ್ಮ ಮನಸ್ಸಿನ ಮೇಲೆ ಆಗುವ ಒತ್ತಡ, ಗೊಂದಲ, ನಿರಂತರ ಭಯ, ಆತಂಕವನ್ನು ಕೆಲವರು ನಿರ್ಲಕ್ಷ್ಯ ಮಾಡುತ್ತಾರೆ. ಇಂತಹ ನಿರ್ಲಕ್ಷ್ಯವನ್ನು ಮಾಡುವುದರಿಂದ ಹೆಚ್ಚಿನ ತೊಂದರೆಗೆ ಗುರಿಯಾಗುತ್ತಾರೆ. ಮಾನಸಿಕ ಆರೋಗ್ಯ ಮತ್ತು ಸಮಸ್ಯೆಗಳ ಬಗ್ಗೆ ಜನ ಜಾಗೃತಿ ಮೂಡಿಸುವ ಸಲುವಾಗಿ ಕಾನೂನು ಸೇವಾ ಪ್ರಾಧಿಕಾರದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಜೊತೆಗೆ ಮಾನಸಿಕ ಆರೋಗ್ಯ ಕುರಿತು ಅರಿವು ಮೂಡಿಸುವ ಹಾಗೂ ಮಾನಸಿಕ ರೋಗಕ್ಕೆ ತುತ್ತಾಗಿರುವ

ವ್ಯಕ್ತಿಗಳ ಸಮಸ್ಯೆಗಳನ್ನು ಆಲಿಸುವ, ಪರಿಹರಿಸುವ ಸಲುವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಸಮಿತಿಯನ್ನು ರಚನೆ ಮಾಡಿಲಾಗಿದೆ. ಈ ಸಮಿತಿಯ ಮುಖಾಂತರ ಹೆಚ್ಚು ಕಾರ್ಯಕ್ರಮಗಳನ್ನು ಆಯೋಜನೆ ಮಾಡಿ ಜನ ಸಾಮಾನ್ಯರಿಗೆ ಆರೋಗ್ಯದ ಬಗ್ಗೆ ಅರಿವು ಮೂಡಿಸಲಾಗುತ್ತದೆ. ಈ ಎಲ್ಲಾ ಸೌಲಭ್ಯಗಳ ಕುರಿತು ಮಾನಸಿಕ ಅನಾರೋಗ್ಯಕ್ಕೆ ಒಳಗಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಜಾಗೃತಿ ಹೊಂದಿ ಲಭ್ಯವಿರುವ ಕಾನೂನು ಹಾಗೂ ವೈದ್ಯಕೀಯ ಸೌಲಭ್ಯಗಳನ್ನು ಮಾನಸಿಕ ರೋಗಿಗಳಿಗೆ ಕೊಡಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಮಾತನಾಡಿ, ಸಾಮಾನ್ಯವಾಗಿ ಶರೀರದ ಕಾಯಿಲೆಗಳಲ್ಲಿ ನಾನಾ ಬಗೆ ಇರುವಂತೆ ಮಾನಸಿಕ ಕಾಯಿಲೆಗಳಲ್ಲೂ ನಾನಾ ಬಗೆಗಳಿವೆ. ಚಿತ್ತ ಚಂಚಲತೆ, ಚಿತ್ತ ವಿಕಲತೆ, ಮದ್ದು/ಮದ್ಯ ವ್ಯಸನ, ಬುದ್ಧಿ ಮಾಂದ್ಯತೆ, ಮಕ್ಕಳಲ್ಲಿ ಕಂಡು ಬರುವ ನಡವಳಿಕೆ ದೋಷಗಳು ಮತ್ತಿತರ ಮನಸ್ಸಿನ ಕಾಯಿಲೆಗಳು, ಮನೋ ದೈಹಿಕ ಬೇನೆಗಳು ಸೇರಿದಂತೆ ಹಲವು ರೀತಿಯ ಮಾನಸಿಕ ರೋಗಗಳು ಇರುತ್ತವೆ. ಇಂತಹ ಮಾನಸಿಕ ಕಾಯಿಲೆಗಳನ್ನು ತಡೆಗಟ್ಟುವ ಮಾರ್ಗಗಳು, ಚಿಕಿತ್ಸಾ ಕ್ರಮಗಳನ್ನು ಹತ್ತಿರ ಸರ್ಕಾರಿ ಆಸ್ಪತ್ರೆಗಳ ತಜ್ಞವೈದ್ಯರ ಸಲಹೆ ಪಡೆದು ಪರಿಹರಿಸಿಕೊಳ್ಳಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶಿಲ್ಪಾ.ಬಿ, ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಡೀನ್ ಮತ್ತು ಡೈರೆಕ್ಟರ್ ಡಾ. ಎಂ.ಎಲ್. ಮಂಜುನಾಥ, ಮನೋವೈದ್ಯಕೀಯ ವಿಭಾಗದ ಮುಖ್ಯಸ್ಥರಾದ ಡಾ. ಬಿ.ಜಿ. ಹೇಮಂತ್ ಕುಮಾರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕೆ.ವಿ. ಅಭಿಲಾಷ್, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ. ಶಿವಕುಮಾರ್, ಮನೋವೈದ್ಯರಾದ ಡಾ. ಜಿ.ಹೇಮಂತ್ ಕುಮಾರ್, ಡಾ. ಎ. ಲಾವಣ್ಯ ಹಾಗೂ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು

# ಮಲ್ಲೇನಹಳ್ಳಿ ಗ್ರಾ.ಪಂ ನೂತನ ಅಧ್ಯಕ್ಷರಾಗಿ ದಿಲೀಪ್‌ಕುಮಾರ್ ಅವಿರೋಧ ಆಯ್ಕೆ

**ಚಿಕ್ಕಮಗಳೂರು:** ತಾಲ್ಲೂಕು ಮಲ್ಲೇನಹಳ್ಳಿ ಗ್ರಾಮ ಪಂಚಾಯಿತಿಯ ನೂತನಅಧ್ಯಕ್ಷರಾಗಿ ಬಿಜೆಪಿ ಬೆಂಬಲಿತ ದಿಲೀಪ್‌ಕುಮಾರ್‌ಅವಿರೋಧಆಯ್ಕೆಯಾದರು.

ಇಂದು ನಡೆದ ನೂತನಅಧ್ಯಕ್ಷರಆಯ್ಕೆ ಪ್ರಕ್ರಿಯೆಯಲ್ಲಿ ಬೇರೆಯಾವುದೇ ಸದಸ್ಯರು ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ದಿಲೀಪ್ ಕುಮಾರ್‌ರವರುಅವಿರೋಧಆಯ್ಕೆಯಾಗಿದ್ದಾರೆಎಂದುಚುನಾವಣಾಅಧಿಕಾರಿರುದ್ರಪ್ಪಘೋಷಿಸಿದರು.

ನೂತನಅಧ್ಯಕ್ಷ ದಿಲೀಪ್‌ಕುಮಾರ್ ಮಾತನಾಡಿ, ಡಾ. ಬಿ.ಆರ್‌ಅಂಬೇಡ್ಕರ್‌ರವರು ನೀಡಿದ ಸಂವಿಧಾನದಆಶಯದಂತೆಇಂದು ಸರ್ವಸದಸ್ಯರ ಬೆಂಬಲದೊಂದಿಗೆಅಧ್ಯಕ್ಷನಾಗಿಆಯ್ಕೆಯಾಗಿದ್ದು, ಸಿಕ್ಕಿರುವ ಅಲ್ಪಾವಧಿಯಲ್ಲಿಕುಡಿಯುವ ನೀರು, ಸ್ವಚ್ಛತೆ, ನಿವೇಶನ, ಮನೆ ರಹಿತ ಬಡವರ ಪರವಾಗಿಆದ್ಯತೆ ಮೇಲೆ ಕೆಲಸ ಮಾಡುವುದಾಗಿ ಭರವಸೆ ನೀಡಿದರು.

ಈ ಗ್ರಾ.ಪಂ ವ್ಯಾಪ್ತಿಯ ಗ್ರಾಮಗಳ ಜನರ ಸೇವೆಗೆ ಸದಾ ಸಿದ್ಧವಿದ್ದು, ಅವರ ಆಶೋತ್ತರಗಳಿಗೆ ಸ್ಪಂದಿಸಿ ಕೆಲಸ ಮಾಡುವುದಾಗಿತಾಯಿದೇವಿರಮ್ಮನ ಮೇಲೆ ಪ್ರಮಾಣ ಮಾಡಿದರು.

ಮಾಜಿಅಧ್ಯಕ್ಷ ಸತೀಶ್ ಮತನಾಡಿ, ಸಿಕ್ಕಿರುವ ಕಡಿಮೆಅವಧಿಯಲ್ಲಿ ನೂತನಅಧ್ಯಕ್ಷರುಉತ್ತಮ ಕೆಲಸ ಮಾಡಲಿ ಎಂದು ಆಶಿಸುತ್ತ ಶುಭ ಹಾರೈಸುತ್ತೇನೆಎಂದರು.




ಗ್ರಾಮ ಪಂಚಾಯಿತಿಗೆ ಬರುವಅನುದಾನವನ್ನು ಸಮರ್ಪಕವಾಗಿ ಬಳಸಿ ಜನಪರ ಆಡಳಿತ ನೀಡಲು ಸಲಹೆ ನೀಡಿದಅವರು, ಕುಡಿಯುವ ನೀರು, ಸ್ವಚ್ಛತೆ ಹಾಗೂ ಸರ್ಕಾರದ ಮೇಲೆ ಒತ್ತಡವನ್ನು ನಿವೇಶನ ಮತ್ತು ಮನೆ ರಹಿತರಿಗೆ ಸ್ಪಂದಿಸುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ಮಾಜಿಉಪಾಧ್ಯಕ್ಷೆ ಪಲ್ಲವಿ ನಿವೇಶ್‌ಗೌಡ ಮಾತನಾಡಿ, ತಾವುಅಧಿಕಾರದಅವಧಿಯಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ನೂತನಅಧ್ಯಕ್ಷರು ಪೂರ್ಣಗೊಳಿಸುತ್ತಾರೆಂಬ ವಿಶ್ವಾಸವಿದೆ, ಬಿಜೆಪಿ ಸರ್ಕಾರದಅವಧಿಯಲ್ಲಿ ಈ ಪಂಚಾಯಿತಿಯಲ್ಲಿ 200 ಮನೆ ಮಂಜೂರಾಗಿದ್ದು, ಹಾಲಿ ರಾ ಜ್ಯ ಸ ರ್ಕಾ ರ ದಿಂ ದ ಅ ನು ದಾ ನ ಬಿಡುಗಡೆಯಾಗಿಲ್ಲಎಂದು ಹೇಳಿದರು.

ಬೀದಿದೀಪ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಪಂಚಾಯಿತಿಅಧ್ಯಕ್ಷರು ಶ್ರಮಿಸಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿಉಪಾಧ್ಯಕ್ಷೆಕಾವ್ಯ ಮೋಹನ್‌ಕುಮಾರ್, ಸದಸ್ಯರುಗಳಾದ ಲಲಿತಾ, ಪುಟ್ಟಮ್ಮ, ತಮ್ಮೇಗೌಡ, ದಿನೇಶ್ ಎಂ.ಕೆ, ಯತೀಶ್, ಅನುಷಾ, ಸಂದೀಪ್, ದಿಲೀಪ್‌ಕುಮಾರ್, ಶಶಿಕಲಾ ಪಟ್ಟಸ್ವಾಮಿ, ಪ್ರೇಮ ಶಿವಕುಮಾರ್, ಕೆ.ಆರ್‌ರವಿಕುಮಾರ್, ಸುನೀತ ಸ್ವಾಮಿ ಹಾಗೂ ಪಂಚಾಯಿತಿಅಭಿವೃದ್ಧಿಅಧಿಕಾರಿ ಸುಶ್ಮಿತಾಗೌಡ ಉಪಸ್ಥಿತರಿದ್ದರು.

# ಜಿಲ್ಲೆಯ ಹಿಂದೂ ಧಾರ್ಮಿಕ ಸಂಸ್ಥೆಗಳ ವ್ಯವಸ್ಥಾಪನಾ ಸಮಿತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ** : ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಕಾಯ್ದೆ ಅಧಿನಿಯಮ 1997 ರ ಕಲಂ 25 ರನ್ವಯ ಶಿವಮೊಗ್ಗ ಜಿಲ್ಲೆಯ ಬಿ ಮತ್ತು ಸಿ ಪ್ರವರ್ಗ ಮುಜರಾಯಿ ದೇವಾಲಯಗಳ ಅರ್ಹ ಸದಸ್ಯರುಗಳನ್ನು ನಿಗದಿಪಡಿಸಿದ ಅರ್ಹತೆಗಳನುಸಾರವಾಗಿ ವ್ಯವಸ್ಥಾಪನಾ ಸಮಿತಿಯನ್ನು ಮುಂದಿನ 3 ವರ್ಷಗಳ ಅವಧಿಗೆ ರಚಿಸಲು ಆಸಕ್ತ ಭಕ್ತಾದಿಗಳು/ ಸಾರ್ವಜನಿಕರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಶಿವಮೊಗ್ಗ ತಾಲ್ಲೂಕಿನಲ್ಲಿ ಪ್ರವರ್ಗ "ಸಿ" ಯಲ್ಲಿ ಶಿವಮೊಗ್ಗ ಗ್ರಾಮದ ಶ್ರೀ ಕೋಟೆ ಚಂಡಿಕಾ ದುರ್ಗಾಪರಮೇಶ್ವರಿ ದೇವಸ್ಥಾನ ಹಾಗೂ ಹೊಸನಗರ ತಾಲ್ಲೂಕಿನ ಬಾಣಿಗ ಗ್ರಾಮದ ಶ್ರೀ ವೆಂಕಟರಮಣ ದೇವರು, ಅರಮನೆ ಕೊಪ್ಪ ಗ್ರಾಮದ ಶ್ರೀ ಬಪ್ಪನಮನೆ ಗೋಪಾಲಕೃಷ್ಣ ದೇವಸ್ಥಾನ, ತಳಲೆ ಗ್ರಾಮದ ಶ್ರೀ ತಿರುಮಲ ವೆಂಕಟರಮಣ ದೇವರು, ಹೊಸಕೆಸರೆ ಗ್ರಾಮದ ಶ್ರೀ ಮಲ್ಲಿಕಾರ್ಜುನ ದೇವರು, ಕಡಸೂರು ಗ್ರಾಮದ ಶ್ರೀ ವಿನಾಯಕ ದೇವರು, ಉಳ್ತಿಗ ಗ್ರಾಮದ ಶ್ರೀ ದುರ್ಗಾಪರಮೇಶ್ವರಿ ದೇವರು, ಹೊಸಕೆಸರೆ ಗ್ರಾಮದ ಶ್ರೀ ಜೇನುಕಲ್ಲಮ್ಮ ದೇವರು ಅಮ್ಮನಘಟ್ಟ, ಅಂಡಗದೂದುರು ಗ್ರಾಮದ ಶ್ರೀ ಹೆಬ್ಬುಲಿಗೆ ಲಕ್ಷ್ಮೀನರಸಿಂಹ ದೇವರು, ರಿಪ್ಪನ್‌ಪೇಟೆ ಗ್ರಾಮದ ಶ್ರೀಸಿದ್ಧಿ ವಿನಾಯದ ದೇವರು, ಬರುವೆ ಗ್ರಾಮದ ಶ್ರೀಕಲಾನಾಥ ದೇವರು, ಹುಂಚ ಗ್ರಾಮದ ಕಮ್ಮಟೇಶ್ವರ ದೇವರು, ಯಡಿಯೂರು ಗ್ರಾಮದ ಶ್ರೀರಾಮಭೂತ ದೇವರು, ಕಚ್ಚಿಗೆ ಬೈಲು ಗ್ರಾಮದ ಶ್ರೀ ಮಾನವಿಹೊಳೆ ಬಸವಣ್ಣ ದೇವರು, ಹೊಸಕೆಸರೆ ಗ್ರಾಮದ ಶ್ರೀ ಮಲ್ಲಿಕಾರ್ಜುನ ದೇವರು, ಭೈಸೆ ಗ್ರಾಮದ ಶ್ರೀ ನೇತ್ರಾಭೈಲು ಚೌಡ ದೇವರು, ಅಮೃತ ಗ್ರಾಮದ ಶ್ರೀ ಭಳ್ಳಶ್ವರ ದೇವರು, ಕಡಸೂರು ಗ್ರಾಮದ ಶ್ರೀ ವಿನಾಯಕ ದೇವರು, ಹುಂಚ ಗ್ರಾಮದ ಶ್ರೀ ವೀರಭದ್ರ ದೇವರು, ಕಮ್ಮಚ್ಚಿ ಗ್ರಾಮದ ಶ್ರೀ ತಿರುಮಲ ವೆಂಕಟರಮಣ ದೇವರು, ಕಿಳಂದೂರು ಗ್ರಾಮದ ಶ್ರೀ ಮರ್ಕಾಂಡೇಶ್ವರ ದೇವರು, ಬ್ರಾಹ್ಮಣದೇವರು ಗ್ರಾಮದ ಶ್ರೀ ಲಕ್ಷ್ಮೀ ನರಸಿಂಹ ದೇವರು, ಬ್ರಾಹ್ಮಣವಾಡ ಗ್ರಾಮದ ಶ್ರೀ ವಿನಾಯಕ ದೇವರು, ಮತ್ತಿಕೈ ಗ್ರಾಮದ ಶ್ರೀ ಅಂಗಡೇರಮನೆ ಶ್ರೀ ಲಕ್ಷ್ಮೀನಾರಾಯಣ ದೇವರು ಇವುಗಳು ವ್ಯವಸ್ಥಾಪನಾ ಸಮಿತಿ ರಚನೆ ಮಾಡಲು ಬಾಕಿ ಇರುವ ಸಂಸ್ಥೆಗಳು.

ಆಸಕ್ತರು ನಿಗದಿತ ನಮೂನೆ ಅರ್ಜಿಗಳನ್ನು ಆಯಾ ತಾಲ್ಲೂಕು ತಹಶೀಲ್ದಾರ್ ಕಚೇರಿಯಿಂದ ಪಡೆದು, ಭರ್ತಿ ಮಾಡಿ ಅ.24 ರೊಳಗಾಗಿ ಸಲ್ಲಿಸುವುದು.

ಅರ್ಜಿ ಸಲ್ಲಿಸಬಯಸುವ ಆಸಕ್ತ ಕನಿಷ್ಟ 25 ವರ್ಷ ವಯಸ್ಸಿನವರಾಗಿರಬೇಕು. ಒಂದು ಅಧಿಸೂಚಿತ ಸಂಸ್ಥೆಯ/ ದೇವಸ್ಥಾನದ ವ್ಯವಸ್ಥಾಪನಾ ಸಮಿತಿಗೆ ಮಾತ್ರ ಸದಸ್ಯತ್ವವನ್ನು ಕೋರಿ ಅರ್ಜಿಯನ್ನು ನಿಗದಿತ ನಮೂನೆ–1(ಬಿ)(22 ನೇ ನಿಯಮ)ರಲ್ಲಿ ಭರ್ತಿ ಮಾಡಿ ತಾಲ್ಲೂಕು ತಹಶೀಲ್ದಾರ್ ಕಚೇರಿಗೆ ನೇರವಾಗಿ ಸಲ್ಲಿಸಬಹುದೆಂದು ಹಾಗೂ ನಿಗದಿಪಡಿಸಿ ದಿನಾಂಕ ನಂತರದ ಸ್ವೀಕೃತವಾಗುವ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದ್ದಾರೆ.

# ಕರ್ನಾಟಕ ರಾಜ್ಯೋತ್ಸವ ಪೂರ್ವಭಾವಿ ಸಭೆ

**ದಾವಣಗೆರೆ** : ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 13 ರಂದು ಬೆಳಿಗ್ಗೆ 11.30ಕ್ಕೆ ಕರ್ನಾಟಕ ರಾಜ್ಯೋತ್ಸವ ಆಚರಣೆ ಪೂರ್ವಭಾವಿ ಸಭೆಯನ್ನು ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

# ಪ್ರತಿಗಂಧರ್ವ ನೂತನ ನಾಟಕ ಕಥಾಪೂಜೆ

**ದಾವಣಗೆರೆ** : ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವೃತ್ತಿ ರಂಗಭೂಮಿ ರಂಗಾಯಣ ದಾವಣಗೆರೆ ವತಿಯಿಂದ ಅಕ್ಟೋಬರ್ ಇಂದು ಬೆಳಿಗ್ಗೆ 11 ಗಂಟೆಗೆ ನಗರದ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ಪ್ರತಿಗಂಧರ್ವ ನೂತನ ನಾಟಕ ಕಥಾಪೂಜೆ(ಕಲಾವಿದರಿಗೆ ತರಬೇತಿ ಆರಂಭ) ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ದೃಶ್ಯಕಲಾ ಮಹಾವಿದ್ಯಾಲಯದ ಪ್ರಾಚಾರ್ಯರರಾದ ಡ. ಸತೀಶ ಕುಮಾರ ಪಿ ವಲ್ಲೇಪುರೆ ಉದ್ಘಾಟಿಸುವರು. ವೃತ್ತಿ ರಂಗಭೂಮಿ ರಂಗಾಯಣ ನಿರ್ದೇಶಕ ಮಲ್ಲಿಕಾರ್ಜುನ ಕಡಕೋಳ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ನಾಟಕ ಅಕಾಡೆಮಿಯ ಅಧ್ಯಕ್ಷರಾದ ಕೆ.ವಿ ನಾಗರಾಜಮೂರ್ತಿ, ಕರ್ನಾಟಕ ರಂಗಸಮಾಜದ ಸದಸ್ಯರಾದ ಡಾ.ಕೆ ರಾಮಕೃಷ್ಣಯ್ಯ, ನಾಟಕಕಾರರಾದ ಡಾ.ರಾಜಪ್ಪ ದಳವಾಯಿ, ರಂಗ ನಿರ್ದೇಶಕರಾದ ಮಾಲತೇಶ ಬಡಿಗೇರ ಭಾಗವಹಿಸುವರು.

## ಭಾಗ್ಯಲಕ್ಷ್ಮೀ: ತಂತ್ರಾಂಶದಲ್ಲಿ ಅಳವಡಿಕೆಗೆ ಅ.30 ಕಡೆ ದಿನ

**ಚಿಕ್ಕಮಗಳೂರು:** 2006-07ರಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿ ನೋಂದಣಿಯಾಗಿರುವ ಫಲಾನುಭವಿಯ ಪರಿಪಕ್ವ ಮೊತ್ತವನ್ನು ಪಡೆಯಲು ತಂತ್ರಾಂಶದಲ್ಲಿ ಅಳವಡಿಸಲು ಅಕ್ಟೋಬರ್ 30 ಕಡೆ-ಯ ದಿನವಾಗಿದೆ. 2006-07ರಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿ ನೋಂದಣಿಯಾಗಿರುವ ಫಲಾನುಭವಿಗಳಿಗೆ 18 ವರ್ಷ ಪೂರ್ಣಗೊಂಡ ಈಗಾಗಲೇ ಪರಿಪಕ್ವ ಮೊತ್ತವನ್ನು ಮಂಜೂರು ಮಾಡಲು ತಂತ್ರಾಂಶದಲ್ಲಿ ಅಳವಡಿಸಲಾಗುತ್ತಿದೆ. 2006-07ನೇ ಸಾಲಿನಲ್ಲಿ ಅನರ್ಹ ಫಲಾನುಭವಿಗಳನ್ನು ಹೊರತುಪಡಿಸಿ ಬಾಕಿಯಿರುವ ಅರ್ಹ ಫಲಾನುಭವಿಗಳಿಗೆ ಪರಿಪಕ್ವ ಮೊತ್ತವನ್ನು ಪಡೆಯಲು ತಂತ್ರಾಂಶದಲ್ಲಿ ಅಳವಡಿಸಲು ಅಕ್ಟೋಬರ್ 30 ಕಡೆಯ ದಿನ. ಎಲ್ಲ ಅರ್ಹ ಫಲಾನುಭವಿಗಳು ಅಕ್ಟೋಬರ್ 30 ರೊಳಗೆ ಕಚೇರಿಗೆ ಬಂದು ತಂತ್ರಾಂಶದಲ್ಲಿ ಅಳವಡಿಸಬೇಕು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿ.ರಂಗನಾಥ ತಿಳಿಸಿದ್ದಾರೆ.

## ಕೃಷಿ ಇಲಾಖೆಯಲ್ಲಿ ಆತ್ಮ ಯೋಜನೆಯಡಿ ಹುದ್ದೆ

**ಚಿಕ್ಕಮಗಳೂರು:** ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ಜಿಲ್ಲೆಯ ತರೀಕೆರೆ, ಕೊಪ್ಪ, ಶೃಂಗೇರಿ ತಾಲ್ಲೂಕುಗಳಲ್ಲಿ ಖಾಲಿ ಇರುವ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರ (ಬಿಟಿಎಂ) ಹುದ್ದೆಗಳ ತಾತ್ಕಾಲಿಕ ನೇಮಕಾತಿಗಾಗಿ ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವಿದ್ಯಾರ್ಹತೆಯು ಬಿಟಿಎಂ ಹುದ್ದೆಗೆ ಕೃಷಿ, ಕೃಷಿ ಸಂಬಂಧಿತ ವಿಶ್ವ ವಿದ್ಯಾನಿಲಯಗಳು ನೀಡುವ ಸ್ನಾತಕೋತ್ತರ ಪದವಿಯೊಂದಿಗೆ (ಎಂಎಸ್ಸಿ ಅಗ್ರಿ, ಎಂಎಸ್ಸಿ ಹಾರ್ಟಿ) ಜೊತೆಗೆ ಕಂಪ್ಯೂಟರ್ ಜ್ಞಾನ ಹೊಂದಿರಬೇಕು.

## ರಾಷ್ಟ್ರ ಮಟ್ಟಕ್ಕೆ ಸಿದ್ದಯ್ಯನ ಕೋಟೆಯ ಚಿನ್ಮಯ ಐನಳ್ಳಿಲಕ್ಷ್ಮಿ ಆಯ್ಕೆ

**ಚಿತ್ರದುರ್ಗ :** ಕರ್ನಾಟಕ ಸರ್ಕಾರ .ಸಾರ್ವಜನಿಕ ಶಿಕ್ಷಣ ಇಲಾಖೆ ತುಮಕೂರು ಜಿಲ್ಲೆಯ ತುರುವೇಕೆರೆ ತಾಲೂಕಿನ ವಾಯುಸಂದ್ರದ ಎಸ್‌ಬಿಜಿ ಕ್ರೀಡಾಂಗಣದಲ್ಲಿ ನಡೆದ ರಾಜ್ಯಮಟ್ಟದ ಯಾಂಡ್ ಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಬೆಂಗಳೂರು ವಿಭಾಗದ ತಂಡದಲ್ಲಿ ನಮ್ಮ ಗಡಿ ಭಾಗದ ಮೊಳಕಾಲ್ಮೂರು ತಾಲೂಕ್ ಯರನಹಳ್ಳಿಂಮಲ್ಲಿರುವ ಕಿತ್ತೂರಾಣಿ ಚೆನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿನಿಯರು ಐದು ಜನ ಭಾಗವಹಿಸಿದ್ದು ಮೂರು ಜನ ರಾಷ್ಟ್ರ ಮಟ್ಟಕ್ಕೆ ಸಿದ್ದಯ್ಯನ ಕೋಟೆಯ ಎಸ್ ಕೆ ಚಿನ್ಮಯ ಐನಳ್ಳಿಲಕ್ಷ್ಮಿ ಕೋನಾಪುರಸುನಿತ. ಆಯ್ಕೆಯಾಗಿದ್ದಾರೆ ಇವರಿಗೆ ಮಾರ್ಗದರ್ಶಕರಾಗಿ ಡಾ. ಸಂಪತ್ ಕುಮಾರ್ ದೈಹಿಕ ಶಿಕ್ಷಕರು ವಸತಿ ಶಾಲೆಯ ಪ್ರಾಚಾರ್ಯರಾದ ದಸ್ತಗಿರಿ ಸರ್ ಮತ್ತು ಸಿಬ್ಬಂದಿ ವರ್ಗದವರಿಗೆ ಸಿದ್ದಯ್ಯನ ಕೋಟೆಯ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಶಾಖಾಮಠದ ಪೀಠಾಧಿಪತಿ ಪೂಜ್ಯಶ್ರೀ ಬಸವಲಿಂಗ ಮಹಾಸ್ವಾಮಿಗಳು ಶ್ರೀಮಠದ ಕಾರ್ಯದರ್ಶಿ ಪಿಆರ್ ಕಾಂತರಾಜ್ ಅಭಿನಂದಿಸಿದರು.



## ಮಹಿಳಾ ಪತ್ರಕರ್ತರನ್ನು ಹೊರಗಿಟ್ಟಿದ್ದರಲ್ಲಿ ತಮ್ಮ ಪಾತ್ರವಿಲ್ಲ:ವಿದೇಶಾಂಗ ಸಚಿವಾಲಯ ಸ್ಪಷ್ಟೀಕರಣ

**ನವದೆಹಲಿ:** ಭಾರತ ಭೇಟಿಯಲ್ಲಿರುವ ಅಫ್ಘಾನ್ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಅವರ ಪತ್ರಿಕಾಗೋಷ್ಠಿ ವೇಳೆ ಮಹಿಳಾ ಪತ್ರಕರ್ತರನ್ನು ಹೊರಗಿಟ್ಟ ವಿಷಯದಲ್ಲಿ ತಮ್ಮ ಪಾತ್ರ ಏನೂ ಇಲ್ಲ, ಇದರ ಬಗ್ಗೆ ತಮಗೆ ತಿಳಿದಿಲ್ಲ ಎಂದು ವಿದೇಶಾಂಗ ಸಚಿವಾಲಯ ಸ್ಪಷ್ಟೀಕರಣ ನೀಡಿದೆ.

ಅಮೀರ್ ಖಾನ್ ಮುತ್ತಕಿ ಮತ್ತು ವಿದೇಶಾಂಗ ಸಚಿವ ಎಸ್ ಜೈಶಂಕರ್ ನಡುವೆ ಅಫ್ಘಾನ್ ರಾಯಭಾರ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಯಾವುದೇ ಮಹಿಳಾ ಪತ್ರಕರ್ತರನ್ನು ಆಹ್ವಾನಿಸಲಾಗಿಲ್ಲ ಎನ್ನುವ ಟೀಕೆಯ ಹಿನ್ನೆಲೆಯಲ್ಲಿ ಭಾರತ ಸ್ಪಷ್ಟೀಕರಣ ನೀಡಿದೆ


2021 ರಲ್ಲಿ ತಾಲಿಬಾನ್ ಗುಂಪು ಅಫ್ಘಾನಿಸ್ತಾನ ಸರ್ಕಾರವನ್ನು ವಶಪಡಿಸಿಕೊಂಡ ನಂತರ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಭಾರತಕ್ಕೆ ಮೊದಲ ಭೇಟಿ ನೀಡಿದ್ದಾರೆ.

## ಮಹಿಳೆಯ ಮೃತದೇಹವನ್ನೂ ಬಿಡದ ಪಾಪಿ ಅತ್ಯಾಚಾರಿ

**ಇಂದೋರ್:** ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಅಥವಾ ಕಿರುಕುಳ ಪ್ರಕರಣಗಳು ಹೆಚ್ಚುತ್ತಿವೆ. ಇದೀಗ ವಿಕೃತ ಕಾಮಿಯೊಬ್ಬ ಮಹಿಳೆಯ ಮೃತದೇಹದ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆಘಾತಕಾರಿ ಘಟನೆ ಮಧ್ಯಪ್ರದೇಶದ ಬುರ್ಹಾನ್‌ಪುರ ಜಿಲ್ಲೆಯಲ್ಲಿ ನಡೆದಿದೆ.

ಈ ಘಟನೆ ಕಳೆದ ವರ್ಷ ಏಪ್ರಿಲ್‌ನಲ್ಲಿ ನಡೆದಿದ್ದರೂ, ಈ ಹೇಯ ಕೃತ್ಯದ ಸಿಸಿಟಿವಿ ದೃಶ್ಯಾವಳಿಗಳು ಇತ್ತೀಚೆಗೆ ಪತ್ತೆಯಾಗಿವೆ. ವರದಿಗಳ ಪ್ರಕಾರ, ಮಹಿಳೆಯ ಶವವನ್ನು ಶವಾಗಾರದೊಳಗೆ ಇರಿಸಿದಾಗ, ಆರೋಪಿಯು ಆವರಣದ ಒಳನುಗ್ಗಿ, ಶವವನ್ನು ಯಾರ ಕಣ್ಣಿಗೂ ಬೀಳದಂತೆ ಎಳೆದುಕೊಂಡು ಹೋಗುವ ದೃಶ್ಯದ ವಿಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

# ನಗರದ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ : ಶಾಸಕ ತಮ್ಮಯ್ಯ




**ಚಿಕ್ಕಮಗಳೂರು**-ನಗರದ ಸೌಂದರ್ಯ ಹೆಚ್ಚಿಸುವ ಜೊತೆಗೆ ಸರ್ವಾಂಗೀಣ ಅಭಿವೃದ್ಧಿಗೆ ಆದ್ಯತೆ ನೀಡಿ ಮೇ ಮಾಹೆಯ ಅಂತ್ಯದೊಳಗೆ ನಗರದ ಎಲ್ಲಾ ರಸ್ತೆಗಳನ್ನು ಸಂಪೂರ್ಣ ಡಾಂಬರೀಕರಣ ಮಾಡಿ ಮುಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಶಾಸಕ ಹೆಚ್.ಡಿ ತಮ್ಮಯ್ಯ ತಿಳಿಸಿದರು.

ಅವರು ಇಂದು ನಗರದ ಬಸವೇಶ್ವರ ರಸ್ತೆ ಬಸವತತ್ವ ಪೀಠದ ಮುಂಭಾಗದಲ್ಲಿ ಹಾಗೂ ಕಣಿವೆ ರುದ್ರೇಶ್ವರ ದೇವಸ್ಥಾನದ ಸಮೀಪ ತಲಾ 12 ಲಕ್ಷ ರೂ ವೆಚ್ಚದಲ್ಲಿ ಶಾಸಕರ ನಿಧಿಯಿಂದ ನಿರ್ಮಿಸಲಾಗಿರುವ ಸುಸಜ್ಜಿತ ಅತ್ಯಾಧುನಿಕ ಬಸ್ ತಂಗುದಾಣಗಳನ್ನು ಸಾರ್ವಜನಿಕ ಸಮರ್ಪಣೆಗೊಳಿಸಿ ಮಾತನಾಡಿದರು.

ನಗರಸಭೆ ಮತ್ತು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಗರದ ಎಲ್ಲಾ ರಸ್ತೆಗಳನ್ನು ಸುಮಾರು 20.50 ಕೋಟಿ ರೂ ವೆಚ್ಚದಲ್ಲಿ ಡಿಸೆಂಬರ್‌ನಿಂದ ನಗರದ ಎಲ್ಲಾ ರಸ್ತೆಗಳ ಡಾಂಬರೀಕರಣ ಕಾಮಗಾರಿ ಪ್ರಾರಂಭವಾಗಲಿದೆ ಎಂದು ಹೇಳಿದರು.

ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದಲ್ಲಿ ನವೀನವಾದ ಅತ್ಯಾಧುನಿಕ ಮಾದರಿಯಲ್ಲಿ ಬಸ್ ತಂಗುದಾಣಗಳನ್ನು ನಿರ್ಮಾಣ ಮಾಡಬೇಕೆಂಬ ಕನಸು ಕಂಡಿದ್ದು, ಅದರಂತೆ ಕೈಗಾರಿಕೆ ಮತ್ತು ವಾಣಿಜ್ಯೋದ್ಯಮದಲ್ಲಿ ಲೈಫ್‌ಲೈನ್ ಫೀಡ್ಸ್ ಮಾದರಿಯಾಗಿದೆ ಎಂದರು.

ಜನರ ಬೇಡಿಕೆಗನುಗುಣವಾಗಿ ಹತ್ತರಲ್ಲಿ ಮೂರನ್ನಾದರೂ ಶಾಶ್ವತವಾಗಿ ಜನಮಾನಸದಲ್ಲಿ ಉಳಿಯುವಂತೆ ಕಾಮಗಾರಿಗಳನ್ನು ಕೈಗೊಂಡು ಅಭಿಲಾಷೆ ಮತ್ತು ಸದುದ್ದೇಶ ಹೊಂದಿರುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ಕಣಿವೆ ರುದ್ರೇಶ್ವರ ದೇವಸ್ಥಾನದ ಸಮೀಪ, ಕಲ್ಯಾಣ ನಗರದಲ್ಲಿ, ಹೌಸಿಂಗ್ ಬೋರ್ಡ್‌ನಲ್ಲಿ ಮತ್ತು ದೊಡ್ಡ ಕುರುಬರಹಳ್ಳಿಯಲ್ಲಿ ಈಗಾಗಲೇ ಈ ನಾಲ್ಕು ಬಸ್ ತಂಗುದಾಣಗಳನ್ನು ನಿರ್ಮಾಣ ಮಾಡಲಾಗಿದೆ ಎಂದ ಅವರು, ನೂತನ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ದಂಟರಮಕ್ಕಿ ಬಡಾವಣೆಯಲ್ಲಿ ಮತ್ತು ಪಾಲಿಟೆಕ್ನಿಕ್ ಬಳಿ ನೂತನ ಅತ್ಯಾಧುನಿಕ ಬಸ್ ತಂಗುದಾಣ ನಿರ್ಮಾಣ ಮಾಡಲು ಗುದ್ದಲಿ ಪೂಜೆ ನೆರವೇರಿಸಲಾಗಿದೆ ಎಂದರು.

ವಿದೇಶ ಪ್ರವಾಸ ಸಂದರ್ಭದಲ್ಲಿ ಜರ್ಮನಿಯಲ್ಲಿ ಈ ರೀತಿಯ ಅತ್ಯಾಧುನಿಕ ಬಸ್ ತಂಗುದಾಣಗಳನ್ನು ನಿರ್ಮಿಸಿರುವುದನ್ನು ಗಮನಿಸಿ ಇದೇ ಮಾದರಿಯಲ್ಲಿ ಕ್ಷೇತ್ರದಲ್ಲಿಯೂ ಅಳವಡಿಸಿಕೊಳ್ಳಬೇಕೆಂದು ನಿರ್ಧರಿಸಿದ ಹಿನ್ನೆಲೆಯಲ್ಲಿ ಸಾರ್ವಜನಿಕರ ಅನುಕೂಲಕ್ಕೆ ತಕ್ಕಂತೆ ಬಸ್ ತಂಗುದಾಣ ನಿರ್ಮಿಸಲಾಗಿದೆ ಎಂದು ಹೇಳಿದರು.

ಕ್ಷೇತ್ರದಲ್ಲಿ ಮುಂದೆಯೂ ಪಕ್ಷಾತೀತವಾಗಿ ಜಾತ್ಯಾತೀತವಾಗಿ ನಡೆದುಕೊಳ್ಳಬೇಕೆಂದು ತೀರ್ಮಾನಿಸಿದ್ದು, ಜನರ ಅವಶ್ಯಕತೆಗೆ ತಕ್ಕಂತೆ ಸೌಲಭ್ಯ ಕಲ್ಪಿಸಲು ಮುಂದಾಗಿರುವುದಾಗಿ ಭರವಸೆ ನೀಡಿ-ದರು.

ಸುಮಾರು 20 ಕೋಟಿ ರೂ ವೆಚ್ಚದಲ್ಲಿ ಮುಂದಿನ ತಿಂಗಳು ಕೆಎಸ್‌ಆರ್‌ಟಿಸಿ ಸುಸಜ್ಜಿತ ಅತ್ಯಾಧುನಿಕ ಬಸ್ ನಿಲ್ದಾಣವನ್ನು ನಗರದಲ್ಲಿ ನಿರ್ಮಾಣ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಇವರುಗಳನ್ನು ಆಹ್ವಾನಿಸಿ ಶಂಕುಸ್ಥಾಪನೆ ನೆರವೇರಿಸುವುದಾಗಿ ಹೇಳಿದರು.

ಈ ಬಾರಿ ಅತೀ ಹೆಚ್ಚು ಮಳೆ ಬಿದ್ದ ಪರಿಣಾಮ ನಗರದಲ್ಲಿ ರಸ್ತೆಗಳು ಗುಂಡಿಗಳಿಂದ ಕೂಡಿದ್ದು, ಯುಜಿಡಿ ಮತ್ತು ಅಮೃತ್ ಯೋಜನೆಯಿಂದ ಹಾನಿಯಾಗಿರುವ ರಸ್ತೆಗಳನ್ನು ಡಿಸೆಂಬರ್‌ನಿಂದ ಡಾಂಬರೀಕರಣ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು.

ನಗರಸಭಾಧ್ಯಕ್ಷೆ ಶೀಲಾದಿನೇಶ್ ಮಾತನಾಡಿ, ಪ್ರಯಾಣಿಕರ ಅವಶ್ಯಕತೆಗೆ ತಕ್ಕಂತೆ ಬಸ್ ತಂಗುದಾಣ ನಿರ್ಮಾಣ ಮಾಡಿ ಇಂದು ಸಾರ್ವಜನಿಕರಿಗೆ ಲೋಕಾರ್ಪಣೆ ಮಾಡುತ್ತಿರುವ ಶಾಸಕ ಹೆಚ್.ಡಿ. ತಮ್ಮಯ್ಯ ಅವರಿಗೆ ಅಭಿನಂದಿಸುವುದಾಗಿ ಹೇಳಿದರು.

ನಗರಸಭೆ ಸದಸ್ಯ ಅರುಣ್ ಕುಮಾರ್ ಮಾತನಾಡಿ, ಕಲ್ಯಾಣ ನಗರದ ಟ್ರಸ್ಟ್ ಜೊತೆ ಸೇರಿ ವಾರ್ಡ್‌ನ್ನು ಸ್ವಚ್ಛತೆಗೊಳಿಸುತ್ತಿದ್ದೇವೆ ಜೊತೆಗೆ ಇದನ್ನು ಮಾದರಿ ವಾರ್ಡ್ ಆಗಿಸಲು ಗುರಿ ಹೊಂದಲಾಗಿದ್ದು, ಶಾಸಕರು ನಗರಸಭೆಯೊಂದಿಗೆ ಕೈಜೋಡಿಸುತ್ತಾರೆಂದು ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಎಲ್ಲಾ ವಾರ್ಡ್‌ಗಳಲ್ಲಿಯೂ ರಸ್ತೆಗಳ ಡಾಂಬರೀಕರಣ, ಬೀದಿನಾಯಿಗಳ ಉಪಟಳ ಸಮಸ್ಯೆ ಇದ್ದು, ಇದಕ್ಕೆ ಅಗತ್ಯ ಕ್ರಮ ಕೈಗೊಂಡು ಶಾಶ್ವತ ಪರಿಹಾರ ಕಂಡುಕೊಳ್ಳಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಿಡಿಎ ಅಧ್ಯಕ್ಷ ನಯಾಜ್ ಅಹಮದ್, ನಗರಸಭೆ ಉಪಾಧ್ಯಕ್ಷೆ ಲಲಿತಾನಾಯ್ಕ, ಲೈಫ್‌ಲೈನ್ ಫೀಡ್ಸ್ ಮಾಲೀಕರಾದ ಕಿಶೋರ್‌ಕುಮಾರ್ ಹೆಗ್ಡೆ, ಸದಸ್ಯರಾದ ಗುರುಮಲ್ಲಪ್ಪ, ಎ.ಸಿ. ಕುಮಾರ್, ನಾಮಿನಿ ಸದಸ್ಯ ಕೀರ್ತಿಶೇಠ್, ಆಯುಕ್ತರಾದ ಬಸವರಾಜ್ ಸಿಡಿಎ ಆಯುಕ್ತರಾದ ನಾಗರತ್ನ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ ಮಂಜೇಗೌಡ, ಪ್ರವೀಣ್, ಗಂಗಾಧರ್ ಮತ್ತಿತರರು ಉಪಸ್ಥಿತರಿದ್ದರು.

# 2005 ರ ಪೂರ್ವ ಅರಣ್ಯಭೂಮಿಯಲ್ಲಿ ಬದುಕು ಕಟ್ಟಿಕೊಂಡವರಿಗೆ ಭೂಮಿಯ ಹಕ್ಕು : ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

**ಬೆಂಗಳೂರು:** 2005ರ ಪೂರ್ವ ಅರಣ್ಯ ಭೂಮಿಯಲ್ಲಿ ಬದುಕು ಕಟ್ಟಿಕೊಂಡವರಿಗೆ ಭೂಮಿಯ ಹಕ್ಕು ನೀಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಉತ್ತರ ಕನ್ನಡ ಜಿಲ್ಲಾ ಅರಣ್ಯ ಭೂಮಿ ಸಾಗುವಳಿದಾರರ ಹೋರಾಟ ಸಮಿತಿಯ ಅಧ್ಯಕ್ಷ ಚಂದ್ರಕಾಂತ ಕೊಚರೇಕರ, ಜಿ.ಎಂ.ಶೆಟ್ಟಿ, ಪಿ.ಟಿ.ನಾಯ್ಕ, ಗಣೇಶ ನಾಯ್ಕ ನೇತೃತ್ವದ ಹೋರಾಟ ಸಮಿತಿಯ ನಿಯೋಗವು ಇಂದು ಜಿಲ್ಲಾ ಉಸ್ತುವಾರಿ ಸಚಿವರ ಉಪಸ್ಥಿತಿಯಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಅರಣ್ಯಹಕ್ಕು ಅರ್ಜಿಗಳನ್ನು ಸಾರಾ ಸಗಟು ತಿರಸ್ಕರಿಸಿದ ಪರಿಣಾಮದಿಂದ ಪ್ರಸ್ತುತ ಎದುರಾಗಿರುವ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದರು. ಈ ಸಂದರ್ಭ ದಲ್ಲಿ ಸಿದ್ದರಾಮಯ್ಯ ಅವರು, ಅರಣ್ಯ ಹಕ್ಕು ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಗೊಳಿಸ ಲಾಗುವುದು. ಅರ್ಹರು ಭೂಮಿ ಹಕ್ಕಿನಿಂದ ವಂಚಿತರಾಗದಂತೆ ಜಿಲ್ಲಾಡಳಿತಕ್ಕೆ ಸೂಚಿಸಲಾಗು ವುದು ಎಂದು ಆಶ್ವಾಸನೆ ನೀಡಿದ್ದಾರೆ. ಅರಣ್ಯ ಭೂಮಿಯಲ್ಲಿನ ಬಗರ್ ಹುಕುಂ ಸಾಗುವಳಿಗೆ ಸಂಬಂಧಿಸಿ 1980ರ ಅರಣ್ಯ ಸಂರಕ್ಷಣಾ ಕಾಯ್ದೆಯಡಿ ಮರುಸಮೀಕ್ಷೆ ನಡೆಸುವುದು ಸೇರಿದಂತೆ, ಅರಣ್ಯ ಹಕ್ಕುಕಾಯ್ದೆಯ ಪರಿಣಾಮಕಾರಿ ಅನುಷ್ಠಾನದಿಂದ ಜಿಲ್ಲೆಯ ಜನರಿಗೆ ಭೂಮಿಯ ಹಕ್ಕು ಕೊಡಿಸಬೇಕೆಂದು ನಿಯೋಗ ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿತು. ರಾಜ್ಯದಲ್ಲಿ ಅರಣ್ಯ ಹಕ್ಕು ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಸರಕಾರದ ಮುಂದೆ ವಿವಿಧ ರಚನಾತ್ಮಕ ಸಲಹೆಗಳನ್ನು ನಮ್ಮ ಹೋರಾಟ ಸಮಿತಿ ಸರ್ಕಾರದ ಮುಂದೆ ಮಂಡಿಸಿತು ಎಂದು ಚಂದ್ರಕಾಂತ ಕೊಚರೇಕರ ತಿಳಿಸಿದರು.



ನಿಯೋಗದ ಜೊತೆ ಮಾತನಾಡಿದ ಸಿದ್ದರಾಮಯ್ಯ, ಅರಣ್ಯಭೂಮಿ ಸಾಗುವಳಿದಾರರ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿದ್ದು ವಸತಿ ಮತ್ತು ಜೀವನೋಪಾಯಕ್ಕೆ ಅರಣ್ಯ ಭೂಮಿಯನ್ನು ಅವಲಂಬಿಸಿರುವ ಬಡ ಜನರು ಆತಂಕ ಪಡುವ ಅಗತ್ಯವಿಲ್ಲ ಸ್ಪಷ್ಟಪಡಿಸಿದ್ದಾರೆ ಎಂದು ಅವರು ತಿಳಿಸಿದರು.

ಅರಣ್ಯ ಭೂಮಿಯಲ್ಲಿನ ಒತ್ತುವರಿಯ ನೈಜ ಸ್ಥಿತಿಯ ಕುರಿತು ಅರಣ್ಯ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳಿಂದ ಜಂಟಿ ಸ್ಥಳ ತನಿಖೆ ನಡೆಸಿ ಉಪವಿಭಾಗೀಯ ಸಮಿತಿಗೆ ವರದಿ ಸಲ್ಲಿಸಬೇಕು. ಸ್ಥಳ ಮಹಜರು ದೃಢೀಕರಣ ಪತ್ರದ ದಾಖಲೆ ಪೂರೈಸುವ ಮೂಲಕ ಅರಣ್ಯವಾಸಿಗಳು ಅರಣ್ಯ ಹಕ್ಕಿನಿಂದ ವಂಚಿತರಾಗದಂತೆ ಕ್ರಮ ವಹಿಸುವಂತೆ ಮುಖ್ಯಮಂತ್ರಿ ಅವರು ಮುಖ್ಯಕಾರ್ಯದರ್ಶಿಗಳಿಗೆ ಸೂಚಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳವೈದ್ಯ ಉಪಸ್ಥಿತರಿದ್ದು, ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನ ಸೆಳೆಯುವಲ್ಲಿ ಸಹಕರಿಸಿದರು. ಬಳಿಕ ನಿಯೋಗ ರಾಜ್ಯದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ನಿರ್ದೇಶಕ ಟಿ.ಯೋಗೇಶ ಅವರನ್ನು ಸಹ ಭೇಟಿಮಾಡಿ, ಸುಪ್ರೀಂ ಕೋರ್ಟಿಗೆ ಅರಣ್ಯವಾಸಿಗಳ ಪರ ಸರ್ಕಾರದಿಂದ ಅಗತ್ಯ ದೃಢೀಕರಣ ಸಲ್ಲಿಸುವ ಕುರಿತು ಕೋರಲಾಯಿತು. ನಿರ್ದೇಶಕರ ಸ್ಪಂದನೆ ಉತ್ತಮವಾಗಿತ್ತು. ಅವರ ಪ್ರಕಾರ ನಾವು ಮಂಡಿಸಿದ ಬೇಡಿಕೆಯನ್ನು ಸರ್ಕಾರದ ಮುಖ್ಯಕಾರ್ಯದರ್ಶಿಗಳು ಪರಿಗಣಿಸಿ, ಉನ್ನತಾಧಿಕಾರ ಸಮಿತಿಯ ಸಭೆ ಕರೆದು ಸೂಕ್ತ ನಿರ್ಣಯ ತೆಗೆದುಕೊಂಡಿರುವ ವಿಚಾರವನ್ನು ನಮಗೆ ತಿಳಿಸಿದ್ದಾರೆ ಎಂದರು.

## ದಲಿತ ಸಚಿವರದ್ದು ರಾಜಕೀಯ ಸಭೆ ಅಲ್ಲ : ಡಾ. ಜಿ.ಪರಮೇಶ್ವರ್

**ಬೆಂಗಳೂರು:** ದಲಿತ ಸಚಿವರುಗಳು ಯಾವುದೇ ರಾಜಕೀಯ ಸಭೆ ನಡೆಸಿಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದರು.



ಬೆಂಗಳೂರಿನಲ್ಲಿ ಸಚಿವರಾದ ಮಹದೇವಪ್ಪ, ಸತೀಶ್ ಜಾರಕಿಹೊಳಿ ಜತೆ ನಡೆಸಿದ ಸಭೆಯ ಬಗ್ಗೆ ಬೆಂಗಳೂರಿನಲ್ಲಿಂದು ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಈ ಸಭೆಗೆ ಯಾವುದೇ ಮಹತ್ವ ಇಲ್ಲ. ಮಾಮೂಲಿನಂತೆ ನಾನು ಸತೀಶ್ ಜಾರಕಿಹೊಳಿ, ಮಹದೇವಪ್ಪ ಸಭೆ ಸೇರಿದ್ದವು. ಇದೇನು ಮೊದಲ ಬಾರಿ ಅಲ್ಲ, ಇದು ರಾಜಕೀಯ ಸಭೆಯೂ ಅಲ್ಲ ಎಂದರು.

ನಿನ್ನೆ ಸಚಿವ ಸಂಪುಟ ಸಭೆ ಇತ್ತು. ಕೆಲವು ಸೂಕ್ಷ್ಮ ವಿಚಾರಗಳಿದ್ದವು. ಹಾಗಾಗಿ ಆ ಬಗ್ಗೆ ಮಾತನಾಡಿಕೊಂಡು ತಿಂಡಿ ತಿಂದು ಹೋಗೋಣ ಎಂದು ಸಚಿವ ಸಂಪುಟ ಸಭೆಗೂ ಮುನ್ನ ನಾವು ಮೂವರು ಸೇರಿದ್ದೆವು. ಇದಕ್ಕೆ ವಿಶೇಷ ಅರ್ಥ ಕಲ್ಪಿಸುವ ಅಗತ್ಯವಿಲ್ಲ. ಹಿಂದೆಯೂ ಸತೀಶ್ ಜಾರಕಿಹೊಳಿ, ಮಹದೇವಪ್ಪ ಮನೆಯಲ್ಲಿ ಅನೇಕ ಬಾರಿ ಭೇಟಿ ಮಾಡಿ ಚರ್ಚಿಸಿದ್ದೇವೆ. ಇದೇನು ಹೊಸದಲ್ಲ ಎಂದರು.

ದಲಿತ ಸಚಿವರುಗಳೆಲ್ಲಾ ಸೇರಿ ಹೆಚ್ಚುವರಿ ಡಿಸಿಎಂ ಬೇಕು ಎಂಬ ಬೇಡಿಕೆ ಇಡುತ್ತೀರಾ ಎಂಬ ಪ್ರಶ್ನೆಗೆ ಇದನ್ನು ಯಾರು ಹೇಳಿದರು, ನಾವ್ಯಾರೂ ಆ ಬಗ್ಗೆ ಚರ್ಚೆ ಮಾಡಿಲ್ಲ ಎಂದು ಹೇಳಿದರು.

# ಪತ್ರಿಕಾಗೋಷ್ಠಿಗೆ ಮಹಿಳಾ ಪತ್ರಕರ್ತರಿಗೆ ಅವಕಾಶ ಕಲ್ಪಿಸಿದ ಅಫ್ಘಾನಿಸ್ತಾನದ ವಿದೇಶಾಂಗ ಸಚಿವೆ

**ನವದೆಹಲಿ:** ಮಹಿಳಾ ಪತ್ರಕರ್ತರನ್ನು ಮಾಧ್ಯಮಸಂವಾದದಿಂದ ಹೊರಗಿಡಲಾಗಿದೆ ಎಂದು ಪ್ರತಿರೋಧ ಎದುರಿಸಿದ ಒಂದು ದಿನದ ನಂತರ, ಅಫ್ಘಾನಿಸ್ತಾನದ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಭಾನುವಾರ ಮತ್ತೊಂದು ಪತ್ರಿಕಾಗೋಷ್ಠಿಯನ್ನು ಘೋಷಿಸಿದರು, ಈ ಬಾರಿ ಮಹಿಳಾ ವರದಿಗಾರರನ್ನು ಆಹ್ವಾನಿಸಲಾಗಿದೆ

ಆರು ದಿನಗಳ ಭಾರತ ಪ್ರವಾಸದಲ್ಲಿರುವ ಮುತ್ತಕಿ, ಅಫ್ಘಾನ್ ರಾಯಭಾರ ಕಚೇರಿಯಲ್ಲಿ ತಮ್ಮ ಹಿಂದಿನ ಪತ್ರಿಕಾಗೋಷ್ಠಿಯಲ್ಲಿ ಮಹಿಳಾ ಪತ್ರಕರ್ತರನ್ನು ಹಾಜರಾಗದಂತೆ ನಿಷೇಧಿಸಿದ ನಂತರ ಶುಕ್ರವಾರ ಆಕ್ರೋಶಕ್ಕೆ ಕಾರಣ-ರಾಗಿದ್ದರು. ಈ ಘಟನೆಯು ಭಾರತದಲ್ಲಿ ತೀಕ್ಷ್ಣವಾದ ರಾಜಕೀಯ ಪ್ರತಿಕ್ರಿಯೆಗಳನ್ನು ಹುಟ್ಟುಹಾಕಿತು, ವಿಮರ್ಶಕರು ಇದನ್ನು ಲಿಂಗ ತಾರತಮ್ಯದ ಪ್ರದರ್ಶನ ಎಂದು ಕರೆದರು. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಈ ವಿಷಯದ ಬಗ್ಗೆ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



"ಮಿಸ್ಟರ್ ಮೋದಿ, ನೀವು ಮಹಿಳಾ ಪತ್ರಕರ್ತರನ್ನು ಸಾರ್ವಜನಿಕ ವೇದಿಕೆಯಿಂದ ಹೊರಗಿಡಲು ಅನುಮತಿಸಿದಾಗ, ನೀವು ಭಾರತದ ಪ್ರತಿಯೊಬ್ಬ ಮಹಿಳೆಗೆ ಹೇಳುತ್ತಿದ್ದೀರಿ ನೀವು ಅವರ ಪರವಾಗಿ ನಿಲ್ಲಲು ತುಂಬಾ ದುರ್ಬಲರು" ಎಂದು ಅವರು ಹೇಳಿದರು.

"ನಮ್ಮ ದೇಶದಲ್ಲಿ, ಮಹಿಳೆಯರಿಗೆ ಪ್ರತಿಯೊಂದು ಸ್ಥಳದಲ್ಲೂ ಸಮಾನ ಭಾಗವಹಿಸುವ ಹಕ್ಕಿದೆ. ಅಂತಹ ತಾರತಮ್ಯದ ನಡುವೆಯೂ ನಿಮ್ಮ ಮೌನವು ನಾರಿ ಶಕ್ತಿಯ ಮೇಲಿನ ನಿಮ್ಮ ಘೋಷಣೆಗಳ ಖಾಲಿತನವನ್ನು ಬಹಿರಂಗಪಡಿಸುತ್ತದೆ" ಎಂದು ಅವರು ಹೇಳಿದರು.

ಏತನ್ಮಧ್ಯೆ, ಅಮೀರ್ ಖಾನ್ ಮುತ್ತಕಿ ಅವರು ನವದೆಹಲಿಯಲ್ಲಿ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಯಾವುದೇ ಪಾತ್ರವಿಲ್ಲ ಎಂದು ವಿದೇಶಾಂಗ ಸಚಿವಾಲಯ (ಎಂಇಎ) ಸ್ಪಷ್ಟಪಡಿಸಿದೆ.

## ಯುಪಿಎ ಸರ್ಕಾರದಿಂದ ಕೃಷಿ ವಲಯ ನಿರ್ಲಕ್ಷ್ಯ: ನರೇಂದ್ರ ಮೋದಿ

**ನವದೆಹಲಿ:** ದೇಶದಲ್ಲಿ 2004 ರಿಂದ 2014 ರವರೆಗೆ ಅಧಿಕಾರದಲ್ಲಿದ್ದ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ಕೃಷಿ ವಲಯವನ್ನು ನಿರ್ಲಕ್ಷಿಸಿತ್ತು ಎಂದು ಪ್ರಧಾನಿ ನರೇಂದ್ರ ಮೋದಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ -ಎನ್‌ಡಿಎ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದಾಗಿನಿಂದ, ಕಳೆದ 11 ವರ್ಷಗಳಲ್ಲಿ ರೈತರನ್ನು ಬಲಪಡಿಸಲು ಮತ್ತು ಸ್ವಾವಲಂಬಿಗಳನ್ನಾಗಿ ಮಾಡಲು ಹಲವಾರು ಕ್ರಮ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ದೆಹಲಿಯ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯಲ್ಲಿ ನಡೆದ ವಿಶೇಷ ಕೃಷಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು



ಕಳೆದ ತಿಂಗಳು ಜಾರಿಗೆ ಬಂದ ಜಿಎಸ್‌ಟಿ ಸುಧಾರಣೆ ರೈತರಿಗೆ ವರದಾನವಾಗಿದೆ ಎಂದಿದ್ದಾರೆ. ರೈತರಿಗೆ ಮತ್ತು ದೇಶದ ಗ್ರಾಮೀಣ ವಲಯಕ್ಕೆ ಮತ್ತಷ್ಟು ಪ್ರಯೋಜನವಾಗಿದೆ .ರೈತರ ಆದಾಯವನ್ನು ಹೆಚ್ಚಿಸುವ ಮತ್ತು ಅವರ ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡುವ ಗುರಿಯನ್ನು ತಮ್ಮ ಸರ್ಕಾರ ಹೊಂದಿದೆ ಎಂದು ಅವರು ಹೇಳಿದ್ದಾರೆ. ಯುಪಿಎ ಸರ್ಕಾರದ 10 ವರ್ಷಗಳಲ್ಲಿ 5 ಲಕ್ಷ ಕೋಟಿ ರೂ. ಸಬ್ಸಿಡಿಗೆ ಹೋಲಿಸಿದರೆ ಎನ್‌ಡಿಎ ಕಳೆದ 10 ವರ್ಷಗಳಲ್ಲಿ ರಸಗೊಬ್ಬರಗಳಿಗೆ 13 ಲಕ್ಷ ಕೋಟಿ ರೂ. ಸಬ್ಸಿಡಿ ನೀಡಿದೆ ಎಂದು ಅವರು ತಿಳಿಸಿದ್ದಾರೆ. ಕಾಲ ಬದಲಾದಂತೆ ಕೃಷಿಗೆ ಸರ್ಕಾರದ ಬೆಂಬಲ ಸಿಗುವುದು ಬಹಳ ಮುಖ್ಯ. ದುರದೃಷ್ಟವಶಾತ್, ಹಿಂದಿನ ಸರ್ಕಾರಗಳು ಕೃಷಿಯನ್ನು ಕೈಬಿಟ್ಟವು. ಸರ್ಕಾರಕ್ಕೆ ಕೃಷಿಯ ಬಗ್ಗೆ ಯಾವುದೇ ದೃಷ್ಟಿಕೋನ ಅಥವಾ ಚಿಂತನೆ ಇರಲಿಲ್ಲ. ಕೃಷಿಗೆ ಸಂಬಂಧಿಸಿದ ವಿವಿಧ ಸರ್ಕಾರಿ ಇಲಾಖೆಗಳು ತಮ್ಮದೇ ಆದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದವು, ಇದು ಭಾರತದ ಕೃಷಿ ವ್ಯವಸ್ಥೆಯನ್ನು ನಿರಂತರವಾಗಿ ದುರ್ಬಲಗೊಳಿಸಿದ್ದವು ಎಂದು ಕಾಂಗ್ರೆಸ್ ವಿರುದ್ಧ ಹರಿಹಾಯ್ದಿದ್ದಾರೆ.

"ಹಿಂದಿನ ಸರ್ಕಾರಗಳು ಕೃಷಿಯ ಬಗ್ಗೆ ಹೊಂದಿದ್ದ ನಿರ್ಲಕ್ಷ್ಯ ಮನೋಭಾವವನ್ನು ಎನ್ ಡಿಎ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಬದಲಾಯಿಸಿದ್ದೇವೆ. ಬೀಜಗಳಿಂದ ಮಾರುಕಟ್ಟೆಯವರೆಗೆ ರೈತರ ಅನುಕೂಲಕ್ಕಾಗಿ ಲೆಕ್ಕವಿಲ್ಲದಷ್ಟು ಸುಧಾರಣೆಗಳನ್ನು ಜಾರಿ ಮಾಡಿದ್ದೇವೆ ಎಂದು ತಿಳಿಸಿದ್ದಾರೆ.

## ಅಕ್ರಮ ಚಟುವಟಿಕೆಗೆ ಕಡಿವಾಣ, ಮನೆ ಮನೆಗೆ ಪೊಲೀಸ್

**ಶಿಡ್ಲಘಟ್ಟ:** ನಿಮ್ಮ ಬುದ್ಧಿವಂತ ಮಕ್ಕಳೆ ಇಂದು ಮೊಬೈಲ್ ಫೋನ್‌ಗಳನ್ನು ಅತಿಯಾಗಿ ಬಳಸುತ್ತಿರುವುದರಿಂದ ದಾರಿ ತಪ್ಪುತ್ತಿದ್ದಾರೆ ಇದರ ಬಗ್ಗೆ ಪೋಷಕರು ಜಾಗರೂಕರಾಗಬೇಕು ಎಂದು ಎಚ್ಚರಿಕೆ ನೀಡಿದರು. ಆನ್ ಲೈನ್ ಬೆಟ್ಟಿಂಗ್ ಹಾಗೂ ಮಾದಕವಸ್ತುಗಳ ಪ್ರಭಾವದಿಂದ ಮಕ್ಕಳು ದಾರಿ ತಪ್ಪುತ್ತಿರುವುದರಿಂದ ಅವರಿಗೆ ಉತ್ತಮ ವಿದ್ಯಾಭ್ಯಾಸ ಹಾಗೂ ನೈತಿಕ ಮಾರ್ಗದರ್ಶನ ನೀಡಬೇಕೆಂದು ನಗರ ಪೊಲೀಸ್ ಠಾಣೆ ಪಿಎಸ್‌ಐ ವೇಣುಗೋಪಾಲ್ ಜಾಗೃತಿ ಮೂಡಿಸಿದರು.

ನಗರದ 11ನೇ ವಾರ್ಡ್‌ನಲ್ಲಿ ಸಾರ್ವಜನಿಕರ ಸಾಮಾಜಿಕ ಭದ್ರತಾ ವಿಚಾರದಲ್ಲಿ ಎಸ್ ಪಿ ಕುಶಾಲ್ ಚೌಕ್ಸೆ, ಡಿವೈ ಎಸ್ ಪಿ ಮುರಳೀಧರ್ ಮತ್ತು ಶಿಡ್ಲಘಟ್ಟ ವೃತ್ತ ನಿರೀಕ್ಷಕ ಶ್ರೀನಿವಾಸ್ ನೇತೃತ್ವದಲ್ಲಿ ಅನೇಕ ಜಾಗ್ರತೆಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಅದರ ಅಡಿಯಲ್ಲಿ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಮನೆ ಮನೆಗೆ ಪೊಲೀಸ್ ಎಂಬ ಉತ್ತಮ ಕಾರ್ಯಕ್ರಮ ಆಯೋಜಿಸಲಾಯಿತು. ಈ ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳು, ಪೌರಾಯುಕ್ತೆ ಹಾಗೂ ವಾರ್ಡ್ ಸದಸ್ಯರು ಭಾಗವಹಿಸಿದರು.

ಮಹಿಳೆಯರು ರಂಗೋಲಿ ಹಾಕುವಾಗ ಅಥವಾ ಮಾರುಕಟ್ಟೆಗೆ ತೆರಳುವ ಸಂದರ್ಭಗಳಲ್ಲಿ ವಡವೆ ಕಳ್ಳತನದ ಪ್ರಕರಣಗಳು ಹೆಚ್ಚಾಗಿರುವುದರಿಂದ ಎಚ್ಚರಿಕೆ ವಹಿಸಬೇಕು ಹಾಗೂ ಹೆಣ್ಣು ಮಕ್ಕಳನ್ನು ಚುಡಾಯಿಸುವುದು, ಅಪ್ರಾಪ್ತ ವಯಸ್ಸಿನಲ್ಲಿ ಮದುವೆ ಮಾಡುವುದು, ಡ್ರಗ್ಸ್ ಬಳಕೆ ಇತ್ಯಾದಿ ಅಪರಾಧಗಳು ನಡೆದ-ರೆ ಅಥವಾ ಕಂಡು ಬಂದರೆ ತಕ್ಷಣ 112 ಗೆ ಕರೆ ಮಾಡಿ ಅಥವಾ ನೇರವಾಗಿ ನಮಗೆ ಕರೆ ಮಾಡಲು ಸೂಚಿಸಿದರು.

ನಗರಸಭೆ ಪೌರಾಯುಕ್ತೆ ಅಮೃತ ಅವರು ಮಾತನಾಡಿ, ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಾಮರಸ್ಯದಿಂದ ಇರಬೇಕು ಎಂದು ಮನವಿ ಮಾಡಿದರು. ಸರ್ಕಾರದಿಂದ ಆಯೋಜಿಸಲಾದ ಈ ಕಾರ್ಯಕ್ರಮಗಳಲ್ಲಿ ಅಧಿಕಾರಿಗಳು ಮತ್ತು ಸಾರ್ವಜನಿಕರ ಸಹಭಾಗಿತ್ವ ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು.

# ಮಾದಕ ವಸ್ತುಗಳ ಕಡಿವಾಣ ಹಾಕುವಲ್ಲಿ ಪೊಲೀಸರ ಪ್ರಮುಖ ಪಾತ್ರ

**ಚಿಕ್ಕಮಗಳೂರು, ಅ 12:** ಸಮಾಜಕ್ಕೆ ಮಾರಕವಾಗಿರುವ ಮಾದಕ ವಸ್ತುಗಳ ಕಡಿವಾಣ ಹಾ ಕುವಲ್ಲಿ ಪೊಲೀಸ್ ಸಿಬ್ಬಂದಿಗಳ ಪಾತ್ರ ಪ್ರಮುಖವಾಗಿದೆ. ವಿದ್ಯಾರ್ಥಿಗಳು ಹಾಗೂ ಯುವಜನತೆ ವ್ಯಸನದ ಚಟಕ್ಕೆ ಬಲಿಯಾಗದೇ ರಕ್ಷಿಸುವ ಕಾರ್ಯ ಮಾಡಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಾಧೀಶ ವಿ.ಹನುಮಂತಪ್ಪ ಹೇಳಿದರು.

ನಗರದ ಶ್ರೀ ಶಕ್ತಿ ಮದ್ಯವ್ಯಸನಿಗಳ ಸಮಗ್ರ ಪುನರ್ ವಸತಿ ಕೇಂದ್ರ, ಜಿಲ್ಲಾ ಪೊಲೀಸ್ ಇಲಾಖೆ, ರಾಜ್ಯ ಮಟ್ಟದ ಸಮನ್ವಯ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ಧ ಪೊಲೀಸ್ ಸಿಬ್ಬಂದಿಗಳಿಗೆ ಮಾದಕ ವಸ್ತುವಿನ ನಿಯಂತ್ರಣ ಕುರಿತು ಒಂದು ದಿನದ ಜಾಗೃತಿ ಕಾರ್ಯಕ್ರಮವನ್ನು ಶನಿವಾರ ಉದ್ಘಾಟಿಸಿ ಅವರು ಮಾ ತನಾಡಿದರು.

ಸಮಾಜದಿಂದ ಮಾದಕ ವಸ್ತುಗಳಿಗೆ ಕಡಿವಾಣಕ್ಕೆ ವಿವಿಧ ಸಮಿತಿಗಳನ್ನು ರಚಿಸಿ ಮಾರ್ಗಸೂಚಿ ನೀಡ ಲಾಗುತ್ತಿದೆ. ಈ ನಡುವೆ ದೇಶದ ನಾಗರೀಕರು ಹಾಗೂ ವ್ಯಸನಿಗಳ ಸಂಪರ್ಕ ಹೊಂದಿರುವ ವ್ಯಕ್ತಿಗಳು ದುಶ್ಚಟಕ್ಕೆ ಒಳಗಾಗಿರುವ ವ್ಯಕ್ತಿಗಳನ್ನು ನಶಮುಕ್ತಗೊಳಿಸಲು ವ್ಯಸನಿಗಳನ್ನು ಚಿಕಿತ್ಸಾ ಕೇಂದ್ರಗಳಲ್ಲಿ ಕಳುಹಿಸುವ ವ್ಯವಸ್ಥೆ ಮಾಡಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಪ್ರದೇಶದ ಪೆಟ್ಟಿಗೆ ಅಂಗಡಿಗಳಲ್ಲಿ ನಶೆ ಪದಾರ್ಥಗಳು ಸಲೀಸಾಗಿ ಲಭ್ಯವಾಗುತ್ತಿದೆ. ಈ ಬಗ್ಗೆ ಸರ್ಕಾರ ಹಾಗೂ ಕಾನೂನು ಸೇವೆ ಪ್ರಾಧಿಕಾರ ಎಚ್ಚರಿಕೆ ವಹಿಸುವುದು, ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಂಡು ಯುವಜನತೆಯಲ್ಲಿ ಅರಿವು ಮೂಡಿಸುತ್ತಿದ್ದು ಎಲ್ಲರೂ ಕೈಜೋಡಿಸಿದಾಗ ಮಾತ್ರ ಶಾಶ್ವತವಾಗಿ ವ್ಯಸನದ ವ್ಯವಸ್ಥೆ ದೂರಗೊಳಿಸಬಹುದು ಎಂದರು.




ವ್ಯಸನಿಗಳ ನಿಯಂತ್ರಿಸಲು ಅರಿವಿನ ಜೊತೆಗೆ ಜ್ಞಾನದ ಅವಶ್ಯವಿದೆ. ಆ ನಿಟ್ಟಿನಲ್ಲಿ ಬ್ರಹ್ಮಕುಮಾರೀಸ್ ಸಂ ಸ್ಥೆ ಸಕ್ರಿಯವಾಗಿ ತೊಡಗಿಸಿಕೊಂಡು ವ್ಯಸನಿಗಳನ್ನು ನಾಡಿನ ಸತ್ಪ್ರಜೆಗಳಾಗಿಸಲು ಮುಂದಾಗಿರುವುದು ಹೆಮ್ಮೆ ಯ ಸಂಗತಿ. ಜೊತೆಗೆ ಪೊಲೀಸ್ ಇಲಾಖೆ ನಿತ್ಯವು ಈ ರೀತಿಯ ಪ್ರಕರಣಗಳು ದಾಖಲಾಗುತ್ತಿದ್ದು, ವ್ಯಸನಿಗಳ ಮನಪರಿವರ್ತಿಸಲು ಪ್ರೇರೇಪಿಸಬೇಕು ಎಂದು ಸಲಹೆ ಮಾಡಿದರು.

ಉಪ ಪೊಲೀಸ್ ಅಧೀಕ್ಷಕ ತಿಪ್ಪೇಸ್ವಾಮಿ ಮಾತನಾಡಿ ಮಾದಕ ವಸ್ತುಗಳ ಶಾರೀರಿಕ ಹಾಗೂ ದೈಹಿಕ ವಾಗಿ ಆರೋಗ್ಯ ಹದೆಗೆಡಿಸುತ್ತದೆ. ಇದರಿಂದ ದೇಶದಲ್ಲಿ ಪ್ರತಿದಿನ ಸುಮಾರು 10 ಮಂದಿ ವ್ಯಸನದ ಚಟಕ್ಕೆ ಬಲಿಯಾಗುತ್ತಿದ್ದಾರೆ. ಕಳೆದ 2018-19ನೇ ಸಾಲಿನಲ್ಲಿ ಲಕ್ಷಾಂತರ ಯುವಸಮೂಹ ದುಶ್ಚಟಕ್ಕೆ ಬಲಿಯಾಗಿ ಜೀವ ಕಳೆದುಕೊಳ್ಳುತ್ತಿದ್ದು ಪೊಲೀಸ್ ಸೇರಿದಂತೆ ನಾಗರೀಕರು ಒಟ್ಟಾಗಿ ಈ ವಿರುದ್ಧ ಕಾರ್ಯಪ್ರವೃತ್ತರಾಗ ಬೇಕು ಎಂದರು.

ರಾಜ್ಯಮಟ್ಟದ ಸಮನ್ವಯ ಸಂಸ್ಥೆ ಕೋಆಡಿನೇಟರ್ ಶೈಲಶ್ರೀ ಪ್ರಾಸ್ತಾವಿಕವಾಗಿ ಮಾತನಾಡಿ ಯುವಜನ ತೆಯನ್ನು ನಶಮುಕ್ತಗೊಳಿಸಲು ಕೇಂದ್ರ ಸರ್ಕಾರ ನಶಮುಕ್ತ ಭಾರತ ಅಭಿಯಾನ ಜಾರಿಗೊಳಿಸಿದೆ. ಆಯಾ ಜಿಲ್ಲೆಯ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಈ ಅಭಿಯಾನವು ನಡೆಯುತ್ತಿದ್ದು ಎಸ್ಪಿ ಸೇರಿದಂತೆ ಹಾಗೂ ಸ್ವಯಂ ಸೇವಕರು ಈ ಅಭಿಯಾನದಲ್ಲಿ ಮುಖ್ಯಭೂಮಿಕೆ ನಿರ್ವಹಿಸುತ್ತಿದ್ದಾರೆ ಎಂದರು.

ಶ್ರೀ ಶಕ್ತಿ ಮದ್ಯವ್ಯಸನಿಗಳ ಸಮಗ್ರ ಪುನರ್ ವಸತಿ ಕೇಂದ್ರದ ಯೋಜನಾ ನಿರ್ದೇಶಕ ಡಾ॥ ಅನೀತ್ ಕುಮಾರ್ ಮಾತನಾಡಿ ಮದ್ಯ ಹಾಗೂ ಮಾದಕ ವಸ್ತುಗಳಿಂದ ಬಳಲುತ್ತಿರುವ ಯುವಸಮೂಹವನ್ನು ಹತೋಟಿಗೆ ತರಲು ಎಲ್ಲರೂ ಮುಂದಾದರೆ ಮಾತ್ರ ಸ್ವಾಸ್ಥ್ಯ ಸಮಾಜಕ್ಕೆ ನಾಂದಿಯಾಡಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯಮಟ್ಟದ ಸಮನ್ವಯ ಸಂಸ್ಥೆ ರಾಜ್ಯ ಸಂಪನ್ಮೂಲ ವ್ಯಕ್ತಿ ಬಾಲಕೃಷ್ಣರಾಜು, ರೋಟರಿ ಅಧ್ಯಕ್ಷ ಎನ್.ಪಿ.ಲಿಖಿತ್, ಟೌನ್ ಮಹಿಳಾ ಸಮಾಜದ ಅಧ್ಯಕ್ಷೆ ನೇತ್ರ ವೆಂಕಟೇಶ್, ಪ್ರಜಾಪಿತ ಬ್ರಹ್ಮಕುಮಾರಿಸ್ ಜಿಲ್ಲಾ ಸಂಚಾಲಕಿ ಬಿ.ಕೆ.ಭಾಗ್ಯಕ್ಕ, ಶ್ರೀ ಶಕ್ತಿ ಮದ್ಯವ್ಯಸನಿಗಳ ಸಮಗ್ರ ಪುನರ್ ವಸತಿ ಕೇಂದ್ರ ವ್ಯವಸ್ಥಾಪಕ ಮಂಜುನಾಥ್ ಹಾಗೂ ಪೊಲೀಸ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**